ಸಂಪುಟ: 06 ಸಂಚಿಕೆ: 115 ಪುಟಗಳು: 08 ಬುಧವಾರ 08 ಜುಲೈ 2026
www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com
ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

'ಋಣ ಇದ್ದರೆ ಬೆಟ್ಟದ ತುದಿಯಲ್ಲಿರುವ ಹಣ್ಣು ಕೂಡ ನಮ್ಮ ಪಾಲಾಗುತ್ತದೆ, ಋಣ ಇಲ್ಲದೆ ಹೋದರೆ ಅಂಗೈಯಲ್ಲಿರುವ ಹಣ್ಣು ಕೂಡ ಜಾರಿ ಬಿದ್ದು ಅನ್ಯರ ಪಲಾಗುತ್ತದೆ
-ಜೀವನ-

# ನಿರ್ಲಕ್ಷ್ಯ ಬಿಡಿ ಸಾಲ ಮನ್ನಾ ಮಾಡಿ

ಮುಖ್ಯಮಂತ್ರಿ ಆದ ಬಳಿಕ ಮೊದಲ ಬಾರಿಗೆ ಡಿ. ಕೆ. ಶಿವಕುಮಾರ್ ಕಲಬುರಗಿ ಜಿಲ್ಲೆಗೆ ಭೇಟಿ ನೀಡಿದ್ದು, ಕಲ್ಯಾಣ ಕರ್ನಾಟಕ ಭಾಗದಲ್ಲಿ ಮುಂಗಾರು ಮಳೆ ವಿಳಂಬದಿಂದ ಉಂಟಾಗಿರುವ ಬರ ಪರಿಸ್ಥಿತಿಯ ಅಧ್ಯಯನ ನಡೆಸುತ್ತಿದ್ದಾರೆ. ಸಮಗ್ರ ಪರಿಶೀಲನೆ ಬಳಿಕ ಬರ ಪರಿಸ್ಥಿತಿಗೆ ಸಂಬಂಧಿಸಿದಂತೆ ಸೂಕ್ತ ಕ್ರಮ ಕೈಗೊಳ್ಳುವುದಾಗಿ ಸಿಎಂ ಭರವಸೆ ನೀಡಿದ್ದಾರೆ. ಬೀದರ್ ಜಿಲ್ಲಾ ಪ್ರವಾಸ ಮುಗಿಸಿ ರಾತ್ರಿ ಕಲಬುರಗಿ ನಗರಕ್ಕೆ ಆಗಮಿಸಿದ ಮುಖ್ಯಮಂತ್ರಿ ಡಿಕೆಶಿ ಅವರು ಇಲ್ಲಿ ವಾಸ್ತವ್ಯ ಹೂಡಿ, ಮಂಗಳವಾರ ಬೆಳಗ್ಗೆ ಸರ್ಕಾರಿ ಅತಿಥಿಗೃಹದಲ್ಲಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿದರು. ಈ ವೇಳೆ ವಿವಿಧ ರೈತಪರ ಸಂಘಟನೆಗಳು, ಕಬ್ಬು ಬೆಳೆಗಾರರ ಸಂಘದ ಪ್ರತಿನಿಧಿಗಳು, ಜನಪರ ಹೋರಾಟಗಾರರು, ಸಾರ್ವಜನಿಕರು ಹಾಗೂ ಕಲಬುರಗಿ ಮಹಾನಗರ ಪಾಲಿಕೆ ಮೇಯರ್ ವರ್ಷಾ ಜಾನೆ ಅವರು ಮುಖ್ಯಮಂತ್ರಿಗೆ ವಿವಿಧ ಬೇಡಿಕೆಗಳ ಮನವಿ ಪತ್ರ ಸಲ್ಲಿಸಿದರು.ಕಲ್ಯಾಣ ಕರ್ನಾಟಕ ಭಾಗದ ಬರ ಪರಿಸ್ಥಿತಿಯನ್ನು ನೇರವಾಗಿ ಅಧ್ಯಯನ ಮಾಡಲು ಬಂದಿದ್ದೇವೆ. ಜನರು ಹಾಗೂ ಜನಪ್ರತಿನಿಧಿಗಳೊಂದಿಗೆ ಸಭೆ ನಡೆಸಿ ಸಮಸ್ಯೆಗಳನ್ನು ಆಲಿಸಲಾಗುತ್ತಿದೆ. ಬರಗಾಲ ಘೋಷಿಸುವಂತೆ ಹಲವು ಮನವಿಗಳು ಬಂದಿದ್ದು, ವಿಭಾಗ ಮಟ್ಟದ ಅಧಿಕಾರಿಗಳ ಸಭೆ ನಡೆಸಿ ಮಾಹಿತಿಯನ್ನು ಸಮಗ್ರವಾಗಿ ಪರಿಶೀಲಿಸಿದ ಬಳಿಕ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

**ಸಿಎಂ ಆದ ಬಳಿಕ ಮೊದಲ ಬಾರಿಗೆ ಡಿ.ಕೆ. ಶಿವಕುಮಾರ್ ಕಲಬುರಗಿ ಭೇಟಿ**

ರಾಜ್ಯದಲ್ಲಿ ಮಳೆ ಕೊರತೆ ಹಿನ್ನೆಲೆಯಲ್ಲಿ ಬರಗಾಲದ ಪರಿಸ್ಥಿತಿ ಸೃಷ್ಟಿಯಾಗಿತ್ತು. ಆದರೆ ಇದೀಗ ಕೆಲವು ಪ್ರದೇಶಗಳಲ್ಲಿ ಮಳೆಯಾಗಿದೆ. ಕರಾವಳಿ ಮತ್ತು ಮಲೆನಾಡಿನಲ್ಲಿ ಮಳೆ ಸುರಿಯುತ್ತಿದೆ. ಹೀಗಾಗಿ ರಾಜ್ಯದ ಪರಿಸ್ಥಿತಿ ಅವಲೋಕಿಸಿ ಬರಗಾಲ ಪೀಡಿತ ಪ್ರದೇಶ ಘೋಷಿಸಲು ನಿರ್ಧಾರ ಮಾಡಲಾಗುವುದು ಎಂದು ಸಿಎಂ ಡಿಕೆ ಶಿವಕುಮಾರ್ ಅವರು ಮಾಹಿತಿಯನ್ನು ನೀಡಿದ್ದಾರೆ. ಕಲಬುರಗಿಯಲ್ಲಿ ಅವರು ಈ ಕುರಿತಾಗಿ ಮಾತನಾಡಿದ್ದಾರೆ.



• ಉದಯವಾಹಿನಿ, ಬೆಂಗಳೂರು

ಬರಗಾಲ ಪೀಡಿತ ಪ್ರದೇಶ ಎಂದು ಘೋಷಣೆ ಮಾಡಲು ಕಾನೂನು ಚೌಕಟ್ಟಿದೆ. ರಾಜ್ಯದ ಎಲ್ಲಾ ಭಾಗಗಳ ಪರಿಸ್ಥಿತಿ ಪರಿಶೀಲಿಸಿ ನಂತರ ಘೋಷಣೆ ಮಾಡಲಾಗುವುದು ಎಂದು ಸಿಎಂ ಡಿ ಕೆ ಶಿವಕುಮಾರ್ ಅವರು ಹೇಳಿದರು. ರಾಜ್ಯವನ್ನು ಕಾಡುತ್ತಿರುವ ಬರಗಾಲ ಪರಿಸ್ಥಿತಿ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ತೋರುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಿಎಂ ಡಿ ಕೆ ಶಿವಕುಮಾರ್ ಎಚ್ಚರಿಕೆ ನೀಡಿದ್ದಾರೆ. ಕಲ್ಬುರ್ಗಿ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಂಗಳವಾರ ಪ್ರಸ್ತಾವಿಕ ಭಾಷಣ ಮಾಡಿದ ಸಿಎಂ ಅವರು, ಜನಪರ ಕೆಲಸ ಮಾಡದ ಅಧಿಕಾರಿಗಳನ್ನು ಸಹಿಸಿಕೊಳ್ಳುವುದಿಲ್ಲ ಎಂದರು. ಉತ್ತರ ಕರ್ನಾಟಕದ ಮೊದಲ ವಿಭಾಗ ಮಟ್ಟದ ಪ್ರಗತಿ ಪರಿಶೀಲನಾ ಸಭೆ ಕಲಬುರಗಿಯಲ್ಲಿ ಆಯೋಜಿಸಲಾಗಿತ್ತು.ಸರ್ವರನ್ನೂ ಒಳಗೊಂಡ ಪರಿಶುದ್ಧ ಆಡಳಿತ, ಅಭಿವೃದ್ಧಿ ಮತ್ತು ಕಟ್ಟಕಡೆಯ ವ್ಯಕ್ತಿಗೂ ಅವರ ನಾಗರಿಕ ಹಕ್ಕುಗಳನ್ನು ತಲುಪಿಸುವುದು ನನ್ನ ಸರ್ಕಾರದ ಪ್ರಮುಖ ಗುರಿ. ಈ ಗುರಿ ಸಾಧಿಸಲು ಅಧಿಕಾರಿ ವರ್ಗ ಅತ್ಯಂತ ಕ್ರಿಯಾಶೀಲ, ಜನಪರ ಮತ್ತು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು. ನಾನು ಬಸವಾದಿ ಶರಣರ ಸಮಾನತೆಯ ತತ್ವವನ್ನು ನಂಬುವವನು. ಆದ್ದರಿಂದಲೇ ನನ್ನ ಮೊದಲ ಉತ್ತರ ಕರ್ನಾಟಕ ಪ್ರವಾಸವನ್ನು ಬಸವಕಲ್ಯಾಣದಿಂದ ಆರಂಭಿಸಿದ್ದೇನೆ. ಸಮಾನತೆ, ಸಾಮಾಜಿಕ ನ್ಯಾಯ ಮತ್ತು ಅಭಿವೃದ್ಧಿ ಒಂದೇ ವೇಗದಲ್ಲಿ ಸಾಗಬೇಕು ಎಂದು ಹೇಳಿದರು.ಬೀದರ್, ಕಲ್ಬುರ್ಗಿ ಜಿಲ್ಲೆಯ ಜನತೆ ನೀಡಿರುವ ಅಭೂತಪೂರ್ವ ಬೆಂಬಲ, ಪ್ರೀತಿ ಮತ್ತು ವಿಶ್ವಾಸಕ್ಕೆ ಕೃತಜ್ಞತೆ ಸಲ್ಲಿಸಿದ ಅವರು, ಜನತೆ ನಮ್ಮ ಮೇಲೆ ಇಟ್ಟಿರುವ ನಂಬಿಕೆಯೇ ನಮ್ಮ ಜವಾಬ್ದಾರಿಯನ್ನು ಹೆಚ್ಚಿಸಿದೆ. ನಮ್ಮನ್ನು ಈ ಸ್ಥಾನದಲ್ಲಿ ಕೂರಿಸಿರುವವ ಜನತೆಯ ನಿರೀಕ್ಷೆಗೆ ತಕ್ಕಂತೆ ಕೆಲಸ ಮಾಡುವುದು ನಮ್ಮೆಲ್ಲರ ಕರ್ತವ್ಯ ಎಂದರು. ಆಡಳಿತದ ಅನುಭವವನ್ನು ಹಂಚಿಕೊಂಡ ಅವರು, ನಾನು ತಾಲ್ಲೂಕು ಪಂಚಾಯಿತಿ ಅಧ್ಯಕ್ಷನಾಗಿ ಕೆಲಸ ಆರಂಭಿಸಿ ಮುಖ್ಯಮಂತ್ರಿ ಹುದ್ದೆಯವರೆಗೆ ಎಲ್ಲಾ ಹಂತಗಳನ್ನು ದಾಟಿಕೊಂಡು ಬಂದಿದ್ದೇನೆ. ಹೀಗಾಗಿ ಆಡಳಿತದ ಪ್ರತಿಯೊಂದು ಹಂತದಲ್ಲಿ ಏನು ನಡೆಯುತ್ತದೆ ಎಂಬುದು ನನಗೆ ಚೆನ್ನಾಗಿ ಗೊತ್ತಿದೆ. ಅಭಿವೃದ್ಧಿ ವಿಚಾರದಲ್ಲಿ ಯಾವುದೇ ನೆಪಗಳನ್ನು ಕೇಳಲು ನಾನು ಸಿದ್ಧನಿಲ್ಲ. ನನಗೆ ಫಲಿತಾಂಶವೇ ಮುಖ್ಯ ಎಂದು ಅಧಿಕಾರಿಗಳಿಗೆ ಸ್ಪಷ್ಟ ಸಂದೇಶ ನೀಡಿದರು.

**1** ರಾಜ್ಯದಲ್ಲಿ ಮಳೆ ಕೊರತೆ ಹಿನ್ನೆಲೆಯಲ್ಲಿ ಬರಗಾಲದ ಪರಿಸ್ಥಿತಿ ಸೃಷ್ಟಿಯಾಗಿತ್ತು

**2** ರಾಜ್ಯದ ಜಿಲ್ಲೆಗಳನ್ನು ಬರ ಪೀಡಿತ ಜಿಲ್ಲೆಗಳೆಂದು ಘೋಷಿಸಲು ಆಗ್ರಹ

**3** ಸಿಎಂ ಡಿಕೆ ಶಿವಕುಮಾರ್ ಅವರು ಪ್ರತಿಕ್ರಿಯೆ

## ಸಿಎಂಗೆ ಕೆಕೆಸಿಸಿಐ ಮನವಿ

ಕಲ್ಯಾಣ ಕರ್ನಾಟಕ ಭಾಗದ ಸಮಗ್ರ ಕೈಗಾರಿಕಾ, ಆರ್ಥಿಕ ಹಾಗೂ ಮೂಲಸೌಕರ್ಯ ಪ್ರಗತಿಯನ್ನು ವೇಗಗೊಳಿಸಲು ಮುಖ್ಯಮಂತ್ರಿಗಳ ನೇತೃತ್ವದಲ್ಲೇ ಸಮರ್ಪಿತ ಕಲ್ಯಾಣ ಕರ್ನಾಟಕ ಬೆಳವಣಿಗೆಯ ಮಿಷನ್ ಅನ್ನು ಪ್ರಾರಂಭಿಸಬೇಕು ಎಂದು ಕಲ್ಯಾಣ ಕರ್ನಾಟಕ ಚೇಂಬರ್ ಆಫ್ ಕಾಮರ್ಸ್ ಅಂಡ್ ಇಂಡಸ್ಟ್ರಿ ಒತ್ತಾಯಿಸಿದೆ. ಕಲ್ಯಾಣ ಕರ್ನಾಟಕ ಪ್ರವಾಸ ನಿಮಿತ್ತ ಕಲಬುರಗಿಗೆ ಆಗಮಿಸಿದ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮಂಗಳವಾರ ನಗರದ ಐವಾನ್-ಏ-ಶಾಹಿ ಅತಿಥಿ ಗೃಹದಲ್ಲಿ ಕೆಕೆಸಿಸಿಐ ಅಧ್ಯಕ್ಷ ಶರಣು ಪಪ್ಪಾ ಹಾಗೂ ಗೌರವ ಕಾರ್ಯದರ್ಶಿ ಶಿವರಾಜ್ ಇಂಗಿನಶೆಟ್ಟಿ ಅವರು, 18 ಪ್ರಮುಖ ಬೇಡಿಕೆಗಳನ್ನೊಳಗೊಂಡ ಜ್ಞಾಪನಾ ಪತ್ರವನ್ನು ಸಲ್ಲಿಸಿದರು. ಸಂವಿಧಾನದ 371(ಜೆ) ವಿಧಿಯ ವಿಶೇಷ ರಕ್ಷಣೆ ಇದ್ದಾಗ್ಯೂ, ಈ ಭಾಗದ ಐತಿಹಾಸಿಕ ಹಿನ್ನಡೆಯನ್ನು ಸರಿಪಡಿಸಲು ಭವಿಷ್ಯದ ಸರ್ಕಾರಿ ಹೂಡಿಕೆಗಳಲ್ಲಿ ಮೊದಲ ಆದ್ಯತೆ ನೀಡಬೇಕು ಎಂದು ನಿಯೋಗವು ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿಕೊಟ್ಟಿತು.

**ಮನವಿಗಳ ಸುರಿಮಳೆ**

## ಬೆಳೆ ಸಾಲ ಮನ್ನಾ ಮಾಡಿ

ಯಾವುದೇ ಕಾರಣಕ್ಕೂ ರೈತರ ವಿಚಾರದಲ್ಲಿ ಕಲ್ಯಾಣಕರ್ನಾಟಕ ಭಾಗದ ಅಭಿವೃದ್ದಿಗೆ ಸಂಬಂದಿಸಿದಂತೆ ನಿರ್ಲಕ್ಷ್ಯ ತೋರಬೇಡಿ.ಕಳೆದ ವರ್ಷ ಅತಿವೃಷ್ಟಿಯಿಮದ ಹಸಿ ಬರಗಾಲ ಬಂದರೆ, ಈ ವರ್ಷ ಮಳೆ ಬಾರದೆ ಒಣ ಬರಗಾಲ ನೋಡುವ ಸ್ಥಿತಿ ನಮ್ಮ ರೈತಾಪಿ ವರ್ಗಕ್ಕೆ ಬಂದಿದೆ. ಕಲಬುರಗಿ ಜಿಲ್ಲೆಯಲ್ಲಿ ಅಲ್ಲಲ್ಲಿ ಅಲ್ಪಸ್ವಲ್ಪ ಮಳೆ ಬಿದ್ದ ಕಾರಣ ಇದೂವರೆಗೆ ಶೇ.30ರಷ್ಟು ಮಾತ್ರ ಬಿತ್ತನೆ ಮಾಡಲಾಗಿದೆ. ಬಿತ್ತನೆ ನಂತರ ಮಳೆ ಬರದ ಕಾರಣ ರೈತ ಕಂಗಾಲಿದ್ದಾನೆ ಎಂದು ನೋವು ತೋಡಿಕೊಂಡರು. ಸಾಲ ಸೂಲ ಮಾಡಿ ಬೀಜ. ಗೊಬ್ಬರ ಖರೀದಿ ಮಾಡಿದ್ದು, ಬೆಳೆ ಕೈಕೊಡುವ ಎಲ್ಲಾ ಲಕ್ಷ್ಣ ಗೋಚರಿಸುತ್ತಿದೆ. ಹೀಗಾಗಿ ಸಹಕಾರಿ ಬ್ಯಾಂಕ್ ಮತ್ತು ರಾಷ್ಟ್ರೀಕೃತ ಬ್ಯಾಂಕ್‌ಗಳಿಂದ ಸಾಲ ಪಡೆದ ರೈತರಿಗೆ ಸಾಲ ಮನ್ನಾ ಮಾಡಬೇಕೆಂದು ಸಿ.ಎಂ. ಅವರಿಗೆ ಮನವಿ ಪತ್ರ ಸಲ್ಲಿಸಿ ಜಿಲ್ಲಾ ಕೃಷಿಕ ಸಮಾಜದ ಜಿಲ್ಲಾಧ್ಯಕ್ಷ ಸಿದ್ರಾಮಪ್ಪ ಪಾಟೀಲ ಧಂಗಾಪೂರ ಆಗ್ರಹಿಸಿದರು.ಈ ಬಗ್ಗೆ ಪ್ರತಿಕ್ರಿಯೆ ನೀಡಿದ ಸಿಎಂ, ರೈತರ ಸಾಲ ಮನ್ನಾ ವಿಚಾರ ಹಾಗೂ ತಮಿಳುನಾಡು, ಮಹಾರಾಷ್ಟ್ರಗಳಲ್ಲಿ ರೈತರ ಸಾಲ ಮನ್ನಾ ಮಾಡಿರುವ ಬಗ್ಗೆ ಕೇಳಿದಾಗ, ಎಲ್ಲಿಯ ಸಾಲ, ಯಾವ ಸಾಲ ಎಂಬುದನ್ನು ಪರಿಶೀಲನೆ ಮಾಡೋಣ'' ಎಂದರು.

## ಕಲಬುರಗಿ ಬರಪೀಡಿತ ಜಿಲ್ಲೆಯೆಂದು ಘೋಷಿಸಲು ಸಿಎಂಗೆ ಬಿಜೆಪಿ ನಿಯೋಗ ಮನವಿ



ಜಿಲ್ಲೆಯಲ್ಲಿ ಮಳೆ ಅಭಾವದಿಂದ ಉಂಟಾಗಿರುವ ಭೀಕರ ಬರಗಾಲ ಪರಿಸ್ಥಿತಿಯನ್ನು ಹಿನ್ನೆಲೆಯಾಗಿಟ್ಟುಕೊಂಡು, ಕಲಬುರಗಿಯನ್ನು ತಕ್ಷಣವೇ ಬರಪೀಡಿತ ಜಿಲ್ಲೆಯೆಂದು ಘೋಷಿಸಬೇಕು ಎಂದು ಆಗ್ರಹಿಸಿ ಭಾರತೀಯ ಜನತಾ ಪಾರ್ಟಿ ನಿಯೋಗವು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಮನವಿ ಪತ್ರ ಸಲ್ಲಿಸಿತು. ಶಾಸಕರಾದ ಬಸವರಾಜ ಮತ್ತಿಮಡು, ಡಾ.ಅವಿನಾಶ್ ಜಾಧವ್, ವಿಧಾನ ಪರಿಷತ್ ಸದಸ್ಯರಾದ ಶಶೀಲ್ ಜಿ. ನಮೋಶಿ, ಡಾ. ಬಿ.ಜಿ ಪಾಟೀಲ್ ಹಾಗೂ ಬಿಜೆಪಿ ಜಿಲ್ಲಾಧ್ಯಕ್ಷ ಅಶೋಕ್ ಬಗಲಿ ಅವರ ನೇತೃತ್ವದಲ್ಲಿ ಮುಖ್ಯಮಂತ್ರಿಗಳನ್ನು ಭೇಟಿಯಾದ ನಿಯೋಗವು, ಜಿಲ್ಲೆಯ ರೈತರು ಎದುರಿಸುತ್ತಿರುವ ಜ್ವಲಂತ ಸಮಸ್ಯೆಗಳ ಕುರಿತು ಸುದೀರ್ಘ ಚರ್ಚೆ ನಡೆಸಿತು. ಜಿಲ್ಲೆಯಲ್ಲಿ ಮುಂಗಾರು ಬಿತ್ತನೆ ಸಂಪೂರ್ಣ ಕುಂಠಿತಗೊಂಡಿದ್ದು, ರೈತಾಪಿ ವರ್ಗ ಕಂಗಾಲಾಗಿದೆ. ಆದ್ದರಿಂದ ರೈತರ ಕೃಷಿ ಸಾಲ ವನ್ನು ಸಂಪೂರ್ಣವಾಗಿ ಮನ್ನಾ ಮಾಡಬೇಕು ಹಾಗೂ ಸಂಕಷ್ಟಕ್ಕೆ ಸಿಲುಕಿರುವ ರೈತರಿಗೆ ಪ್ರತಿ ಎಕರೆಗೆ 50,000 ಪರಿಹಾರ ಧನ ವಿತರಿಸಬೇಕು ಎಂದು ಒತ್ತಾಯಿಸಿತು.

## ನೂತನ ಅನುಭವ ಮಂಟಪ ಶೀಘ್ರ ಲೋಕಾರ್ಪಣೆ

ಜಿಲ್ಲೆಯ ಬಸವಕಲ್ಯಾಣ ನಗರದ ತ್ರಿಪುರಾಂತ ಕೆರೆಯ ದಡದಲ್ಲಿ 7.5 ಎಕರೆ ವಿಸ್ತಾರ, ಸುಮಾರು 600 ಕೋಟಿ ರು. ವೆಚ್ಚದಲ್ಲಿ ನಿರ್ಮಾಣವಾಗುತ್ತಿರುವ, 6 ಅಂತಸ್ತಿನ ಅನುಭವ ಮಂಟಪದ ಕಾಮಗಾರಿಯನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ವೀಕ್ಷಿಸಿದರು.

ಕಾಮಗಾರಿಗಳ ಪ್ರಗತಿಯನ್ನು ಪರಿಶೀಲಿಸಿದರು. ಇದೇ ವೇಳೆ ಬಸವಾದಿ ಶರಣರು ಪ್ರತಿಪಾದಿಸಿದ ಇಷ್ಟಲಿಂಗವನ್ನು ತಮ್ಮ ಹಸ್ತದಲ್ಲಿಟ್ಟುಕೊಂಡು ಸುಮಾರು ಎರಡು ನಿಮಿಷಗಳ ಕಾಲ ಧ್ಯಾನ ಮಾಡಿದರು. ಬಳಿಕ ಸುದ್ದಿಗಾರರೊಂದಿಗೆ ಮಾತ ನಾಡಿದ ಅವರು, ಬಸವೇಶ್ವರರ ತತ್ವ, ಆದರ್ಶ ಮತ್ತು ಸಂದೇಶಗಳು ವಿಶ್ವದಾದ್ಯಂತ ಪ್ರಚಾರವಾಗುತ್ತಿವೆ. ನಮ್ಮ ಸರಕಾರವು ಬಸವಣ್ಣರನ್ನು ಕರ್ನಾಟಕದ ಸಾಂಸ್ಕೃತಿಕ ನಾಯಕರಾಗಿ ಘೋಷಿಸಿದೆ.

## ರಾಜ್ಯದ ಕರಾವಳಿ, ಮಲೆನಾಡು ಜಿಲ್ಲೆಗಳಲ್ಲಿ ಮುಂಗಾರು ಅಬ್ಬರ: ಹಲವೆಡೆ ಶಾಲೆಗಳಿಗೆ ರಜೆ

• ಉದಯವಾಹಿನಿ, ಬೆಂಗಳೂರು

ರಾಜ್ಯದ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳಲ್ಲಿ ಮುಂಗಾರು ಚುರುಕುಗೊಂಡಿದೆ. ಕರಾವಳಿ ತೀರದ ಭಾಗಗಳಲ್ಲಿ ಗಂಟೆಗೆ 50 ರಿಂದ 60 ಕಿಲೋಮೀಟರ್ ವೇಗದ ಬಲವಾದ ಗಾಳಿ ಬೀಸುವ ಸಾಧ್ಯತೆಯಿದ್ದು, ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ರಾಜ್ಯದ ಒಳನಾಡಿನ ಜಿಲ್ಲೆಗಳಲ್ಲೂ ಸಾಧಾರಣದಿಂದ ಭಾರಿ ಮಳೆ ನಿರೀಕ್ಷಿಸಲಾಗಿದ್ದು, ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಲಾಗಿದೆ.ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಮುನ್ಸೂಚನೆ ಇರುವುದರಿಂದ ರೆಡ್ ಅಲರ್ಟ್ ಘೋಷಿಸಲಾಗಿದೆ. ದಕ್ಷಿಣ ಕನ್ನಡ, ಬೆಳಗಾವಿ, ಚಿಕ್ಕಮಗಳೂರು, ಹಾಸನ, ಕೊಡಗು ಮತ್ತು ಶಿವಮೊಗ್ಗ ಜಿಲ್ಲೆಗಳಲ್ಲಿಯೂ ಭಾರಿ ಮಳೆ ಮುಂದುವರೆದಿದ್ದು, ಆರೆಂಜ್ ಅಲರ್ಟ್ ನೀಡಲಾಗಿದೆ. ಧಾರವಾಡ, ಗದಗ ಮತ್ತು ಹಾವೇರಿ ಜಿಲ್ಲೆಗಳಲ್ಲಿ ಮಳೆಯಾಗುವ ನಿರೀಕ್ಷೆ ಇರುವುದರಿಂದ ಯೆಲ್ಲೋ ಅಲರ್ಟ್ ನೀಡಲಾಗಿದೆ.

## ಪ್ರದೀಪ್ ಈಶ್ವರ್ ವಿರುದ್ಧ ಘೋಷಣೆ ಕೂಗಿ ಚಪ್ಪಲಿ ಎಸೆದ ಪ್ರಕರಣ: ನಾಲ್ವರ ವಿರುದ್ಧದ ಕೇಸ್‌ಗೆ ಹೈಕೋರ್ಟ್ ತಡೆಯಾಜ್ಞೆ

• ಉದಯವಾಹಿನಿ, ಬೆಂಗಳೂರು



ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ವಿರುದ್ಧ ಘೋಷಣೆ ಕೂಗಿ ಚಪ್ಪಲಿ ಎಸೆದ ಆರೋಪ ಪ್ರಕರಣ ಸಂಬಂಧ ನಾಲ್ವರ ವಿರುದ್ಧದ ಪ್ರಕರಣಕ್ಕೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ. ಶಾಸಕರಿಗೆ ಅಪಮಾನವಾಗಿದ್ದರೆ ಮಾನನಷ್ಟ ಕೇಸ್ ದಾಖಲಿಸಬಹುದಿತ್ತು. 800 ಜನರಲ್ಲಿ ಈ ನಾಲ್ವರ ವಿರುದ್ಧ ಕೇಸ್ ದಾಖಲಿಸಿದ್ದೇಕೆ? ಎಂದು ಚಿಕ್ಕಬಳ್ಳಾಪುರ ಪೊಲೀಸರಿಗೆ ನ್ಯಾ.ಎಂ.ನಾಗಪ್ರಸನ್ನರಿದ್ದ ಹೈಕೋರ್ಟ್ ಪೀಠ ಪ್ರಶ್ನೆ ಮಾಡಿದೆ. ಈ ಬಗ್ಗೆ ಪ್ರತಿಕ್ರಿಯೆ ನೀಡಲು ಸೂಚಿಸಿ ಮೋಹನ್ ರಾಜ್, ಅಕ್ಕುಲ ರೆಡ್ಡಿ, ಟಿ.ಎಸ್ ಮಹೇಂದ್ರ ಮತ್ತು ಟಿ.ಎಸ್.ಪ್ರಕಾಶ್ ವಿರುದ್ಧದ ಕೇಸ್‌ಗೆ ಹೈಕೋರ್ಟ್ ತಡೆಯಾಜ್ಞೆ ನೀಡಿದೆ.

ಚಿಕ್ಕಬಳ್ಳಾಪುರದಲ್ಲಿ ಜೂನ್ 27ರಂದು ನಡೆದ ಕಾಂಗ್ರೆಸ್ ಶಾಸಕ ಪ್ರದೀಪ್ ಈಶ್ವರ್ ಮತ್ತು ಜೆಡಿಎಸ್ ಕಾರ್ಯಕರ್ತರ ನಡುವಿನ ಗಲಾಟೆ ತೀವ್ರ ಸ್ವರೂಪ ಪಡೆದುಕೊಂಡಿತ್ತು. ಕುಮಾರಸ್ವಾಮಿ ಅವರ ಕುರಿತು ಶಾಸಕರ ಹೇಳಿಕೆ ಬಗ್ಗೆ ಸಿಡಿದೆದ್ದಿದ್ದ ಜೆಡಿಎಸ್?? ಕಾರ್ಯಕರ್ತರು, ನಗರದ ಕನ್ನಡ ಭವನದಲ್ಲಿ ನಡೆಯುತ್ತಿದ್ದ ನಾಡಪ್ರಭು ಕೆಂಪೇಗೌಡ ಜಯಂತಿ ಮಹೋತ್ಸವ ಕಾರ್ಯಕ್ರಮಕ್ಕೆ ನುಗ್ಗಿದ್ದರು. ಶಾಸಕ ಪ್ರದೀಪ್ ಈಶ್ವರ್ ಅವರನ್ನು ವೇದಿಕೆಯಿಂದ ಕೆಳಗಿಳಿಸಬೇಕು ಎಂದು ಘೋಷಣೆ ಕೂಗಿ ಗಲಾಟೆ ನಡೆಸಿದ್ದರು. ಬಳಿಕ ಸ್ವಾಮೀಜಿ ಮಧ್ಯಪ್ರವೇಶದಿಂದ ಪರಿಸ್ಥಿತಿ ತಿಳಿಗೊಂಡಿತ್ತು.

ಆದರೆ ಕಾರ್ಯಕ್ರಮ ಮುಗಿದ ಬಳಿಕ ಗಲಾಟೆ ಮತ್ತೆ ಶುರುವಾಗಿದ್ದು, ಪ್ರದೀಪ್ ಈಶ್ವರ್ ತಮ್ಮ ಕಾರಿನ ಸನ್‌ರೂಫ್ ಓಪನ್ ಮಾಡಿ ನಿಂತು ಮೆರವಣಿಗೆ ಹೊರಟಿದ್ದರು. ಈ ವೇಳೆ ತಮ್ಮ ವಿರುದ್ಧ ಘೋಷಣೆ ಕೂಗುತ್ತಿದ್ದ ಜೆಡಿಎಸ್ ಕಾರ್ಯಕರ್ತರಿಗೆ ತಿರುಗೇಟು ನೀಡಲು ಮೀಸೆ ತಿರುವಿ, ತೋಳು ತಟ್ಟಿ ಸವಾಲು ಹಾಕಿದ್ದರು.

## ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಸಹಾಯ ಕೇಂದ್ರ ಪ್ರಾರಂಭಿಸಲು ರಾಜ್ಯ ಸರ್ಕಾರ ಆದೇಶ!

• ಉದಯವಾಹಿನಿ, ಬೆಂಗಳೂರು

ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಪ್ರತ್ಯೇಕವಾದ ಸಹಾಯ ಮತ್ತು ಸೌಲಭ್ಯ ಕೇಂದ್ರಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. ಈ ಕೇಂದ್ರಗಳು ಸಾರ್ವಜನಿಕರು ಶಾಶ್ವತ ವಾಸಸ್ಥಳ ದೃಢೀಕರಣ ಪ್ರಮಾಣ ಪತ್ರ ಪಡೆಯಲು ಅರ್ಜಿ ಸಲ್ಲಿಸಲು ಅನುಕೂಲವಾಗುವಂತೆ ಕಂಪ್ಯೂಟರ್, ಇಂಟರ್ ನೆಟ್- ಪ್ರಿಂಟರ್, ಸ್ಕ್ಯಾನರ್ ಸೌಲಭ್ಯ ಹೊಂದಿರಬೇಕು. ಅಲ್ಲದೇ ಆಸನ ವ್ಯವಸ್ಥೆ ಸೇರಿದಂತೆ ಅಗತ್ಯ ಸೌಲಭ್ಯ ಒದಗಿಸಬೇಕು ಎಂದು ಸೂಚಿಸಲಾಗಿದೆ. ಸಹಾಯ ಮತ್ತು ಸೌಲಭ್ಯ ಕೌಂಟರ್ ಗಳಲ್ಲಿ ಪಂಚಮಿತ್ರ ಸಹಾಯವಾಣಿ ಸಂಖ್ಯೆ 8277506000 ಪ್ರದರ್ಶಿಸಬೇಕು.

ಇವುಗಳನ್ನು ಗ್ರಾಮ ಪಂಚಾಯಿತಿಯಲ್ಲಿ ಕಾರ್ಯ ನಿರ್ವಹಿಸುವ ಡಾಟಾ ಎಂಟ್ರಿ ಆಪರೇಟರ್ ನಿರ್ವಹಿಸಬೇಕು ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯದ ಆಯುಕ್ತರು ಹೊರಡಿಸಿರುವ ಆದೇಶದಲ್ಲಿ ಉಲ್ಲೇಖಿಸಲಾಗಿದೆ.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯು ಸಹಾಯ ಮತ್ತು ಸೌಲಭ್ಯ ಕೌಂಟರ್ ಗಳ ಕಾರ್ಯನಿರ್ವಹಣೆಯ ಒಟ್ಟಾರೇ ಉಸ್ತುವಾರಿ ನೋಡಿಕೊಳ್ಳಬೇಕು. ಪ್ರತಿ ಗ್ರಾಮ ಪಂಚಾಯಿತಿಯಲ್ಲಿ ಸಹಾಯ ಮತ್ತು ಸೌಲಭ್ಯ ಕೌಂಟರ್ ಗಳನ್ನು ಸ್ಥಾಪಿಸಲು ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ವೈಯಕ್ತಿಕ ಗಮನಹರಿಸಿ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಆದೇಶದಲ್ಲಿ ತಿಳಿಸಲಾಗಿದೆ.

## ಖಾಸಗಿ ವ್ಯಕ್ತಿಗಳಿಗೆ ಸರ್ಕಾರಿ ಜಮೀನು ಪರಭಾರೆ ಆರೋಪ: ಮೂವರು ಅಧಿಕಾರಿಗಳಿಗೆ ಸಂಬಂಧಿಸಿದ ಸ್ಥಳಗಳಲ್ಲಿ ಲೋಕಾಯುಕ್ತ ದಾಳಿ

• ಉದಯವಾಹಿನಿ, ಬೆಂಗಳೂರು

ಅನಧಿಕೃತ ವ್ಯಕ್ತಿಗಳಿಗೆ ಜಮೀನು ನೀಡಿದ್ದ ಆರೋಪದಡಿ ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆ ವ್ಯವಸ್ಥಾಪಕ ನಿರ್ದೇಶಕ (ಎಂಡಿ) ಎಂ.ಕೆ. ಜಗದೀಶ್ ಸೇರಿದಂತೆ ಮೂವರು ಅಧಿಕಾರಿಗಳ ಕಚೇರಿ, ಯಲಹಂಕ ಹಾಗೂ ದೇವನಹಳ್ಳಿಯ ತಹಶೀಲ್ದಾರ್ ಕಚೇರಿ, 4 ಮನೆಗಳು ಸೇರಿದಂತೆ 7 ಕಡೆಗಳಲ್ಲಿ ಲೋಕಾಯುಕ್ತ ಅಧಿಕಾರಿಗಳು ಏಕಕಾಲದಲ್ಲಿ ದಾಳಿ ನಡೆಸಿದ್ದಾರೆ.

**7 ಕಡೆ ದಾಳಿ ನಡೆಸಿ ಶೋಧ:** ಕಾವೇರಿ ಭವನದಲ್ಲಿರುವ ಜಗದೀಶ್ ಅವರ ಕಚೇರಿ, ಮನೆಗಳು, ಯಲಹಂಕ, ದೇವನಹಳ್ಳಿಯ ತಹಶೀಲ್ದಾರ್ ಕಚೇರಿ ಸೇರಿದಂತೆ ಒಟ್ಟು 7 ಕಡೆಗಳಲ್ಲಿ ದಾಳಿ ನಡೆಸಿ ಶೋಧ ನಡೆಸಲಾಗಿದೆ. ಈ ಹಿಂದೆ ಬೆಂಗಳೂರು ನಗರ ಜಿಲ್ಲೆಯ ವಿಶೇಷ ಜಿಲ್ಲಾಧಿಕಾರಿಯಾಗಿದ್ದಾಗ 2020ರಲ್ಲಿ ಯಲಹಂಕ ಸಮೀಪದ ಹುಣಸಮಾರನಹಳ್ಳಿಯಲ್ಲಿರುವ 16 ಎಕರೆ ಸರ್ಕಾರಿ ಜಮೀನನ್ನು 9 ಜನ ಖಾಸಗಿ ವ್ಯಕ್ತಿಗಳಿಗೆ ಪರಭಾರೆ ಮಾಡಿರುವ ಆರೋಪ ಜಗದೀಶ್ ಅವರ ವಿರುದ್ಧ ಕೇಳಿ ಬಂದಿತ್ತು.

## ಗೃಹ ಸಚಿವರು ಹಿಂದೂ ಕಾರ್ಯಕರ್ತನ ಮನೆಗೆ ಕೆಲವರನ್ನು ಕಳಿಸಿ ಕೇಸ್ ವಾಪಸ್ ಪಡೆಯಲು ಬೆದರಿಕೆ ಹಾಕಿದ್ದಾರೆ: ಸಿ.ಟಿ. ರವಿ

• ಉದಯವಾಹಿನಿ, ಬೆಂಗಳೂರು

ಹಿಂದೂ ಪರ ಕಾರ್ಯಕರ್ತ ತೇಜಸ್ ಗೌಡ ಗೃಹ ಸಚಿವರ ವಿರುದ್ಧ ಕೇಸ್ ಹಾಕಿದ್ದು, ಅಷ್ಟಕ್ಕೇ ಗೃಹ ಸಚಿವರು ಆತನ ಮನೆಗೆ ಕೆಲವರನ್ನು ಕಳಿಸಿ ಕೇಸ್ ವಾಪಸ್ ಪಡೆಯಲು ಬೆದರಿಕೆ ಹಾಕಿದ್ದಾರೆ ಎಂದು ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಆರೋಪಿಸಿದ್ದಾರೆ. ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಹಿಂದೂ ಪರ ಕಾರ್ಯಕರ್ತ ತೇಜಸ್‌ಗೌಡ ಗೃಹ ಸಚಿವರ ಮೇಲೆ ಕೇಸ್ ಹಾಕಿದ್ದಾರೆ. ಅಷ್ಟಕ್ಕೇ ಗೃಹ ಸಚಿವರು ಮನೆಗೆ ಕೆಲವರನ್ನು ಕಳಿಸಿ ಕೇಸ್ ವಾಪಸ್ ಪಡೆಯಲು ಬೆದರಿಕೆ ಹಾಕಿದ್ದಾರೆ. ನಿಮಗ್ಯಾಕೆ ಭಯ. ಪೊಲೀಸರನ್ನು ದುರ್ಬಳಕೆ ಮಾಡಿಕೊಂಡು ಬೆದರಿಕೆ ಯಾಕೆ ಹಾಕ್ತೀರಿ?. ಬೆದರಿಕೆಗೆಲ್ಲ ಹೆದರೋದಿಲ್ಲ, ಅದು ಶೋಭೆಯೂ ತರಲ್ಲ ಎಂದು ವಾಗ್ದಾಳಿ ನಡೆಸಿದರು. ಸ್ಲಮ್‌ಗಳಿಗೆ ಬಿಎಲ್‌ಒಗಳು ಹೋಗದಿದ್ದಕ್ಕೆ ನಮ್ಮ ಬಿಎಲ್‌ಎಗಳು ಹೋಗಿದ್ದಾರೆ ಎಂಬ ಕೆಪಿಸಿಸಿ ಅಧ್ಯಕ್ಷ ಬಿ ಕೆ ಹರಿಪ್ರಸಾದ್ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸುತ್ತಾ, ಬಿಎಲ್‌ಎಗಳ ಕೆಲಸ ಅವರೇ ಮಾಡಬೇಕು. ಬಿಎಲ್‌ಎಗಳಿಗೆ ಬಿಎಲ್‌ಒಗಳ ಕೆಲಸವಹಿಸಿಲ್ಲ. ನಿಮ್ಮ ಪಕ್ಷದ ಕಾರ್ಯಕರ್ತರ ಆಣತಿಯಂತೆ ಬಿಎಲ್‌ಒಗಳು ಕೇಳೋದೇ ಅಕ್ರಮ. ಬಿಎಲ್‌ಒಗಳು ಎಲ್ಲರ ಮನೆಗೂ ಹೋಗಬೇಕು, ಅದು ಅವರ ಕರ್ತವ್ಯ ಎಂದು ಹೇಳಿದರು.

ಎಸ್‌ಐಆರ್ ಕಾಲಕಾಲಕ್ಕೆ ನಡೆದಿದೆ. ರಾಜ್ಯದಲ್ಲಿ ಎಸ್‌ಐಆರ್ ದುರ್ಬಳಕೆ ಆಗ್ತಿದೆ. ಅಧಿಕಾರಿಗಳಿಗೆ ಮೌಖಿಕ ಸೂಚನೆ ಕೊಟ್ಟು ದುರ್ಬಳಕೆ ಮಾಡಲಾಗುತ್ತಿದೆ. ಬಿಜೆಪಿಗೆ ಬೆಂಬಲಿಸುವ ಮತದಾರರಿಗೆ ಅರ್ಜಿಯೇ ಕೊಡದಿರೋದು, ಕಾಂಗ್ರೆಸ್ ಬೆಂಬಲಿತ ಮತದಾರರನ್ನು ಉಳಿಸಿಕೊಳ್ಳೋದು ಆಗುತ್ತಿದೆ. ಮಸೀದಿಗಳಲ್ಲಿ ಸಾಮೂಹಿಕ ಎಸ್‌ಐಆರ್ ಆಗುತ್ತಿದೆ. ಯಾರು ಇಲ್ಲಿ ಹುಟ್ಟಿಲ್ಲವೋ ಅವರಿಗೂ ಬರ್ತ್ ಸರ್ಟಿಫಿಕೇಟ್ ಕೊಡಲಾಗುತ್ತಿದೆ. ಈಗಾಗಲೇ ರಾಜ್ಯದಲ್ಲೂ ದೂರು ಕೊಡಲಾಗಿದೆ, ಇಂದು ದೆಹಲಿಯಲ್ಲೂ ದೂರು ಕೊಡಲಾಗ್ತಿದೆ. ಯಾವ ರೀತಿ ರಾಜ್ಯದಲ್ಲಿ ಎಸ್‌ಐಆರ್ ಅಕ್ರಮ ನಡೀತಿದೆ ಅಂತ ಹೇಳ್ತೇವೆ ಎಂದರು.



ಅನುಮತಿ ಪಡೆದೇ ಆರ್‌ಎಸ್‌ಎಸ್ ಪಥ ಸಂಚಲನ ಮಾಡಬೇಕು ಎಂಬ ಗೃಹ ಸಚಿವರ ಹೇಳಿಕೆಗೆ ಪ್ರತಿಕ್ರಿಯಿಸಿ, ಜನ ಗೃಹ ಸಚಿವರನ್ನು ಮರೆಯಬಾರದು ಅಂತ ಆರ್‌ಎಸ್‌ಎಸ್ ವಿಚಾರ ಮಾತಾಡ್ತಿದ್ದಾರೆ ಪ್ರಿಯಾಂಕ್ ಖರ್ಗೆ. ತಮ್ಮ ಇರುವಿಕೆಯನ್ನು ಜನರಿಗೆ ನೆನಪಿಸಲು ಈಥರ ಪದೇ ಪದೆ ಮಾತಾಡ್ತಿದ್ದಾರೆ.

ಆರ್‌ಎಸ್‌ಎಸ್ ಎಲ್ಲದಕ್ಕೂ ಅನುಮತಿ ಪಡೆದೇ ಪಥಸಂಚಲನ ಮಾಡೋದು. ಗೃಹ ಸಚಿವರಿಗೆ ಮಾಡಲು ಬೇಕಾದಷ್ಟು ಕೆಲಸ ಇದೆ. ಆ ಕಡೆ ಗಮನ ಹರಿಸಲಿ ಎಂದು ತಿರುಗೇಟು ನೀಡಿದರು.

ದೇವರಾಜು ಅರಸು ನಿಗಮದಲ್ಲಿ ಹೊಲಿಗೆ ಯಂತ್ರ ಖರೀದಿ ಅಕ್ರಮ ವಿಚಾರವಾಗಿ ಮಾತನಾಡಿ, ಸರ್ಕಾರದಲ್ಲಿ ಲೂಟಿ ನಡೀತಿದೆ. ಹೊಲಿಗೆ ಯಂತ್ರ ಮಾರ್ಕೆಟ್‌ನಲ್ಲಿ 10 ಸಾವಿರ ರೂ., ಅವರು ಕೋಟ್ ಮಾಡಿರೋದು 17 ಸಾವಿರ ರೂಪಾಯಿ. ಹೀಗೇ ಕಾರ್ಮಿಕ ಇಲಾಖೆ ಕಿಟ್‌ಗಳಲ್ಲೂ ಅಕ್ರಮ ನಡೆದಿದೆ. ಇದೇ ಹಗಲು ದರೋಡೆ. 10 ರೂ. ಲಂಚ ಸಹ ಪಡೀಬಾರದು ಅಂತ ಸಿಎಂ ಹೇಳಿದ್ದಾರೆ.

## ಸಿದ್ದರಾಮಯ್ಯ ಅವರನ್ನು ಮೂಲೆಗುಂಪು ಮಾಡಲಾಗುತ್ತಿದೆ: ಮಾಜಿ ಸಚಿವ ಶ್ರೀರಾಮುಲು ಆರೋಪಕ್ಕೆ ಯತೀಂದ್ರ ಪ್ರತಿಕ್ರಿಯೆ

• ಉದಯವಾಹಿನಿ, ಬೆಂಗಳೂರು

ಸಿದ್ದರಾಮಯ್ಯ ಅವರಿಂದ ಅಧಿಕಾರ ಪಡೆಯುವರೆಗೆ ಅತಿಯಾಗಿ ಓಲೈಸಿದರು. ಈಗ ಅವರನ್ನು ಕಾವೇರಿ ನಿವಾಸದಲ್ಲಿ ಕೂಡಿ ಹಾಕಿ ಮೂಲೆಗುಂಪು ಮಾಡುತ್ತಿದ್ದಾರೆ ಎಂದು ಮಾಜಿ ಸಚಿವ ಶ್ರೀರಾಮುಲು ಆರೋಪ ಮಾಡಿದ್ದಾರೆ.

ನಗರದ ಬಿಜೆಪಿ ಕಚೇರಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ದೇವರಾಜ ಅರಸು ಅವರಿಗೆ ಕಾಂಗ್ರೆಸ್ ಮೋಸ ಮಾಡಿದಂತೆ ಸಿದ್ದರಾಮಯ್ಯ ಅವರಿಗೂ ಮೋಸ ಮಾಡಿದೆ. ಅಧಿಕಾರ ಹಸ್ತಾಂತರದ ಬಳಿಕ ಸಿದ್ದರಾಮಯ್ಯ ಅವರನ್ನು ಸಂಪೂರ್ಣ ಮೂಲೆಗುಂಪು ಮಾಡಿದ್ದಾರೆ. ಅವರ ಆಶೀರ್ವಾದದಿಂದ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಈಗ ಅವರನ್ನೇ ಕಾವೇರಿ ನಿವಾಸದಲ್ಲಿ ಕೂಡಿಹಾಕಿದೆ ಎಂದರು.

ಸಿದ್ದರಾಮಯ್ಯ ಈಗ ಲೆಕ್ಕಕ್ಕೆ ಇಲ್ಲದ ಮನುಷ್ಯ ಎಂಬ ರೀತಿ ವರ್ತಿಸಲಾಗುತ್ತಿದೆ. ಅಧಿಕಾರ ತೆಗೆದುಕೊಳ್ಳುವ ತನಕ ಸಿದ್ದರಾಮಯ್ಯ ಅವರನ್ನು ಅತಿಯಾಗಿ ಓಲೈಸಿದರು. ಒಂದೇ ಒಂದು ಕಾರ್ಯಕ್ರಮಕ್ಕೂ ಸಿದ್ದರಾಮಯ್ಯ ಅವರನ್ನು ಕರೆಯುತ್ತಿಲ್ಲ. ಸಿದ್ದರಾಮಯ್ಯ ಅವರು ಈಗ ಬೇಕಾಗಿಲ್ಲ. ಸಿಎಂ ಮನಸ್ಸು ಮಾಡಿದರೆ ಕೆಂಪೇಗೌಡ ಜಯಂತಿಯಲ್ಲಿ ಸಿದ್ದರಾಮಯ್ಯನವರ ಫೋಟೋ ಹಾಕಿಸಬಹುದಿತ್ತು.

ಕಾಂಗ್ರೆಸ್ 2023ರಲ್ಲಿ ಅಧಿಕಾರಕ್ಕೆ ಬಂದಿದ್ದು ಸಿದ್ದರಾಮಯ್ಯ ಅವರ ಆಶೀರ್ವಾದದಿಂದ. ಈಗ ಅದೇ ಜನ 2028ಕ್ಕೆ ಜನ ಪಾಠ ಕಲಿಸುತ್ತಾರೆ ಎಂದರು. ಯತೀಂದ್ರ ಅವರಿಗೆ ನಗರಾಭಿವೃದ್ಧಿ ಖಾತೆ ಏಕೆ ಎಂದು ಚರ್ಚೆ ಶುರು ಮಾಡಿರುವುದೇ ಕಾಂಗ್ರೆಸ್ ಒಂದು ಗುಂಪು. ಕೆಲವರಿಗೆ ಯತೀಂದ್ರ ಸಿದ್ದರಾಮಯ್ಯ ಆ



ಖಾತೆಯಲ್ಲಿರುವುದು ಇಷ್ಟ ಇಲ್ಲ. ಮುಡಾ ಹಗರಣದಲ್ಲಿ ಯತೀಂದ್ರ ಕುಟುಂಬದ ಮೇಲೆ ಆರೋಪ ಇದೆ. ಹೀಗಾಗಿ ಯತೀಂದ್ರ ನಗರಾಭಿವೃದ್ಧಿ ಖಾತೆ ವಹಿಸಿಕೊಂಡಿರುವುದು ಸರಿಯಲ್ಲ. ನನ್ನ ವೈಯಕ್ತಿಕ ಅಭಿಪ್ರಾಯದಲ್ಲಿ ಯತೀಂದ್ರ ಆ ಖಾತೆ ಬಿಡಬೇಕು. ಈ ಚರ್ಚೆ ಕಾಂಗ್ರೆಸ್‌ನಿಂದಲೇ ಬಂದಿರುವ ಕಾರಣ ಕಾಂಗ್ರೆಸ್ ಒಳಗಡೆ ಬೇರೆ ಬೆಳವಣಿಗೆ ನಡೆಯುತ್ತಿರಬಹುದು ಎಂದು ಶ್ರೀರಾಮುಲು ಹೇಳಿದ್ರು.

**ಸಿಎಂ ಬೆಂಗಳೂರಿಗೆ ಮಾತ್ರ:** ಸಿಎಂಗೆ ಬೆಂಗಳೂರು ಅಷ್ಟೇ ಸಾಕಾಗಿದೆ. ಬೆಂಗಳೂರು ಇದ್ದರೆ ರಾಜ್ಯ ಇದ್ದಂತೆ ಎಂಬ ಭ್ರಮೆಯಲ್ಲಿದ್ದಾರೆ. ಈ ಸರ್ಕಾರಕ್ಕೆ ನಾಚಿಕೆ, ಮಾನ, ಮರ್ಯಾದೆ ಏನೂ ಇಲ್ಲ. ಡಿ.ಕೆ. ಶಿವಕುಮಾರ್ ಅಧಿಕಾರಕ್ಕೆ ಬಂದು ಒಂದು ತಿಂಗಳಾದರೂ ಬೆಂಗಳೂರು ಬಿಟ್ಟು ಹೊರ ಬರುತ್ತಿಲ್ಲ. ನಿನ್ನೆ ಮಾತ್ರ ಕಲಬುರಗಿಗೆ ಹೋಗಿದ್ದಾರೆ.

ರಾಜ್ಯದಲ್ಲಿ ಅತಿವೃಷ್ಟಿ-ಅನಾವೃಷ್ಟಿ ಇದೆ. ಕನಕೋತ್ಸವದಲ್ಲಿ ಮುಳುಗಿದ್ದಾರೆ. ಈ ವೇಳೆ ಕನಕೋತ್ಸವ ಬೇಕಾಗಿತ್ತಾ ಎಂದು ಪ್ರಶ್ನಿಸಿದ ಶ್ರೀರಾಮುಲು, ಕಂದಾಯ ಸಚಿವರು ಎಲ್ಲಿದ್ದಾರೆ, ಏನು ಮಾಡುತ್ತಿದ್ದಾರೆ ಎಂಬುದೇ ಗೊತ್ತಾಗುತ್ತಿಲ್ಲ. ಅಧಿಕಾರಿಗಳನ್ನು ಜನರ ಬಳಿಗೆ ಕಳುಹಿಸಿ ಕೆಲಸ ಮಾಡಿಸಬೇಕು.

# ಬ್ರಹ್ಮೋಸ್ ಕ್ಷಿಪಣಿ ಪೂರೈಕೆ, ಸಬಾಂಗ್ ಬಂದರು ಜಂಟಿಯಾಗಿ ನಿರ್ಮಾಣ: ಇಂಡೋನೇಷ್ಯಾ ಜೊತೆ ಭಾರತ ಒಪ್ಪಂದ

## ಇಂಡೋನೇಷ್ಯಾ ಪ್ರವಾಸದಲ್ಲಿರುವ ಪ್ರಧಾನಿ ಮೋದಿ. ಇಂಡೋನೇಷ್ಯಾ ಸೇನೆ ಸೇರಲಿವೆ ಬ್ರಹ್ಮೋಸ್ ಕ್ಷಿಪಣಿಗಳು. ಹಲವು ಕ್ಷೇತ್ರಗಳಲ್ಲಿ ಒಪ್ಪಂದ ಮಾಡಿಕೊಂಡ ಉಭಯ ರಾಷ್ಟ್ರಗಳು

• ಉದಯವಾಹಿನಿ, ನವದೆಹಲಿ

ಇಂಡೋನೇಷ್ಯಾ ಪ್ರವಾಸದಲ್ಲಿರುವ ಪ್ರಧಾನಿ ನರೇಂದ್ರ ಮೋದಿ ಅವರು ರಕ್ಷಣಾ ಕ್ಷೇತ್ರದಲ್ಲಿ ಆ ದೇಶದೊಂದಿಗೆ ಭರ್ಜರಿ ಒಪ್ಪಂದ ಮಾಡಿಕೊಂಡಿದ್ದಾರೆ. ಪಾಕಿಸ್ತಾನ ವಿರುದ್ಧದ 'ಆಪರೇಷನ್ ಸಿಂಧೂರ್' ಕಾರ್ಯಾಚರಣೆಯಲ್ಲಿ ಪ್ರಮುಖ ಪಾತ್ರ ವಹಿಸಿದ್ದ ಬ್ರಹ್ಮೋಸ್ ಕ್ಷಿಪಣಿಗಳನ್ನು ಇಂಡೋನೇಷ್ಯಾ ಸೇನೆಗೆ ಪೂರೈಸುವ ಮಹತ್ವದ ಒಪ್ಪಂದಕ್ಕೆ ಸಹಿ ಹಾಕಿದ್ದಾರೆ.

ಜಕಾರ್ತದಲ್ಲಿ ಪ್ರಧಾನಿ ನರೇಂದ್ರ ಮೋದಿ ಮತ್ತು ಇಂಡೋನೇಷ್ಯಾ ಅಧ್ಯಕ್ಷ ಪ್ರಬೊವೊ ಸುಬ್ಯಾಂಟೊ ನಡುವೆ ಮಂಗಳವಾರ ನಡೆದ ದ್ವಿಪಕ್ಷೀಯ ಮಾತುಕತೆಯ ನಂತರ ಈ ಬೆಳವಣಿಗೆ ನಡೆದಿದೆ. ರಕ್ಷಣೆ ಮಾತ್ರವಲ್ಲದೆ ಅಪರೂಪದ ಖನಿಜಗಳು, ತಂತ್ರಜ್ಞಾನ, ಆಹಾರ ಭದ್ರತೆ, ಔಷಧಗಳು ಮತ್ತು ಕಡಲ ಭದ್ರತೆ ಸೇರಿದಂತೆ ಹಲವು ಪ್ರಮುಖ ಕ್ಷೇತ್ರಗಳಲ್ಲಿ ಉಭಯ ದೇಶಗಳ ಸಹಕಾರವನ್ನು ಹೆಚ್ಚಿಸಲು ಸುಮಾರು ಒಂದು ಡಜನ್ ಒಪ್ಪಂದಗಳಿಗೆ ಉಭಯ ನಾಯಕರು ಸಹಿ ಹಾಕಿದ್ದಾರೆ. ಮಲಕ್ಕಾ ಜಲಸಂಧಿಗೆ ಮುಖಮಾಡಿರುವ ಹಾಗೂ ಭಾರತದ ಗ್ರೇಟ್ ನಿಕೋಬಾರ್ ಬಂದರು ಯೋಜನೆಯಿಂದ ಕೇವಲ 100 ಮೈಲಿ ದೂರದಲ್ಲಿರುವ ಪ್ರಮುಖ ಸಬಾಂಗ್



ಬಂದರನ್ನು ಜಂಟಿಯಾಗಿ ಅಭಿವೃದ್ಧಿಪಡಿಸಲು ಉಭಯ ದೇಶಗಳು ಸಮ್ಮತಿಸಿವೆ. ಇದರೊಂದಿಗೆ ಕಡಲ ವ್ಯಾಪಾರ, ಆರ್ಥಿಕತೆ ಮತ್ತು ಬಂದು ಅಭಿವೃದ್ಧಿ ಕ್ಷೇತ್ರದಲ್ಲಿ ಸಹಕಾರ ವಿಸ್ತರಿಸಲು ನಿರ್ಧರಿಸಲಾಗಿದೆ. ಬಳಿಕ ಇಂಡೋನೇಷ್ಯಾ ಅಧ್ಯಕ್ಷರೊಂದಿಗೆ ನಡೆದ ಜಂಟಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಪ್ರಧಾನಿ ಮೋದಿ, ರಕ್ಷಣೆ, ತಂತ್ರಜ್ಞಾನ ಮತ್ತು ಶಿಕ್ಷಣ ಸೇರಿದಂತೆ ಹಲವು ಕ್ಷೇತ್ರಗಳಲ್ಲಿ ಎರಡೂ ದೇಶಗಳು ಪ್ರಮುಖ ಹೆಜ್ಜೆಗಳನ್ನು ಇಡುತ್ತಿವೆ. ರಕ್ಷಣಾ ವಿನಿಮಯ, ವಿಪತ್ತು ನಿರ್ವಹಣೆ ಮತ್ತು ಕೈಗಾರಿಕಾ ಸಹಕಾರವನ್ನು ಉತ್ತೇಜಿಸಲು ಭಾರತ ಮತ್ತು ಇಂಡೋನೇಷ್ಯಾ ಒಪ್ಪಂದಕ್ಕೆ ಬಂದಿವೆ ಎಂದು ಪ್ರಕಟಿಸಿದರು.

ಉಭಯ ರಾಷ್ಟ್ರಗಳ ನಡುವೆ ಬೆಳೆಯುತ್ತಿರುವ ನಂಬಿಕೆಯು ನಮ್ಮ ರಕ್ಷಣೆ ಕಡಲ ಸಹಕಾರವನ್ನು ಬಲಪಡಿಸುತ್ತದೆ. 2018 ರಲ್ಲಿ ಆರಂಭವಾದ ಸಮಗ್ರ ಕಾರ್ಯತಂತ್ರದ ಪಾಲುದಾರಿಕೆಯು ಈಗ ಹೊಸ ಎತ್ತರಕ್ಕೆ ತಲುಪುತ್ತಿದೆ. ಅಭಿವೃದ್ಧಿ, ಭದ್ರತೆ, ಸಂಸ್ಕೃತಿ ಮತ್ತು ಶಿಕ್ಷಣ ಕ್ಷೇತ್ರಗಳಲ್ಲಿ ಮುನ್ನಡೆ ಸಾಧಿಸುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಶಿಕ್ಷಣ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ದೊಡ್ಡ ನಿರ್ಧಾರ ಕೈಗೊಂಡಿರುವ ಪ್ರಧಾನಿ ಮೋದಿ, ಇಂಡೋನೇಷ್ಯಾದಲ್ಲಿ ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್-ಬೆಂಗಳೂರು ಕ್ಯಾಂಪಸ್ ಅನ್ನು ಸ್ಥಾಪಿಸುವುದಾಗಿ ಘೋಷಿಸಿದರು. ಇದಲ್ಲದೆ, ಭಾರತದ ಯುಪಿಐ ಪಾವತಿ ವ್ಯವಸ್ಥೆಯನ್ನು ಇಂಡೋನೇಷ್ಯಾದ ಪಾವತಿ ವ್ಯವಸ್ಥೆಯೊಂದಿಗೆ ಸಂಯೋಜಿಸಲಾಗುವುದು. ಇದು ಉಭಯ ದೇಶಗಳ ನಡುವಿನ ವ್ಯಾಪಾರ ಮತ್ತು ಪ್ರವಾಸೋದ್ಯಮಕ್ಕೆ ಭಾರಿ ಉತ್ತೇಜನ ನೀಡಲಿದೆ ಎಂದರು.

### ಇಂಡೋನೇಷ್ಯಾದ ಅತ್ಯುನ್ನತ ಗೌರವ ಪ್ರದಾನ

ಇದಕ್ಕೂ ಮೊದಲು ಇಂಡೋನೇಷ್ಯಾ ಅಧ್ಯಕ್ಷ ಪ್ರಬೊವೊ ಸುಬ್ಯಾಂಟೊ ಅವರು, ಪ್ರಧಾನಿ ನರೇಂದ್ರ ಮೋದಿ ಅವರಿಗೆ ದೇಶದ ಅತ್ಯುನ್ನತ ನಾಗರಿಕ ಗೌರವವಾದ ಬಿಂತಾಂಗ್ ಆದಿಪೂರ್ಣ ಆಫ್ ದಿ ರಿಪಬ್ಲಿಕ್ ಆಫ್ ಇಂಡೋನೇಷ್ಯಾ ಪದಕವನ್ನು ನೀಡಿ ಗೌರವಿಸಿದರು. ಅಧ್ಯಕ್ಷ ಪ್ರಬೊವೊ ಅವರ ವೈಯಕ್ತಿಕ ಆಹ್ವಾನದ ಮೇರೆಗೆ ಇಂಡೋನೇಷ್ಯಾಕ್ಕೆ ಎರಡು ದಿನಗಳ ಭೇಟಿ ನೀಡಿರುವ ಪ್ರಧಾನಿ ಮೋದಿ ಅವರನ್ನು ಸಾಂಪ್ರದಾಯಿಕವಾಗಿ ಬರಮಾಡಿಕೊಳ್ಳಲಾಯಿತು. ಇದು ಪ್ರಧಾನಿ ಮೋದಿ ಅವರ 4ನೇ ಇಂಡೋನೇಷ್ಯಾ ಭೇಟಿಯಾಗಿದೆ. ವಿಶ್ವದ ಅತಿ ವೇಗದ ಸೂಪರ್‌ಸಾನಿಕ್ ಕ್ರೂಸ್ ಕ್ಷಿಪಣಿ ಎಂದು ಹೆಸರಾಗಿರುವ ಬ್ರಹ್ಮೋಸ್, ಮ್ಯಾಕ್ 2.8 ವೇಗದಲ್ಲಿ ಚಲಿಸುವ ಸಾಮರ್ಥ್ಯ ಹೊಂದಿದೆ.

**ಈ ದಿನದ ದರ** ಪೆಟ್ರೋಲ್: 110.82₹/L ಡೀಸೆಲ್ : 98.54₹/L ಬಂಗಾರ: ₹ 14,526/Gram 24ct ₹13,315/Gram 22ct ಬೆಳ್ಳಿ: ₹245.00/Gram

# ಇಂದು ಬೀದಿಬದಿ ವ್ಯಾಪಾರಿಗಳಿಂದ ನಗರ ಬಂದ್ ಪ್ರತಿಭಟನೆ

• ಉದಯವಾಹಿನಿ, ಬೆಂಗಳೂರು

ಬೀದಿ ವ್ಯಾಪಾರಿಗಳ ಸಂಘಟನೆಗಳು ನಗರಾದ್ಯಂತ ಬಂದ್ ಹಾಗೂ ಬೃಹತ್ ಪ್ರತಿಭಟನೆಗೆ ಇಂದು ಬುಧವಾರ ಕರೆ ನೀಡಿವೆ. ಈಗ ನಗರದಾದ್ಯಂತ ನಡೆಯುತ್ತಿರುವ ಪಾದಾಚಾರಿ ಮಾರ್ಗ ಒತ್ತುವರಿ ತೆರವು ಕಾರ್ಯಾಚರಣೆಗಳು ಬೀದಿ ವ್ಯಾಪಾರಿಗಳ (ಜೀವನೋಪಾಯದ ರಕ್ಷಣೆ ಮತ್ತು ಬೀದಿ ವ್ಯಾಪಾರದ ನಿಯಂತ್ರಣ) ಕಾಯ್ದೆ, 2014ನ್ನು ಉಲ್ಲಂಘಿಸುತ್ತಿವೆ ಎಂದು ಅವು ಆರೋಪಿಸಿವೆ. ಬೀದಿ ವ್ಯಾಪಾರಿಗಳ ಜಂಟಿ ಹೋರಾಟ ಸಮಿತಿ ರಾಜ್ಯ ಸರ್ಕಾರ ಮತ್ತು ಗ್ರೇಟರ್ ಬೆಂಗಳೂರು ಪ್ರಾಧಿಕಾರ ವಿರುದ್ಧ ಅಕ್ರಮ ತೆರವು ಕಾರ್ಯಾಚರಣೆ ನಡೆಸುತ್ತಿರುವುದಾಗಿ ಆರೋಪಿಸಿದೆ. ಕಾನೂನುಬದ್ಧ ಪ್ರಕ್ರಿಯೆ ಅನುಸರಿಸದೆ ವ್ಯಾಪಾರಿಗಳ ತಳ್ಳುಗಾಡಿಗಳು ಹಾಗೂ ಸರಕುಗಳನ್ನು ವಶಪಡಿಸಿಕೊಳ್ಳಲಾಗುತ್ತಿದ್ದು, ಸಾವಿರಾರು



ಉದಯವಾಹಿನಿ ಚಿತ್ರ

ಬೀದಿ ವ್ಯಾಪಾರಿಗಳ ಜೀವನೋಪಾಯಕ್ಕೆ ಧಕ್ಕೆ ಉಂಟುಮಾಡಲಾಗಿದೆ ಎಂದು ಸಮಿತಿ ದೂರಿದೆ. ಆದರೆ ಬೀದಿ ವ್ಯಾಪಾರವನ್ನು ನಿಯಂತ್ರಿಸಲು ಅನುಸರಿಸಬೇಕಾದ ಸ್ಪಷ್ಟ ವಿಧಾನವನ್ನು ಕಾಯ್ದೆ ತಿಳಿಸಿದೆ. ಆ ಕಾಯ್ದೆಯನ್ನು ಜಾರಿಗೊಳಿಸುವ ಬದಲು ಅಧಿಕಾರಿಗಳು ಕಾನೂನು ಪ್ರಕ್ರಿಯೆ ಪಾಲಿಸದೆ ವ್ಯಾಪಾರಿಗಳನ್ನು ತೆರವುಗೊಳಿಸುತ್ತಿದ್ದಾರೆ ಎಂದು ಬೆಂಗಳೂರು ಜಿಲ್ಲಾ ಬೀದಿ ವ್ಯಾಪಾರಿಗಳ ಒಕ್ಕೂಟದ ಅಧ್ಯಕ್ಷ ಎಸ್. ಬಾಬು ಹೇಳಿದರು. 1.5 ಲಕ್ಷ ಬೀದಿ ವ್ಯಾಪಾರಿಗಳು ಇದ್ದು, ಅವರು ಕಡಿಮೆ ಬೆಲೆಯ ವಸ್ತುಗಳು ಮತ್ತು ಸೇವೆಗಳನ್ನು ಒದಗಿಸುವುದರ ಜೊತೆಗೆ ಸ್ವಯಂ ಉದ್ಯೋಗದ ಮೂಲಕ ತಮ್ಮ ಕುಟುಂಬಗಳನ್ನು ನಿರ್ವಹಿಸುತ್ತಿದ್ದಾರೆ ಎಂದು ಸಮಿತಿ ತಿಳಿಸಿದೆ.

ರಸ್ತೆಗಳಲ್ಲಿ ಬೀದಿ ವ್ಯಾಪಾರಕ್ಕೆ ಅವಕಾಶವಿಲ್ಲ ಎಂಬ ಮೌಖಿಕ ನಿರ್ದೇಶನದ ನಂತರ ಅಧಿಕಾರಿಗಳು ಜೆಸಿಬಿ ಯಂತ್ರಗಳೊಂದಿಗೆ ಬಂದು ತಳ್ಳುಗಾಡಿಗಳನ್ನು ವಶಪಡಿಸಿಕೊಂಡು, ಸರಕುಗಳನ್ನು ಹಾನಿಗೊಳಿಸಿದ್ದಾರೆ ಎಂದು ಆರೋಪಿಸಿದೆ.

# ಬಾಬುಸಾಪಾಳ್ಯದಲ್ಲಿ ಸ್ವಚ್ಛತಾ ಅಭಿಯಾನ ಯಶಸ್ವಿ

• ಉದಯವಾಹಿನಿ,ಕೆ.ಆರ್.ಪುರ:

ಸ್ವಚ್ಛ ಮತ್ತು ಹಸಿರು ಬಾಬುಸಾಪಾಳ್ಯ ನಿರ್ಮಾಣಕ್ಕೆ ಪ್ರತಿಯೊಬ್ಬ ನಾಗರಿಕರ ಸಹಕಾರ ಅತ್ಯಗತ್ಯ ಎಂದು ಬಾಬುಸಾಪಾಳ್ಯ ವಾರ್ಡಿನ ಜೆಡಿಎಸ್ ಆಕಾಂಕ್ಷಿ ದಿವ್ಯ ಶಿವಕುಮಾರ್ ಹೇಳಿದರು.

ಕ್ಷೇತ್ರದ ಬಾಬುಸಾಪಾಳ್ಯ ವಾರ್ಡ್ ನಂ. 4ರ ಮುನಿರೆಡ್ಡಿ ಲೇಔಟ್ ಹಾಗೂ ತಿಮ್ಮಾರೆಡ್ಡಿ ಲೇಔಟ್ ಪ್ರದೇಶಗಳಲ್ಲಿ ಇಂದು ಸ್ವಚ್ಛತಾ ಅಭಿಯಾನವನ್ನು ಯಶಸ್ವಿಗೊಳಿಸಿ ಮಾತನಾಡಿ ಅವರು.

ಪರಿಸರ ಸಂರಕ್ಷಣೆ, ಸ್ವಚ್ಛತೆ ಹಾಗೂ ನಾಗರಿಕರಲ್ಲಿ ಜಾಗೃತಿ ಮೂಡಿಸುವ ಉದ್ದೇಶದಿಂದ ಈ ಅಭಿಯಾನವನ್ನು ಆಯೋಜಿಸಲಾಗಿತ್ತು ಎಂದು ಹೇಳಿದರು.


ಉದಯವಾಹಿನಿ ಚಿತ್ರ


ಈ ಸಂದರ್ಭದಲ್ಲಿ ಶಿವಕುಮಾರ್ ಗೌಡ, ಜೆಡಿಎಸ್ ಮುಖಂಡರು, ಕಾರ್ಯಕ್ರಮದಲ್ಲಿ ಭಾಗವಹಿಸಿ ಸಾರ್ವಜನಿಕರಿಗೆ ಸ್ವಚ್ಛತೆ ಕಾಪಾಡುವಂತೆ ಕರೆ ನೀಡಿದರು ಹಾಗೂ ಸಹಕರಿಸಿದ ಎಲ್ಲರಿಗೂ ಹೃತ್ಪೂರ್ವಕ ಧನ್ಯವಾದಗಳನ್ನು ಅರ್ಪಿಸಿದರು.

## ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್‌ವೇ: ಕಾರಿನ ಮೇಲೆ ದಾಳಿ; ಗುಂಪು ಗುಂಪಾಗಿ ನುಗ್ಗಿ ಕುಟುಂಬಸ್ಥರ ಮೇಲೆ ಹಲ್ಲೆ

• ಉದಯವಾಹಿನಿ, ಬೆಂಗಳೂರು

ಬೆಂಗಳೂರು-ಮೈಸೂರು ಎಕ್ಸ್‌ಪ್ರೆಸ್‌ವೇಯಲ್ಲಿ ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಕುಟುಂಬದ ಮೇಲೆ ಪುರುಷರ ಗುಂಪೊಂದು ಅವರ ವಾಹನವನ್ನು ಅಡ್ಡಗಟ್ಟಿ ದೈಹಿಕವಾಗಿ ಹಲ್ಲೆ ನಡೆಸಿದ್ದಾರೆ. ಹಿಂದೆ ಚಲಿಸುತ್ತಿದ್ದ ವಾಹನದ ಡ್ಯಾಶ್‌ಕ್ಯಾಮ್‌ನಲ್ಲಿ ಸೆರೆಯಾದ ಈ ಘಟನೆಯು ಸಾಮಾಜಿಕ ಮಾಧ್ಯಮಗಳಲ್ಲಿ ವೈರಲ್ ಆಗಿದೆ. ಕುಟುಂಬದಲ್ಲಿ ಒಬ್ಬ ಪುರುಷ, ಆತನ ಹೆಂಡತಿ, ಮಕ್ಕಳು ಮತ್ತು ವೃದ್ಧ ಮಹಿಳೆ ಇದ್ದರು, ಎಲ್ಲರೂ ಮಾರುತಿ ಸುಜುಕಿ ಆಲ್ಟೊದಲ್ಲಿ ಪ್ರಯಾಣಿಸುತ್ತಿದ್ದರು. 52 ಸೆಕೆಂಡುಗಳ ವೀಡಿಯೊ ಆಲ್ಟೊ ನಿಲ್ಲುವ ಮೊದಲು ಎಕ್ಸ್‌ಪ್ರೆಸ್‌ವೇಯಲ್ಲಿ ಚಲಿಸುವ ವಾಹನಗಳೊಂದಿಗೆ ಪ್ರಾರಂಭವಾಗುತ್ತದೆ. ಪುರುಷರ ಗುಂಪು ಕುಟುಂಬದ ಕಾರಿನ ಕಡೆಗೆ ಧಾವಿಸುತ್ತದೆ ಪುರುಷರು ಚಾಲಕನ ಮೇಲೆ ಕೂಗಾಡುತ್ತಾ, ನಂತರ ಚಾಲಕನ ಬಾಗಿಲು ತೆರೆದು ಅವನ ಮೇಲೆ ದೈಹಿಕವಾಗಿ ಹಲ್ಲೆ ನಡೆಸುತ್ತಿರುವುದು ಕಂಡುಬರುತ್ತದೆ.

## ಯತೀಂದ್ರಗೆ 'ಮುಡಾ' ಸಂಕಷ್ಟ: ಕೂಡಲೇ ಖಾತೆ ಬದಲಾಯಿಸುವಂತೆ ಸಿಎಂ ಡಿಕೆಶಿಗೆ ಪತ್ರ!


ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪುತ್ರ ಡಾ. ಯತೀಂದ್ರಗೆ ನೀಡಲಾದ ನಗರಾಭಿವೃದ್ಧಿ ಖಾತೆಯನ್ನು ಹಿಂದಕ್ಕೆ ಪಡೆಯುವಂತೆ 'ನೈಜ ಹೋರಾಟಗಾರರ ವೇದಿಕೆ'ಯ ಕಾರ್ಯಕರ್ತ ಎಂದು ಹೇಳಿಕೊಳ್ಳುವ ವ್ಯಕ್ತಿಯೊಬ್ಬರು ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರಿಗೆ ಪತ್ರ ಬರೆದಿದ್ದಾರೆ.

ಮಾಧ್ಯಮಗಳಿಗೆ ಬಿಡುಗಡೆ ಮಾಡಿದ ಮೂರು ಪುಟಗಳ ಪತ್ರದಲ್ಲಿ, ಕಾರ್ಯಕರ್ತ ಎಚ್.ಎಂ. ವೆಂಕಟೇಶ್ ಅವರು ಮೈಸೂರು ಲೋಕಾಯುಕ್ತ ಪೊಲೀಸ್, ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ, ಕರ್ನಾಟಕ ಹೈಕೋರ್ಟ್ ಮತ್ತು ಜಾರಿ ನಿರ್ದೇಶನಾಲಯದಲ್ಲಿ ರಿಟ್ ಅರ್ಜಿಯನ್ನು ಉಲ್ಲೇಖಿಸಿದ್ದಾರೆ.

ನಗರಾಭಿವೃದ್ಧಿ ಖಾತೆ ಹೊರತುಪಡಿಸಿ ಬದಲಿ ಖಾತೆ ನೀಡುವಂತೆ ಪತ್ರದಲ್ಲಿ ಆಗ್ರಹಿಸಲಾಗಿದೆ. ನೈಜ ಹೋರಾಟಗಾರರ ವೇದಿಕೆಯಿಂದ ಸಿಎಂ ಡಿಕೆಶಿವಕುಮಾರ್ ಅವರಿಗೆ ಈ ಪತ್ರ ಬರೆಯಲಾಗಿದೆ.

ಆ ಮೂಲಕ ಮುಡಾ ಪ್ರಕರಣ ಮತ್ತೆ ಚರ್ಚೆಗೆ ಬಂದಂತಾಗಿದೆ. ಈ ಪ್ರಕರಣಗಳು ನ್ಯಾಯಾಲಯದಲ್ಲಿ ವಿಚಾರಣೆಯಲ್ಲಿರುವಾಗ ನಗರಾಭಿವೃದ್ಧಿ ಇಲಾಖೆಯ ಗುರುತರ ಜವಾಬ್ದಾರಿಯನ್ನು ಹೊಂದುವುದು ಸರಿಯಲ್ಲ.


ಆರೋಪಿತರ ಮಗನಾಗಿರುವ ಡಾ.ಯತೀಂದ್ರರವರನ್ನು ತಕ್ಷಣಕ್ಕೆ ಜಾರಿಗೆ ಬರುವಂತೆ ನಗರಾಭಿವೃದ್ಧಿ ಸಚಿವರ ಹೊಣೆಗಾರಿಕೆಯಿಂದ ಬಿಡುಗಡೆಗೊಳಿಸಿ. ಬದಲಿ ಖಾತೆಯಲ್ಲಿ ಅವರನ್ನು ಸಚಿವರಾಗಿ ಕಾರ್ಯನಿರ್ವಹಿಸಲಿ ಎಂದು ಆಗ್ರಹಿಸಲಾಗಿದೆ.

ಒಂದು ವೇಳೆ ಯತೀಂದ್ರರವರು ನಗರಾಭಿವೃದ್ಧಿ ಇಲಾಖೆಯ ಹೊಣೆ ಮುಂದುವರಿಸಿದ್ದಲ್ಲಿ ಸ್ವಹಿತಾಸಕ್ತಿಯ ಸಂಘರ್ಷವಾಗುತ್ತದೆ.

> ಲೋಕಾಯುಕ್ತರು ಈಗಾಗಲೇ ತನಿಖೆ ನಡೆಸಿ ವರದಿಯನ್ನು ಸಲ್ಲಿಸಿದ್ದಾರೆ, ಅದನ್ನು ಪ್ರತಿನಿಧಿಗಳ ನ್ಯಾಯಾಲಯ ಅಂಗೀಕರಿಸಿದೆ. ತನಿಖೆ ಪೂರ್ಣಗೊಂಡಿರುವುದರಿಂದ, ನಾವು ಹಸ್ತಕ್ಷೇಪ ಮಾಡುವ ಅಥವಾ ಪ್ರಭಾವ ಬೀರುವ ಯಾವುದೇ ಸನ್ನಿವೇಶವಿಲ್ಲ, ಹಿತಾಸಕ್ತಿ ಸಂಘರ್ಷವಿಲ್ಲ ಎಂದು ಅವರು ಹೇಳಿದರು. -ಎಚ್.ಎಂ. ವೆಂಕಟೇಶ್

## 'ಹೊಲಿಗೆ ಯಂತ್ರ ಖರೀದಿಯಲ್ಲಿ 5-6 ಕೋಟಿ ರೂ. ಅಕ್ರಮದ ಆರೋಪ..!


• ಉದಯವಾಹಿನಿ, ಬೆಂಗಳೂರು



ವಾಲ್ಮೀಕಿ ಅಭಿವೃದ್ಧಿ ನಿಗಮದ ಬಳಿಕ ಇದೀಗ ದೇವರಾಜ ಅರಸು ಅಭಿವೃದ್ಧಿ ನಿಗಮದಲ್ಲೂ ಭಾರೀ ಅಕ್ರಮ ನಡೆದಿದೆ ಎಂಬ ಆರೋಪ ಕೇಳಿಬಂದಿದೆ.

ಹೊಲಿಗೆ ಯಂತ್ರಗಳ ಖರೀದಿ ಟೆಂಡರ್ ಪ್ರಕ್ರಿಯೆಯಲ್ಲಿ ಅವ್ಯವಹಾರ ಹಾಗೂ ಕಿಕ್‌ಬ್ಯಾಕ್ ನಡೆದಿದೆ ಎಂದು ಆರೋಪಿಸಿ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರಿಗೆ ದೂರು ಸಲ್ಲಿಸಲಾಗಿದೆ. ದೂರುದಾರ ಪರಮೇಶ್ ಅವರ ಪ್ರಕಾರ, ಸುಮಾರು ರೂ.10,000 ಮೌಲ್ಯದ ಹೊಲಿಗೆ ಯಂತ್ರವನ್ನು ರೂ.17,000ಕ್ಕೆ ಖರೀದಿಸುವಂತೆ ಟೆಂಡರ್ ನಿಗದಿಪಡಿಸಲಾಗಿದ್ದು, ಈ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಪಾಲನೆಯಾಗಿಲ್ಲ. ರಾಜ್ಯದ ವ್ಯಕ್ತಿಯೊಬ್ಬರಿಗೆ ಟೆಂಡರ್ ನೀಡುವ ವೇಳೆ ಅಕ್ರಮ ನಡೆದಿದ್ದು, ಇದರ ಹಿಂದೆ ಸುಮಾರು ರೂ.5ರಿಂದ ರೂ.6 ಕೋಟಿ ಮೌಲ್ಯದ ಹಗರಣ ನಡೆದಿದೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ಈ ಆರೋಪಗಳ ಕುರಿತು ಸಮಗ್ರ ಹಾಗೂ ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳುವಂತೆ ಸರ್ಕಾರವನ್ನು ದೂರುದಾರರು ಒತ್ತಾಯಿಸಿದ್ದಾರೆ. ಇದರ ಬೆನ್ನಲ್ಲೇ ರಾಜ್ಯ ಸರ್ಕಾರದ ವಿರುದ್ಧ ಬಿಜೆಪಿ ತೀವ್ರವಾಗಿ ಕಿಡಿಕಾರಿದೆ.


ಉದಯವಾಹಿನಿ ಚಿತ್ರ

## ಶ್ರೀ ನಂದಕಿಶೋರಾಚಾರ್ ನೇತೃತ್ವದಲ್ಲಿ ದಾಸವಾಣಿ ಕಾರ್ಯಕ್ರಮ

• ಉದಯವಾಹಿನಿ, ಬೆಂಗಳೂರು

ಪವಮಾನಪುರದ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀಮಠದ ವಿಚಾರಣಾಕರ್ತರಾದ ಶ್ರೀ ಗಿರಿರಾಜಾಚಾರ್ ಹಾಗೂ ನೂತನ ವ್ಯವಸ್ಥಾಪಕರಾದ ಶ್ರೀ ನಂದಕಿಶೋರಾಚಾರ್ ನೇತೃತ್ವದಲ್ಲಿ ಜುಲೈ 9, ಗುರುವಾರ ಸಂಜೆ 7-00ಕ್ಕೆ ಶ್ರೀಮತಿ ಹೇಮಶ್ರುತಿ ಎಂ.ಎಸ್. ಭಟ್ ಇವರಿಂದ ದಾಸವಾಣಿ ಕಾರ್ಯಕ್ರಮ ಏರ್ಪಡಿಸಿದ್ದು ಇವರ ಗಾಯನಕ್ಕೆ ಪಿಟೀಲು ವಾದನದಲ್ಲಿ ಶ್ರೀ ವಿನೀತ್ ಮತ್ತು ಮೃದಂಗ ವಾದನದಲ್ಲಿ ಶ್ರೀ ಹೆಚ್. ಪ್ರವೀಣ್ ಸಹಕರಿಸಲಿದ್ದಾರೆ.

ಸ್ಥಳ : ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಪವಮಾನಪುರ, ಬನಶಂಕರಿ 6ನೇ ಹಂತ, ಬೆಂಗಳೂರು.

# ಅರಣ್ಯ ಭೂಮಿಯಲ್ಲಿ ರಿಯಲ್ ಎಸ್ಟೇಟ್ ಸಾಧ್ಯವೇ?; ಖಂಡ್ರೆ ವಾಗ್ದಾಳಿ

## ಎಚ್‌ಎಂಟಿ ಭೂಮಿಯಲ್ಲಿ ಯಾವುದೇ ಅರಣ್ಯವಿಲ್ಲ, ಕಟ್ಟಡಗಳಿವೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ

• ಉದಯವಾಹಿನಿ, ಬೆಂಗಳೂರು

ನಗರದ ಎಚ್‌ಎಂಟಿಗೆ ಸೇರಿದ ಭೂಮಿಯನ್ನು ಅರಣ್ಯ ಇಲಾಖೆಯು ಅಕ್ರಮವಾಗಿ ರಿಯಲ್ ಎಸ್ಟೇಟ್ ಸಂಸ್ಥೆಗಳಿಗೆ ಮಾರಾಟ ಮಾಡಿದೆ ಎಂಬ ಆರೋಪಕ್ಕೆ ಸಂಬಂಧಿಸಿದಂತೆ, ಭೂಪರಿವರ್ತನೆ ಆಗದ ಅರಣ್ಯ ಭೂಮಿಯಲ್ಲಿ ರಿಯಲ್ ಎಸ್ಟೇಟ್ ದಂಧೆಗೆ ಅವಕಾಶವೇ ಇರುವುದಿಲ್ಲ. ಹೀಗಾಗಿ ಎಚ್‌ಡಿ ಕುಮಾರಸ್ವಾಮಿ ಆರೋಪಕ್ಕೆ ಅರ್ಥವೇ ಇಲ್ಲ ಎಂದು ಸಚಿವ ಈಶ್ವರ್ ಖಂಡ್ರೆ ವಾಗ್ದಾಳಿ ನಡೆಸಿದ್ದಾರೆ.

> 'ಅರಣ್ಯ ಸಂರಕ್ಷಣಾ ಕಾಯ್ದೆ, 1980 ಜಾರಿಗೆ ಬಂದ ನಂತರ, ಭೂಪರಿವರ್ತನೆ ಮಾಡದ ಯಾವುದೇ ಅರಣ್ಯ ಭೂಮಿ ಅರಣ್ಯವಾಗಿಯೇ ಮುಂದುವರಿಯುತ್ತದೆ. ಸುಪ್ರೀಂ ಕೋರ್ಟ್ ಕೂಡ ಇದನ್ನೇ ತೀರ್ಪು ನೀಡಿದೆ. ಆದ್ದರಿಂದ ಈ ಭೂಮಿ ಮುಂದೆಯೂ ಅರಣ್ಯವಾಗಿಯೇ ಉಳಿಯುತ್ತದೆ' ಎಂದರು. -ಸಚಿವ ಈಶ್ವರ್ ಖಂಡ್ರೆ


ಉದಯವಾಹಿನಿ ಚಿತ್ರ

**ಅತಿಕ್ರಮಣದಿಂದ ಭೂಮಿ ತೆರವು**

'ಅರಣ್ಯ ಭೂಮಿಯ ಅತಿಕ್ರಮಣವನ್ನು ಅರಣ್ಯ ಇಲಾಖೆ ಮಾಡಿಲ್ಲ ಬದಲಿಗೆ ಅದಕ್ಕೆ ನೇರ ಹೊಣೆ. ಕರ್ನಾಟಕ ಅರಣ್ಯ ಕಾಯ್ದೆ, 1963ರ ಸೆಕ್ಷನ್ 64ಂ ಅಡಿಯಲ್ಲಿ ಈ ಭೂಮಿಯನ್ನು ಅತಿಕ್ರಮಣದಿಂದ ತೆರವುಗೊಳಿಸಿದ ನಂತರ, ಅಲ್ಲಿ ರಿಯಲ್ ಎಸ್ಟೇಟ್ ಮಾಡಲು ಹೇಗೆ ಸಾಧ್ಯ, ಎಂದು ಪ್ರಶ್ನಿಸಿದರು.

ರಿಯಲ್ ಎಸ್ಟೇಟ್‌ಗೆ ಅನುಕೂಲವಾಗುವಂತೆ ಅರಣ್ಯ ಇಲಾಖೆಯು ಎಚ್‌ಎಂಟಿ ಭೂಮಿಯನ್ನು ಅತಿಕ್ರಮಣ ಮಾಡಿದೆ ಎಂಬ ಕುಮಾರಸ್ವಾಮಿ ಅವರ ಆರೋಪಕ್ಕೆ ಪ್ರತಿಕ್ರಿಯಿಸಿದ ಖಂಡ್ರೆ, 'ಅರಣ್ಯ ಭೂಮಿ ಒತ್ತುವರಿಯನ್ನು ತೆರವುಗೊಳಿಸಲು ಆದೇಶ ಹೊರಡಿಸಿರುವುದರಿಂದ ಇಲ್ಲಿ ಯಾವುದೇ ರಿಯಲ್ ಎಸ್ಟೇಟ್ ಚಟುವಟಿಕೆಗೆ ಅವಕಾಶವಿಲ್ಲ. ಹಾಗಾಗಿ ಕುಮಾರಸ್ವಾಮಿ ಅವರ ಆರೋಪಗಳಿಗೆ ಯಾವುದೇ ಅರ್ಥವಿಲ್ಲ' ಎಂದು ಹೇಳಿದರು.

| | |
|---|---|
| 1 | ಅರಣ್ಯ ಭೂಮಿಯನ್ನು ಡಿ-ನೋಟಿಫೈ |
| 2 | ತಮ್ಮನ್ನು ಹೂಗುಚ್ಛ ನೀಡಿ ಸ್ವಾಗತಿಸಿದರು |
| 3 | ಕೇವಲ 300 ಕೋಟಿಗೆ ಮಾರಾಟ ಮಾಡಿದೆ |

ಭೂ ಪರಿವರ್ತನೆ ಆಗದ ಅರಣ್ಯ ಭೂಮಿಯನ್ನು ಅತಿಕ್ರಮಣ ಮಾಡಿರುವುದು ಎಚ್‌ಎಂಟಿಯೇ ಹೊರತು ಅರಣ್ಯ ಇಲಾಖೆಯಲ್ಲ ಎಂದು ಸ್ಪಷ್ಟಪಡಿಸಿದರು. ಮುಖ್ಯ ಕಾರ್ಯದರ್ಶಿ ನೇತೃತ್ವದ ಸಮಿತಿ, ಅರಣ್ಯ ಸಚಿವರು ಅಥವಾ ಸಚಿವ ಸಂಪುಟದ ಅನುಮೋದನೆಯಿಲ್ಲದೆ ಎಚ್‌ಎಂಟಿ ಸ್ವಾಧೀನದಲ್ಲಿರುವ ಅರಣ್ಯ ಭೂಮಿಯನ್ನು ಡಿ-ನೋಟಿಫೈ ಮಾಡುವಂತೆ ಕೋರಿ ಕೆಲವು ಅಧಿಕಾರಿಗಳು ಈ ಹಿಂದೆ ಸುಪ್ರೀಂ ಕೋರ್ಟ್‌ನಲ್ಲಿ ಐಎ ಸಲ್ಲಿಸಿದ್ದರು. ಆ ಅಧಿಕಾರಿಗಳನ್ನು ಅಮಾನತುಗೊಳಿಸಲಾಯಿತು ಮತ್ತು ಶೋಕಾಸ್ ನೋಟಿಸ್‌ಗಳನ್ನು ನೀಡಲಾಯಿತು. ರಾಜ್ಯ ಸರ್ಕಾರವು ಅನ್ನು ಹಿಂಪಡೆಯಲು ಕ್ಯಾಬಿನೆಟ್ ಅನುಮೋದನೆಯನ್ನು ಪಡೆದುಕೊಂಡಿದೆ ಮತ್ತು ಜೊತೆಗೆ ನ್ಯಾಯಾಲಯದ ಮೊರೆ ಹೋಗಿದೆ ಎಂದು ಖಂಡ್ರೆ ಹೇಳಿದರು.

ಎಚ್‌ಎಂಟಿ ಭೂಮಿಯಲ್ಲಿ ಯಾವುದೇ ಅರಣ್ಯವಿಲ್ಲ, ಕಟ್ಟಡಗಳಿವೆ ಎಂದು ಕುಮಾರಸ್ವಾಮಿ ಹೇಳಿದ್ದಾರೆ. ನಾನು ಸರ್ಕಾರಿ ಅಧಿಕಾರಿಗಳೊಂದಿಗೆ ಆ ಸ್ಥಳಕ್ಕೆ ವೈಯಕ್ತಿಕವಾಗಿ ಭೇಟಿ ನೀಡಿದ್ದೆ. ಎಚ್‌ಎಂಟಿ ಅಧಿಕಾರಿಗಳೇ ಸ್ವತಃ ತಮ್ಮನ್ನು ಹೂಗುಚ್ಛ ನೀಡಿ ಸ್ವಾಗತಿಸಿದರು. ಆ ಆವರಣಕ್ಕೆ ಪ್ರವೇಶಿಸಲು ಅವರೇ ಅವಕಾಶ ನೀಡಿದ್ದಾರೆ ಹೀಗಾಗಿ ಅದನ್ನು ಅತಿಕ್ರಮಣ ಎಂದು ಹೇಗೆ ಕರೆಯಬಹುದು ಎಂದು ಕೇಳಿದರು.

ಎಚ್‌ಎಂಟಿ ವಶದಲ್ಲಿರುವ ಭೂಮಿಯ ಪೈಕಿ 280 ಎಕರೆ ಪ್ರದೇಶದಲ್ಲಿ ಈಗಲೂ ಅರಣ್ಯ ಸ್ವರೂಪದ ನೆಡುತೋಪಿದೆ. ಪಕ್ಕದಲ್ಲಿರುವ ಪಾಳುಬಿದ್ದ ಕಟ್ಟಡಗಳಲ್ಲಿ ಸಿನಿಮಾ, ಧಾರಾವಾಹಿ ಶೂಟಿಂಗ್ ನಡೆಯುತ್ತಿದೆ. ಅರಣ್ಯ ಭೂಮಿಯನ್ನು ಅಕ್ರಮವಾಗಿ ವಾಣಿಜ್ಯ ಉದ್ದೇಶಗಳಿಗೆ ಬಳಸುತ್ತಿದೆ.

ಅದು 165 ಎಕರೆ ಭೂಮಿಯನ್ನು ಕೇವಲ 300 ಕೋಟಿಗೆ ಮಾರಾಟ ಮಾಡಿದೆ. ಕುಮಾರಸ್ವಾಮಿ ಈ ಸ್ಥಳಕ್ಕೆ ಭೇಟಿ ನೀಡಿ ಎಲ್ಲವನ್ನೇ ಪರಿಶೀಲಿಸಲಿ ಎಂದು ಸವಾಲೆಸೆದರು. ರಾಜ್ಯಕ್ಕೆ ಬೆಳಕು ನೀಡಲು ತಮ್ಮ ಭೂಮಿ ಕಳೆದುಕೊಂಡ ಶರಾವತಿ ಸಂತ್ರಸ್ತರಿಗೆ ಇನ್ನೂ ಭೂಮಿಯ ಹಕ್ಕು ನೀಡಲು ಸಾಧ್ಯವಾಗಿಲ್ಲ. ಏಕೆಂದರೆ, ಅವರಿಗೆ 1950ರ ದಶಕದಲ್ಲಿ ಅರಣ್ಯ ಭೂಮಿ ಮಂಜೂರು ಮಾಡುವಾಗ ಭೂ ಪರಿವರ್ತನೆ ಮಾಡಿರಲಿಲ್ಲ. ನಂತರ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗಿದ್ದಾಗ ವಿಧಾನಮಂಡಲದಲ್ಲಿ ಚರ್ಚಿಸಿ ಡಿನೋಟಿಫೈ ಮಾಡಲಾಗಿತ್ತು. ಆದರೆ ನ್ಯಾಯಾಲಯ 1980ರ ಅರಣ್ಯ ಸಂರಕ್ಷಣಾ ಕಾಯ್ದೆ ಜಾರಿ ಬಳಿಕ ಇದಕ್ಕೆ ಅವಕಾಶವಿಲ್ಲ ಎಂದು ಹೇಳಿದೆ' ಎಂದು ತಿಳಿಸಿದರು.

> ಕೇಂದ್ರ ಸಾರ್ವಜನಿಕ ವಲಯದ ಉದ್ಯಮವಾದ ಅರಣ್ಯೇತರ ಬಳಕೆಗಾಗಿ ಅಧಿಕೃತವಾಗಿ ಪರಿವರ್ತನೆಯಾಗದ ಅರಣ್ಯ ಭೂಮಿಯನ್ನು ಅಕ್ರಮವಾಗಿ ಆಕ್ರಮಿಸಿಕೊಂಡಿದೆ ಮತ್ತು ನಂತರ ಆ ಭೂಮಿಯನ್ನು ರಿಯಲ್ ಎಸ್ಟೇಟ್ ಕಂಪನಿಗಳಿಗೆ ಮಾರಾಟ ಮಾಡಿದೆ ಎಂದು ಆರೋಪಿಸಿದರು.
> -ಸಚಿವ ಈಶ್ವರ್ ಖಂಡ್ರೆ

### 7 ಕೋಟಿ ಕನ್ನಡಿಗರ ಆಸ್ತಿ

ಎಚ್. ಎಂ. ಟಿ. ವಶದಲ್ಲಿರುವ ಅರಣ್ಯ ಭೂಮಿ 7 ಕೋಟಿ ಕನ್ನಡಿಗರ ಆಸ್ತಿ. ಇದು ಬೆಂಗಳೂರು ಜನರಿಗೆ ಅತ್ಯಗತ್ಯವಾದ ಶ್ವಾಸತಾಣ. ಲಾಲ್ ಬಾಗ್, ಕಬ್ಬನ್ ಪಾರ್ಕ್ ಗಿಂತ ದೊಡ್ಡದಾದ ಅಂದರೆ 444 ಎಕರೆ ಪ್ರದೇಶದಲ್ಲಿ ಬೃಹತ್ ಜೈವಿಕ ಉದ್ಯಾನ ನಿರ್ಮಿಸುವುದು ತಮ್ಮ ಗುರಿಯಾಗಿತ್ತು. ಇದನ್ನು ಬಹಿರಂಗವಾಗಿ ಘೋಷಿಸಲಾಗಿದೆ. ಆದರೂ ಕುಮಾರಸ್ವಾಮಿ ರಿಯಲ್ ಎಸ್ಟೇಟ್ ದಂಧೆ ಎಂದು ಆರೋಪಿಸುವುದರಲ್ಲಿ ಅರ್ಥವಿಲ್ಲ ಎಂದರು.

### ಖಂಡ್ರೆ ಸಮರ್ಥನೆ

ಕೇಂದ್ರ ಸರ್ಕಾರಿ ಸ್ವಾಮ್ಯದ ಎಚ್. ಎಂ. ಟಿ. ಭೂಪರಿವರ್ತನೆ ಆಗದ ಅರಣ್ಯ ಭೂಮಿಯನ್ನು ಅಕ್ರಮವಾಗಿ ರಿಯಲ್ ಎಸ್ಟೇಟ್ ಸಂಸ್ಥೆಗಳಿಗೆ ಮಾರಾಟ ಮಾಡಿದೆ. ಈಗ ಅದು ಅರಣ್ಯಭೂಮಿ ತೆರವಿಗೆ ಆದೇಶವಾಗಿದ್ದು, ಇಲ್ಲಿ ರಿಯಲ್ ಎಸ್ಟೇಟ್ ದಂಧೆಗೆ ಅವಕಾಶವೇ ಇರುವುದಿಲ್ಲ. ಹೀಗಾಗಿ ಎಚ್. ಡಿ. ಕುಮಾರಸ್ವಾಮಿ ಆರೋಪಕ್ಕೆ ಅರ್ಥವೇ ಇಲ್ಲ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿರುಗೇಟು ನೀಡಿದ್ದಾರೆ. ಅರಣ್ಯ ಇಲಾಖೆ ಎಚ್. ಎಂ. ಟಿ. ಭೂಮಿ ಅತಿಕ್ರಮಣ ಮಾಡಿದೆ, ರಿಯಲ್ ಎಸ್ಟೇಟ್ ದಂಧೆ ನಡೆಸಲು ರಾಜ್ಯ ಸರ್ಕಾರ ಹುನ್ನಾರ ನಡೆಸಿದೆ ಎಂದು ಕುಮಾರಸ್ವಾಮಿ ಆರೋಪಿಸಿರುವ ಬಗ್ಗೆ ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಭೂ ಪರಿವರ್ತನೆ ಆಗದ ಅರಣ್ಯ ಭೂಮಿಯನ್ನು ಅತಿಕ್ರಮಣ ಮಾಡಿರುವುದು ಎಚ್. ಎಂ. ಟಿ. ಯೋ ಹೊರತು ಅರಣ್ಯ ಇಲಾಖೆಯಲ್ಲ.

## ಶ್ವೇತಪತ್ರ ಬಿಡುಗಡೆ ಮಾಡಲು ವಿಪಕ್ಷ ನಾಯಕ ಆಗ್ರಹ



• ಉದಯವಾಹಿನಿ, ಆನೇಕಲ್

ರಾಜ್ಯ ಸರ್ಕಾರ ತಕ್ಷಣವೇ ಶ್ವೇತಪತ್ರ ಬಿಡುಗಡೆ ಮಾಡಲಿ ರಾಜ್ಯದಲ್ಲಿ ಎಷ್ಟು ಕೈಗಾರಿಕಾ ಪ್ರದೇಶಗಳನ್ನು ನಿರ್ಮಿಸಲಾಗಿದ್ದು, ಅವುಗಳಲ್ಲಿ ಎಷ್ಟು ಭೂಮಿ ಖಾಲಿ ಉಳಿದಿದೆ ಎಂಬ ಮಾಹಿತಿಯನ್ನು ಸಾರ್ವಜನಿಕರ ಮುಂದಿಡಬೇಕು ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ತಿಳಿಸಿದರು.

ಸರ್ಜಾಪುರ ಹೋಬಳಿ ವ್ಯಾಪ್ತಿಯ 11 ಹಳ್ಳಿಗಳಲ್ಲಿ ಕೆಐಎಡಿಬಿ ಸಂಸ್ಥೆಯು ಕೃಷಿ ಭೂಮಿಗಳನ್ನು ಭೂ ಸ್ವಾಧೀನ ಮಾಡಿಕೊಳ್ಳಲು ಮುಂದಾಗಿದ್ದು, ಇನ್ನು ಅಕ್ರಮ ಭೂ ಸ್ವಾಧೀನವನ್ನು ವಿರೋಧಿಸಿ ಮುತ್ತಾನಲ್ಲೂರು ಗ್ರಾಮ ಹಾಗೂ ಹಂದೇನಹಳ್ಳಿ ಗ್ರಾಮದಲ್ಲಿ ಕಳೆದ 800 ದಿನಗಳಿಂದ ರೈತರು ಹಮ್ಮಿಕೊಂಡಿರುವ ದರಣಿ ಸತ್ಯಾಗ್ರಹದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕೈಗಾರಿಕೆಗಳಿಗಾಗಿ ಮೀಸಲಾಗಿರುವ ಭೂಮಿಯ ಬಹುಪಾಲು ಜಾಗ ಖಾಲಿ ಇದ್ದರೂ ಅದನ್ನು ಬಳಸಿಕೊಳ್ಳುವ ಪ್ರಯತ್ನ ಮಾಡದೆ ರೈತರ ಫಲವತ್ತಾದ ಭೂಮಿಯನ್ನು ಸ್ವಾಧೀನಪಡಿಸಿಕೊಳ್ಳಲು ಸರ್ಕಾರ ಮುಂದಾಗಿದೆ. ಕೈಗಾರಿಕೆ ಎಂಬ ಹೆಸರಿನಲ್ಲಿ ಭೂಮಿಯನ್ನು ಪಡೆದು ನಂತರ ರಿಯಲ್ ಎಸ್ಟೇಟ್ ವ್ಯವಹಾರಗಳಿಗೆ ಬಳಸುವ ಯತ್ನ ನಡೆಯುತ್ತಿದೆ ಎಂದರು. ಮುಂದಿನ ಹತ್ತು ದಿನಗಳೊಳಗೆ ತಾಲ್ಲೂಕು ಕಚೇರಿಗೆ ಬೀಗ ಜಡಿಯುವ ಹೋರಾಟ ಹಮ್ಮಿಕೊಳ್ಳಿ. ಆ ಹೋರಾಟದಲ್ಲಿ ನಾನೂ ಭಾಗವಹಿಸು ತ್ತೇನೆ. ಮುಂದಿನ ಅಧಿವೇಶನ ರೈತರ ಹೋರಾಟದ ಅಧಿವೇಶನವಾಗಲಿದೆ ಎಂದರು. ರಾಜ್ಯ ಕಾಂಗ್ರೆಸ್ ಸರ್ಕಾರ ಲಾಭವಿಲ್ಲದೆ ಏನನ್ನೂ ಮಾಡುವುದಿಲ್ಲ. ಕಾಂಗ್ರೆಸ್ ಸರ್ಕಾರ ಕಮಿಷನ್ ಸರ್ಕಾರವಾಗಿದೆ. ರೈತರು ನ್ಯಾಯಯುತ ಬೇಡಿಕೆಗಳನ್ನು ಸಲ್ಲಿಸಲು ತೆರಳಿದಾಗ ಅವರನ್ನು ಪೊಲೀಸರು ತಡೆದು ಲಾಠಿ ಪ್ರಹಾರ ನಡೆಸಿರುವುದು ಖಂಡನೀಯ ಎಂದರು. ನಾನು ಗೃಹ ಸಚಿವನಾಗಿ ಕೆಲಸ ಮಾಡಿದ್ದೇನೆ.

> ರೈತರ ಮೇಲೆ ಕೈ ಮಾಡಿದವರ ವಿಷಯವನ್ನು ವಿಧಾನಸಭೆಯಲ್ಲೂ ಸಹ ಪ್ರಸ್ತಾಪಿಸುತ್ತೇವೆ. ಇನ್ನು ಮುಂದಿನ ದಿನಗಳಲ್ಲಿ ಪೊಲೀಸರು ರೈತರ ಮೇಲೆ ಕೈ ಮಾಡಿದರೆ ಹುಷಾರ್ ಎಂದು ಆರ್. ಅಶೋಕ್ ಎಚ್ಚರಿಕೆ ನೀಡಿದರು.

## ಟಿಕೆಟ್ ಆಕಾಂಕ್ಷಿಗಳ ಸಭೆ ನಡೆಸಿದ ಎಚ್ ಡಿಕೆ, ಸನ್ನದ್ಧರಾಗುವಂತೆ ಕರೆ..!

• ಉದಯವಾಹಿನಿ, ಬೆಂಗಳೂರು

ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಚುನಾವಣೆಗೆ ಜೆಡಿಎಸ್ ಸಿದ್ಧತೆ ಆರಂಭಿಸಿದ್ದು, ಕೇಂದ್ರ ಸಚಿವ ಹಾಗೂ ಜೆಡಿಎಸ್ ರಾಜ್ಯಾಧ್ಯಕ್ಷ ಹೆಚ್.ಡಿ.ಕುಮಾರಸ್ವಾಮಿ ಅವರು ಪಕ್ಷದ ಟಿಕೆಟ್ ಆಕಾಂಕ್ಷಿಗಳ ಸಭೆ ನಡೆಸಿದರು.

ಜೆಡಿಎಸ್ ಕೇಂದ್ರ ಕಚೇರಿಯಲ್ಲಿ ನಡೆದ ಐದು ಗ್ರೇಟರ್ ಬೆಂಗಳೂರು ವಿಭಾಗಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಟಿಕೆಟ್ ಆಕಾಂಕ್ಷಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿದ ಅವರು, ಜಿಬಿಎ ಚುನಾವಣೆಯ ದಿನಾಂಕವನ್ನು ಯಾವುದೇ ಕ್ಷಣದಲ್ಲಿ ಘೋಷಿಸಬಹುದು. ಆದ್ದರಿಂದ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರು ಈಗಿನಿಂದಲೇ ಸಂಘಟನಾ ಚಟುವಟಿಕೆಗಳನ್ನು ತೀವ್ರಗೊಳಿಸಿ ಸಂಪೂರ್ಣ ಸನ್ನದ್ಧರಾಗಬೇಕು ಎಂದು ಕರೆ ನೀಡಿದರು.

ಇದೇ ವೇಳೆ ರಾಜ್ಯ ಸರ್ಕಾರ ಜಿಬಿಎ ಚುನಾವಣೆಯನ್ನು


ಉದಯವಾಹಿನಿ ಚಿತ್ರ

ಹಲವು ಬಾರಿ ಮುಂದೂಡಿದೆ ಎಂದು ಆರೋಪಿಸಿದ ಕುಮಾರಸ್ವಾಮಿ ಅವರು, ಚುನಾವಣೆಯ ವೇಳಾಪಟ್ಟಿ ಯಾವಾಗ ಬೇಕಾದರೂ ಪ್ರಕಟವಾಗಬಹುದು. ಪ್ರತಿಯೊಬ್ಬರೂ ಸಂಪೂರ್ಣ ಸಿದ್ಧರಾಗಿರಬೇಕು ಎಂದು ಹೇಳಿದರು.

ಬಳಿಕ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದ ಅವರು, ರಾಜ್ಯ ಸರ್ಕಾರದ ದುರಾಡಳಿತದಿಂದ ಕಾಂಗ್ರೆಸ್ ವಿರುದ್ಧ ಜನರಲ್ಲಿ ಆಡಳಿತ ವಿರೋಧಿ ಅಲೆ ಆರಂಭವಾಗಿದೆ. ತೆರಿಗೆದಾರರ ಹಣವನ್ನು ದುರುಪಯೋಗಪಡಿಸಿಕೊಂಡು ಬೆಂಗಳೂರನ್ನು ಸರ್ಕಾರ ಎಟಿಎಂ ಆಗಿ ಪರಿವರ್ತಿಸಿದೆ. ನಗರದಲ್ಲಿ ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿವೆ. ಸರ್ಕಾರಿ ಯೋಜನೆಗಳ ಹೆಸರಿನಲ್ಲಿ ಕಮಿಷನ್ ವಸೂಲಿ ನಡೆಯುತ್ತಿದೆ. ತೆರವುಗೊಳ್ಳದ ಕಸ ಹಾಗೂ ಹದಗೆಟ್ಟ ರಸ್ತೆಗಳ ಕಾರಣ ಜನಜೀವನ ದುಸ್ತರವಾಗಿದೆ ಎಂದು ಆರೋಪಿಸಿದರು.

> ಗ್ಯಾರಂಟಿ ಯೋಜನೆಗಳಿಗೆ ಹಣ ಹೊಂದಿಸಲು ಆಸ್ತಿ ತೆರಿಗೆ ಸೇರಿದಂತೆ ವಿವಿಧ ಶುಲ್ಕಗಳನ್ನು ಸರ್ಕಾರ ಹೆಚ್ಚಿಸಿದೆ. ಈ ವಿಷಯಗಳನ್ನು ಜನರಿಗೆ ಪರಿಣಾಮಕಾರಿಯಾಗಿ ತಲುಪಿಸುವಂತೆ ಪಕ್ಷದ ಮುಖಂಡರಿಗೆ ಸೂಚಿಸಿದರು.
> -ಹೆಚ್.ಡಿ.ಕುಮಾರಸ್ವಾಮಿ

## ಸ್ನೇಹಿತನಿಗೆ ಕೊನೆಯ ಸಂದೇಶ ರವಾನೆ; ಸ್ಯಾಂಕಿ ಕೆರೆಗೆ ಹಾರಿ ವಿದ್ಯಾರ್ಥಿನಿ ಆತ್ಮಹತ್ಯೆ!

• ಉದಯವಾಹಿನಿ, ಬೆಂಗಳೂರು

ಸ್ಯಾಂಕಿ ಕೆರೆಯಲ್ಲಿ ವಿದ್ಯಾರ್ಥಿನಿಯೊಬ್ಬಳ ಮೃತದೇಹ ಪತ್ತೆಯಾಗಿರುವ ಘಟನೆ ಇಂದು ಬೆಳಗ್ಗೆ ವರದಿಯಾಗಿದೆ. ಮೃತಳನ್ನು ತೇಜಸ್ವಿನಿ ರಾಜ್.ಪಿ (20) ಎಂದು ಗುರುತಿಸಲಾಗಿದ್ದು, ಮೇಲ್ನೋಟಕ್ಕೆ ಆತ್ಮಹತ್ಯೆ ಮಾಡಿಕೊಂಡಿರುವುದು ಬೆಳಕಿಗೆ ಬಂದಿದೆ.



ಚಿಕ್ಕಬಾಣವಾರದ ನಿವಾಸಿಯಾಗಿದ್ದ ತೇಜಸ್ವಿನಿ ಸೋಮವಾರ ಸ್ನೇಹಿತನಿಗೆ ಮೆಸೇಜ್ ಮಾಡಿ ಆತ್ಮಹತ್ಯೆಗೆ ಶರಣಾಗಿರುವುದು ಪೊಲೀಸರ ಪ್ರಾಥಮಿಕ ತನಿಖೆಯಿಂದ ತಿಳಿದು ಬಂದಿದೆ ಎಂದು ಸದಾಶಿವನಗರ ಠಾಣೆ ಪೊಲೀಸರು ತಿಳಿಸಿದ್ದಾರೆ.

ಚಿಕ್ಕಬಾಣಾವರ ಸಮೀಪದ ಖಾಸಗಿ ಕಾಲೇಜಿನಲ್ಲಿ ಅಂತಿಮ ವರ್ಷದ ಡಿಗ್ರಿ ವ್ಯಾಸಂಗ ಮಾಡುತ್ತಿದ್ದ ತೇಜಸ್ವಿನಿ ನಿನ್ನೆ ಮಧ್ಯಾಹ್ನ ಕಾಲೇಜಿನಿಂದ ಹೊರಟಿದ್ದಳು. ತಾನು ಸದಾಶಿವನಗರದ ಸ್ಯಾಂಕಿ ಕೆರೆ ಬಳಿ ಹೋಗುತ್ತಿದ್ದು, ಸಾಯುವುದಾಗಿ ಸ್ನೇಹಿತನಿಗೆ ಮೆಸೇಜ್ ಮಾಡಿದ್ದಳು.

ಆತ ತೇಜಸ್ವಿನಿಯ ತಾಯಿಗೆ ಮೆಸೇಜ್ ಫಾರ್ವರ್ಡ್ ಮಾಡಿ ವಿಷಯ ತಿಳಿಸಿದ್ದಾನೆ.

ಕೂಡಲೇ ತಾಯಿ ಸದಾಶಿವನಗರ ಪೊಲೀಸರಿಗೆ ಮಾಹಿತಿ ನೀಡಿದ್ದು, ಪೊಲೀಸರು ಹಾಗೂ ಕುಟುಂಬಸ್ಥರು ತಡರಾತ್ರಿಯವರೆಗೆ ಹುಡುಕಾಟ ನಡೆಸಿದ್ದರು.

# ಜೀವನೋಪಾಯ ಕಳೆದುಕೊಂಡ ಬೀದಿ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ'

## ಸುಪ್ರೀಂಕೋರ್ಟ್‌ನ ಮಾರ್ಗಸೂಚಿಗಳನ್ನು ಅನುಸರಿಸುತ್ತಿದೆಯೇ ಎಂಬ ಪ್ರಶ್ನೆಯನ್ನೂ ಎತ್ತಿವೆ

• ಉದಯವಾಹಿನಿ, ಬೆಂಗಳೂರು

ಬೀದಿ ವ್ಯಾಪಾರಿಗಳನ್ನು ಜೀವನೋಪಾಯದಿಂದ ಹೊರಹಾಕುವುದಿಲ್ಲ ಬದಲಾಗಿ ಅವರಿಗೆ ಪರ್ಯಾಯ ಸ್ಥಳಗಳನ್ನು ಕಲ್ಪಿಸಿ ಸ್ಥಳಾಂತರಿಸಲಾಗುವುದು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿಳಿಸಿದ್ದಾರೆ.

| | |
|---|---|
| 1 | ಬೀದಿ ವ್ಯಾಪಾರಿಗಳ ಆತಂಕ |
| 2 | ಸುರಕ್ಷತೆ ಸಂಚಾರ ವ್ಯವಸ್ಥೆ |
| 3 | ಯೋಜನೆ ಇಲ್ಲದೆ ಬೇರೆಡೆಗೆ |

ಪಾದಚಾರಿಗಳ ಸುರಕ್ಷತೆ ಹಾಗೂ ಸಂಚಾರ ವ್ಯವಸ್ಥೆಯನ್ನು ಸುಧಾರಿಸುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗುತ್ತಿದ್ದು, ಇದನ್ನು ವ್ಯಾಪಾರಿಗಳನ್ನು ತೆರವುಗೊಳಿಸುವ ಕಾರ್ಯಾಚರಣೆಯಾಗಿ ನೋಡಬಾರದು ಎಂದು ಅವರು ಹೇಳಿದ್ದಾರೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ ನಡೆಸುತ್ತಿರುವ ಪಾದಚಾರಿ ಮಾರ್ಗ ತೆರವು ಅಭಿಯಾನದ ಹಿನ್ನೆಲೆಯಲ್ಲಿ ಜೀವನೋಪಾಯದ ಬಗ್ಗೆ ಬೀದಿ ವ್ಯಾಪಾರಿಗಳಲ್ಲಿ ಆತಂಕ ವ್ಯಕ್ತವಾಗಿರುವ ಸಂದರ್ಭದಲ್ಲೇ ಮುಖ್ಯಮಂತ್ರಿ ಈ ಸ್ಪಷ್ಟನೆ ನೀಡಿದ್ದಾರೆ. ಸರ್ಕಾರವು ಬೀದಿ ವ್ಯಾಪಾರಿಗಳನ್ನು ಸ್ಥಳಾಂತರಗೊಳಿಸುವ ಉದ್ದೇಶ ಹೊಂದಿಲ್ಲ, ಬದಲಾಗಿ ಮುಖ್ಯ ರಸ್ತೆಗಳು ಮತ್ತು ಜನದಟ್ಟಣೆಯ ಪಾದಚಾರಿ ಮಾರ್ಗಗಳಿಂದ ಸೂಕ್ತ ಸ್ಥಳಗಳಿಗೆ ಸ್ಥಳಾಂತರಿಸಲು ಮುಂದಾಗಿದೆ ಎಂದರು. ಸರ್ಕಾರದ ಯೋಜನೆಯಂತೆ, ಒಳರಸ್ತೆಗಳು ಹಾಗೂ ಗುರುತಿಸಲಾದ ವೆಂಡಿಂಗ್ ವಲಯಗಳಲ್ಲಿ ವ್ಯಾಪಾರ ಮುಂದುವರಿಸಲು ಅವಕಾಶ ನೀಡಲಾಗುತ್ತದೆ.

ನಗರದ ವಿವಿಧ ಭಾಗಗಳಲ್ಲಿ ಪಾದಚಾರಿ ಮಾರ್ಗಗಳ ಮೇಲಿನ ಅತಿಕ್ರಮಣ ತೆರವು ಕಾರ್ಯಾಚರಣೆ ಮುಂದುವರಿದಿರುವ ವೇಳೆಯೇ ಮುಖ್ಯಮಂತ್ರಿಗಳು ಈ ಹೇಳಿಕೆ ನೀಡಿದ್ದಾರೆ. ತಳ್ಳುಗಾಡಿಗಳು, ತಾತ್ಕಾಲಿಕ ನಿರ್ಮಾಣಗಳು ಇತರ ಅಡಚಣೆಗಳನ್ನು ತೆರವುಗೊಳಿಸಲಾಗುತ್ತಿದ್ದು, ವೇಗವಾಗಿ ಬೆಳೆಯುತ್ತಿರುವ ಬೆಂಗಳೂರಿನಲ್ಲಿ ಪಾದಚಾರಿಗಳಿಗೆ ವಿಶಾಲ ಮತ್ತು ಸುರಕ್ಷಿತ ಮಾರ್ಗ ಕಲ್ಪಿಸುವುದು ಅಗತ್ಯ ಎಂಬುದು ಸರ್ಕಾರದ ವಾದವಾಗಿದೆ.

> ಈ ವರ್ಷದ ಮಾರ್ಚ್‌ನಲ್ಲಿ, ಬೆಂಗಳೂರಿನ ಮುಖ್ಯ ಹಾಗೂ ಉಪಮುಖ್ಯ ರಸ್ತೆಗಳಲ್ಲಿ ಬೀದಿ ವ್ಯಾಪಾರವನ್ನು ನಿಯಂತ್ರಿಸಿ, ವ್ಯಾಪಾರಿಗಳಿಗಾಗಿ ಪ್ರತ್ಯೇಕ ವೆಂಡಿಂಗ್ ವಲಯಗಳನ್ನು ಸೃಷ್ಟಿಸುವ ಹೊಸ ನೀತಿ ಜಾರಿಗೊಳಿಸುವುದಾಗಿ ಘೋಷಿಸಿದ್ದರು. -ಡಿ ಕೆ ಶಿವಕುಮಾರ್

> ಮಾನ್ಯ ಗುರುತಿನ ಚೀಟಿ ಹೊಂದಿರುವ ನೋಂದಾಯಿತ ಬೀದಿ ವ್ಯಾಪಾರಿಗಳಿಗೆ ಮಾತ್ರ ಅನುಮೋದಿತ ಸ್ಥಳಗಳಲ್ಲಿ ವ್ಯಾಪಾರ ಮಾಡಲು ಅವಕಾಶ ನೀಡಲಾಗುತ್ತದೆ. ಇದೇ ವೇಳೆ ಅಕ್ರಮ ಫ್ಲೆಕ್ಸ್‌ಗಳು ಹಾಗೂ ರಸ್ತೆಯಲ್ಲಿ ಬಿಟ್ಟಿರುವ ವಾಹನಗಳ ವಿರುದ್ಧವೂ ಕ್ರಮ ಕೈಗೊಳ್ಳಲಾಗುತ್ತಿದೆ. -ಡಿ ಕೆ ಶಿವಕುಮಾರ್



ಇದಕ್ಕೆ ಬೀದಿ ವ್ಯಾಪಾರಿಗಳು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದು, ಈ ಕಾರ್ಯಾಚರಣೆಯಿಂದ ತಮ್ಮ ದೈನಂದಿನ ಆದಾಯಕ್ಕೆ ಹೊಡೆತ ಬಿದ್ದಿದೆ ಹಾಗೂ ಇದು ಮತ್ತೊಂದು ರೀತಿಯ ತೆರವು ಕಾರ್ಯಾಚರಣೆಯಾಗಿದೆ ಎಂದು ಆರೋಪಿಸಿದ್ದಾರೆ. ಮುಖ್ಯ ರಸ್ತೆಗಳಲ್ಲಿನ ಜನಸಂದಣಿಯೇ ತಮ್ಮ ವ್ಯಾಪಾರದ ಆಧಾರವಾಗಿದ್ದು, ಸೂಕ್ತ ಯೋಜನೆ ಇಲ್ಲದೆ ಬೇರೆಡೆಗೆ ಸ್ಥಳಾಂತರಿಸಿದರೆ ತಮ್ಮ ಜೀವನೋಪಾಯವೇ ನಾಶವಾಗಬಹುದು ಎಂದು ಅವರು ಆತಂಕ ವ್ಯಕ್ತಪಡಿಸಿದ್ದಾರೆ. ಬೀದಿ ವ್ಯಾಪಾರಿಗಳ ಸಂಘಟನೆಗಳು, ಈ ಸ್ಥಳಾಂತರ ಯೋಜನೆಯು ಬೀದಿ ವ್ಯಾಪಾರಿಗಳ ಕಾಯ್ದೆ, 2014 ಹಾಗೂ ಸುಪ್ರೀಂ ಕೋರ್ಟ್‌ನ ಮಾರ್ಗಸೂಚಿಗಳನ್ನು ಅನುಸರಿಸುತ್ತಿದೆಯೇ ಎಂಬ ಪ್ರಶ್ನೆಯನ್ನೂ ಎತ್ತಿವೆ. ಅನೇಕ ವ್ಯಾಪಾರಿಗಳಿಗೆ ಇನ್ನೂ ಗುರುತಿನ ಚೀಟಿ ಅಥವಾ ಅಧಿಕೃತ ವ್ಯಾಪಾರ ಪ್ರಮಾಣಪತ್ರಗಳು ನೀಡಲಾಗಿಲ್ಲ ಎಂದು ಅವು ಹೇಳಿವೆ. ಸ್ಪಷ್ಟವಾದ ವೆಂಡಿಂಗ್ ವಲಯಗಳನ್ನು ಗುರುತಿಸದಿದ್ದರೆ, ಸಾವಿರಾರು ಜನರು ಶಾಶ್ವತ ವ್ಯಾಪಾರ ಸ್ಥಳವಿಲ್ಲದೆ ಸಂಕಷ್ಟಕ್ಕೆ ಸಿಲುಕುವ ಭೀತಿ ಇದೆ ಎಂದು ಅವು ಎಚ್ಚರಿಸಿವೆ.

**ಸ್ಥಳಾಂತರ ಪ್ರಕ್ರಿಯೆ ನ್ಯಾಯಸಮ್ಮತ**

ಬೀದಿ ವ್ಯಾಪಾರಿಗಳ ಪಾಲಿಗೆ ಮುಖ್ಯ ಪ್ರಶ್ನೆಯೆಂದರೆ, ಈ ಸ್ಥಳಾಂತರ ಪ್ರಕ್ರಿಯೆ ಪ್ರಾಯೋಗಿಕ, ನ್ಯಾಯಸಮ್ಮತ ಮತ್ತು ಜೀವನೋಪಾಯ ಸ್ನೇಹಿಯಾಗಿರುತ್ತದೆಯೇ ಅಥವಾ ಸಾರ್ವಜನಿಕ ಸ್ಥಳಗಳಿಂದ ಅವರನ್ನು ಕ್ರಮೇಣ ದೂರ ಮಾಡುವ ಸಾಧನವಾಗುತ್ತದೆಯೇ ಎಂಬುದಾಗಿದೆ.

# ಡಾ. ಬಾಬು ಜಗಜೀವನ್ ರಾಮ್ 40ನೇ ಪುಣ್ಯಸ್ಮರಣೆ ಆಚರಣೆ

• ಉದಯವಾಹಿನಿ, ಗುಂಡ್ಲುಪೇಟೆ


ಉದಯವಾಹಿನಿ ಚಿತ್ರ

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಜಯಕರ್ನಾಟಕ ರಕ್ಷಣಾ ಸೇನೆಯ ವತಿಯಿಂದ ಡಾ. ಬಾಬು ಜಗಜೀವನ್ ರಾಮ್ ಅವರ 40ನೇ ಪುಣ್ಯಸ್ಮರಣೆಯನ್ನು ಅದ್ದೂರಿಯಾಗಿ ಆಚರಿಸಲಾಯಿತು.

ಜಿಲ್ಲಾ ಗೌರವಾಧ್ಯಕ್ಷೆ ಪುಟ್ಟಮ್ಮ ಮಾತನಾಡಿ ಬಾಬು ಜಗಜೀವನ್ ರಾಮ್ ಅವರು ದಲಿತರ ಏಳಿಗೆಗಾಗಿ ಹಾಗೂ ದೇಶದ ಅಭಿವೃದ್ಧಿಗಾಗಿ ಜೀವನವನ್ನೇ ಮುಡಿಪಾಗಿಟ್ಟ ಮಹಾನ್ ನಾಯಕರು ಎಂದು ಬಣ್ಣಿಸಿದರು. ಸಂಘಟನೆ ಜಿಲ್ಲಾಧ್ಯಕ್ಷ ಎಸ್. ಈಶ್ವರ ಮಾತನಾಡಿ, ಬಾಬುಜಿ ಅವರು 30 ಕ್ಕೂ ಹೆಚ್ಚು ವರ್ಷಗಳ ಕಾಲ ಲೋಕಸಭಾ ಸದಸ್ಯರಾಗಿ ಸೇವೆ ಸಲ್ಲಿಸಿದ್ದು, ಸ್ವಾತಂತ್ರ್ಯಕ್ಕೂ ಮುನ್ನ ಹಾಗೂ ನಂತರದ ಸರ್ಕಾರಗಳಲ್ಲಿ ಪ್ರಮುಖ ಹುದ್ದೆಗಳನ್ನು ಅಲಂಕರಿಸಿದ್ದರು.

ಕಾರ್ಮಿಕ ಸಚಿವ, ಆಹಾರ ಮತ್ತು ಕೃಷಿ ಸಚಿವ, ಉಪಪ್ರಧಾನಿ ಸೇರಿದಂತೆ ಹಲವು ಜವಾಬ್ದಾರಿಗಳನ್ನು ನಿರ್ವಹಿಸಿ ಮೇರು ನಾಯಕರಾಗಿ ಹೊರಹೊಮ್ಮಿದರು ಎಂದು ತಿಳಿಸಿದರು. ಗವಿ ಗರ್ಜನೆಯ ಸಂಪಾದಕ ಗವಿಸ್ವಾಮಿ ಮಾತನಾಡಿ ಬಾಬುಜಿ ಅವರು ಜಾತಿ-ಧರ್ಮ ಮೀರಿ ರಾಷ್ಟ್ರಸೇವೆ ಮಾಡಿದ ಮಹನೀಯರು. ಯುವಜನತೆ ಅವರ ಜೀವನದಿಂದ ಸ್ಫೂರ್ತಿ ಪಡೆಯಬೇಕು ಎಂದು ಹೇಳಿದರು. ಹಿರಿಯ ಹೋರಾಟಗಾರ ಬ್ರಹ್ಮಾನಂದ ಅವರು ಮಾತನಾಡಿ, ಕೆಲಸವೇ ಪೂಜೆ ಎಂಬ ಸಿದ್ಧಾಂತವನ್ನು ಎಲ್ಲರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಈ ಸಂದರ್ಭದಲ್ಲಿ ಬಾಬು ಜಗಜೀವನ್ ರಾಮ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಕಾರ್ಯಕ್ರಮದಲ್ಲಿ ಜಯ ಕರ್ನಾಟಕ ರಕ್ಷಣಾ ಸೇನೆಯ ಗುಂಡ್ಲುಪೇಟೆ ತಾಲ್ಲೂಕು ಅಧ್ಯಕ್ಷ ಸಯ್ಯದ್ ಅನ್ಸರ್, ಬೇಗೂರು ಹೋಬಳಿ ಘಟಕದ ಅಧ್ಯಕ್ಷ ಚೆನ್ನವಾಡೆಯನಪುರ ಪುಟ್ಟು, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಕ್ಕೂರ್ ನಾಗರಾಜು, ಜಿಲ್ಲಾ ಉಪಾಧ್ಯಕ್ಷ ಡ್ಯಾನ್ಸ್ ಮಾಸ್ಟರ್ ಅವಿನಾಶ್, ತಾಲ್ಲೂಕು ಅಧ್ಯಕ್ಷ ಅಜಿತ್ ಕುಮಾರ್, ಎಲೆಕ್ಟ್ರಿಕಲ್ ಸಿದ್ದು, ಎಂಆರ್‌ಜಿ ನ್ಯೂಸ್ ಕರ್ನಾಟಕ, ಕನ್ನಡ ರಕ್ಷಣಾ ವೇದಿಕೆಯ ಜಿಲ್ಲಾಧ್ಯಕ್ಷ ದೇವರಾಜು, ಸಂಪಿಗೆ ಸ್ವಸಹಾಯ ಸಂಘದ ಸದಸ್ಯರು ಹಾಗೂ ಜಯ ಕರ್ನಾಟಕ ರಕ್ಷಣಾ ಸೇನೆಯ ಪದಾಧಿಕಾರಿಗಳು ಹಾಜರಿದ್ದರು.

# ಹಲವು ಹೊಸ ಯೋಜನೆ ಜಾರಿಗೆ ಡಿ.ಕೆ.ಸುರೇಶ್ ಕ್ರಮ

## ವೈಜ್ಞಾನಿಕ ಪದ್ಧತಿಗಳನ್ನು ಬಲಗೊಳ್ಳುತ್ತಿದ್ದು,ರೈತರಿಗೆ ದೀರ್ಘಾವಧಿಯಲ್ಲಿ ಹೆಚ್ಚಿನ ಆರ್ಥಿಕ ಲಾಭ ದೊರೆಯಲಿದೆ

• ಉದಯವಾಹಿನಿ, ಕನಕಪುರ


ಉದಯವಾಹಿನಿ ಚಿತ್ರ

ಹೈನುಗಾರಿಕೆಯತ್ತ ರೈತರನ್ನು ಸೆಳೆಯಲು ಬಮೂಲ್ ಅಧ್ಯಕ್ಷ ಡಿ.ಕೆ.ಸುರೇಶ್ ಹಲವು ಹೊಸ ಯೋಜನೆಗಳನ್ನು ಕೈಗೊಂಡಿದ್ದಾರೆ ಎಂದು ಬೆಂಗಳೂರು ಹಾಲು ಒಕ್ಕೂಟದ ನಿವೃತ್ತ ವ್ಯವಸ್ಥಾಪಕ ನಿರ್ದೇಶಕ ಡಿ.ಸಿ.ನಾಗರಾಜಯ್ಯ ಹೇಳಿದ್ದಾರೆ.

ಸಾತನೂರು ಹೋಬಳಿಗೆ ಸೇರಿದ ಕುರುಬಳ್ಳಿ ಗ್ರಾಮದ ಹಾಲು ಉತ್ಪಾದಕರ ಸಹಕಾರ ಸಂಘದ ಆಶ್ರಯದಲ್ಲಿ ಬೆಂಗಳೂರು ಸಹಕಾರ ಹಾಲು ಒಕ್ಕೂಟವು ಹಮ್ಮಿಕೊಂಡಿದ್ದ ತಳಿ ಅಭಿವೃದ್ಧಿ, ಲಿಂಗ ನಿರ್ಧರಿತ ವೀರ್ಯ ನಳಿಕೆಗಳ ಬಳಕೆ ಉತ್ಕೃಷ್ಟ ಹೆಣ್ಣು ಕರುಗಳ ಜನನ, ಬಂಜೆತನ ನಿವಾರಣಾ ಶಿಬಿರದ ಉದ್ಘಾಟನೆ ಮಾಡಿ ಅವರು ಮಾತನಾಡಿದರು.

ಹಾಲು ಉತ್ಪಾದನೆಯನ್ನು ಹೆಚ್ಚಿಸುವ ಮೂಲಕ ರೈತರನ್ನು ಹೈನುಗಾರಿಕೆ ಯತ್ತ ಸೆಳೆಯಲು ಡಿ.ಕೆ.ಸುರೇಶ್ ಹೊಸ ಹೊಸ ಕ್ರಮಗಳನ್ನು ಕೈಗೊಳ್ಳುತಿದ್ದಾರೆ.

ಪ್ರಮುಖವಾಗಿ ಹೆಣ್ಣು ಕರುಗಳಿಗೆ ಜನ್ಮನೀಡುವ ಉತ್ತಮ ತಳಿಯ ಹಸುಗಳ ಸಂರಕ್ಷಣೆ ಮಾಡುವ ಮೂಲಕ ಹೈನುಗಾರಿಕೆಯ ವಿಸ್ತರಣೆ ಹಾಗೂ ರೈತರ ಆದಾಯ ಹೆಚ್ಚಿಸುವ ಗುರಿ ಹೊಂದಲಾಗಿದೆ ಎಂದರು ಡಿ.ಕೆ.ಸುರೇಶ್ ನೇತೃತ್ವದಲ್ಲಿ ರಾಸುಗಳ ತಳಿ ಅಭಿವೃದ್ಧಿಗೆ ವಿಶೇಷ ಒತ್ತು ನೀಡಲಾಗುತ್ತಿದೆ. ಈ ಹಿಂದೆ ರಾಸುಗಳಲ್ಲಿ ಕೃತಕ ಗರ್ಭಧಾರಣೆಯ ಯಶಸ್ಸಿನ ಶೇ30ರಷ್ಟು ಇತ್ತು ಪ್ರಸಕ್ತವರ್ಷದ ಜನವರಿ ಫೆಬ್ರವರಿಯಿಂದ ಅದು ಶೇ.60ರಷ್ಟು ಏರಿಕೆಯಾಗುವ ಮೂಲಕ ಪಶು ಪಾಲನಾ ಕ್ಷೇತ್ರದಲ್ಲಿ ಗಮನಾರ್ಹ ಸಾಧನೆಯಾಗಿದೆ ಎಂದು ತಿಳಿಸಿದರು.

ಆರೋಗ್ಯವಂತ ರಾಸುಗಳ ಸಾಕಾಣಿಯಿಂದ ರೈತರಿಗೆ ಆದಾಯ ಹೆಚ್ಚಿಸಲು ಸಹಕಾರಿಯಾಗಲಿದೆ ಈ ಹೊಸ ಕ್ರಮಗಳಿಂದ ಹೈನುಗಾರಿಕೆ ಕ್ಷೇತ್ರದಲ್ಲಿ ವೈಜ್ಞಾನಿಕ ಪದ್ಧತಿಗಳನ್ನು ಬಲಗೊಳ್ಳುತ್ತಿದ್ದು,ರೈತರಿಗೆ ದೀರ್ಘಾವಧಿಯಲ್ಲಿ ಹೆಚ್ಚಿನ ಆರ್ಥಿಕ ಲಾಭ ದೊರೆಯಲಿದೆ ಎಂಬ ನಿರೀಕ್ಷೆಯಿದೆ ಎನ್ನುವ ಉದ್ದೇಶದಿಂದ ಹೊಸ ಪದ್ಧತಿಯನ್ನು ಡಿ.ಕೆ. ಸುರೇಶ್ ಜಾರಿಗೆ ತಂದಿದ್ದಾರೆ ಎಂದು ತಿಳಿಸಿದರು.

ನಿವೃತ್ತ ವೈದ್ಯಾಧಿಕಾರಿ ಡಾ. ವೆಂಕಟಸ್ವಾಮಿ ರೆಡ್ಡಿ ಮಾತನಾಡಿ, ಈದಿನ ಕೃತಕ ಗರ್ಭಧಾರಣಾ ಕಾರ್ಯಕರ್ತರಿಗೆ ಉತ್ತಮ ಕಾರ್ಯವಿಧಾನಗಳ ಕುರಿತು ತರಬೇತಿಯನ್ನು ನೀಡಲಾಗಿದೆ. ತಳಿ ಅಭಿವೃದ್ಧಿಗೆ ಮತ್ತು ಕೃತಕ ಗರ್ಭಧಾರಣೆಯ ಯಶಸ್ಸಿಗೆ ಪ್ರಮಾಣವನ್ನು ಹೆಚ್ಚಿಸುವ ಉದ್ದೇಶದಿಂದ ಕಾರ್ಯಕರ್ತರಿಗೆ ನಿಯಮಿತವಾಗಿ ವೀರ್ಯದ ಸುರಕ್ಷಿತ ಸಂಗ್ರಹಣೆ, ಮತ್ತು ಬಳಕೆ, ಸ್ವಚ್ಚತೆ ಮತ್ತು ಜೈವಿಕ ಸುರಕ್ಷತಾ ಕ್ರಮಗಳು,ರಾಸುಗಳಲ್ಲಿ ಈಸ್ಟ್ರಸ್‌ಗುರುತಿಸುವಿಕೆ, ವಿಧಾನಗಳ ತರಬೇತಿಯನ್ನು ಈದಿನ ನೀಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಉಪ ವ್ಯವಸ್ಥಾಪಕ ಡಾ. ಟಿ.ಸಿ.ಪ್ರಕಾಶ್,ಡಾ.ಮನು, ಸಹಾಯಕ ವ್ಯವಸ್ಥಾಪಕರಾದ ಅರುಣ್ ಕುಮಾರ್, ವಿಸ್ತರಣಾಧಿಕಾರಿಗಳಾದ ಮುನಿರಾಜು ಪರ್ಹಾಜಭೀನ್, ನೇತ್ರಾವತಿ, ಪ್ರಭಾಕರ್, ಬಸವರಾಜು, ಒಳ ಗೊಂಡಂತೆ ಕುರುಬಳ್ಳಿ ಹಾಲು ಉತ್ಪಾದಕರ ಸಹಕಾರ ಸಂಘದ ನಿರ್ದೇಶಕರಾದ ಕೆಎಂ. ವೆಂಕಟೇಶ್, ಕಾರ್ಯನಿರ್ವಾಹಕ ಶಿವಶಂಕರ್‌ಆಂಜಿ, ಹಾಲು ಪರೀಕ್ಷಕರಾದ ಸುಮಂತ್, ಸಹಾಯಕ ನಾಗೇಶ್, ಸುಚಿಗಾರ್ತಿ ಪ್ರೇಮ, ನಿರ್ದೇಶಕರಾದ ಎಂ. ಪ್ರಕಾಶ್, ಕೃಷ್ಣೇಗೌಡ ದೊಡ್ಡವೀರೇಗೌಡ, ಕೆ.ಟಿ. ರಮೇಶ್, ಕೃಷ್ಣೇಗೌಡ ಮರೀಗೌಡ, ರತ್ನಮ್ಮ, ಎಂ. ರಜನಿ, ಶಿವಲಿಂಗ ಶಿವಸ್ವಾಮಿ ಒಳಗೊಂಡಂತೆ ಸಂಘಕ್ಕೆ ಹಾಲು ಸರಬರಾಜು ಮಾಡುವ ಉತ್ಪಾದಕರು, ಗ್ರಾಮಸ್ಥರು ಉಪಸ್ಥಿತರಿದ್ದರು.

> ರೈತರನ್ನು ಆರ್ಥಿಕವಾಗಿ ಸಭಲರನ್ನಾಗಿ ಮಾಡಬೇಕು ಎಂಬ ಉದ್ದೇಶದಿಂದ ಹೈನುಗಾರಿಕೆಯ ಕ್ಷೇತ್ರದಲ್ಲಿ ಹೊಸ ಆಯಾಮವನ್ನು ನಮ್ಮ ನಾಯಕರಾದ ಡಿ.ಕೆ. ಸುರೇಶ್‌ಹೊರದೇಶಗಳಲ್ಲಿ ಬಳಸುವ ತಾಂತ್ರಿಕತೆಯನ್ನು ನಮ್ಮಲ್ಲಿ ಅಳವಡಿಸಿಕೊಳ್ಳ ಬೇಕಾದ ಎಲ್ಲಾ ಕ್ರಮಗಳನ್ನು ವೈದ್ಯಾಧಿಕಾರಿಗಳ ಮೂಲಕ ಜಾರಿಗೊಳಿಸಲಾಗುತ್ತಿದೆ ಎಂದು ತಿಳಿಸಿದರು. -ಸಂಘದ ಅಧ್ಯಕ್ಷ ಕೆ. ನಟೇಶ್

**ಮಾಹಿತಿ ಡಿಜಿಟಲಿಕರಣ ಲಭ್ಯ**

ತಳಿ ಅಭಿವೃದ್ಧಿಯನ್ನು ಇನ್ನಷ್ಟು ವೈಜ್ಞಾನಿಕವಾಗಿ ನಡೆಸುವ ಉದ್ದೇಶದಿಂದ ಕೇಂದ್ರದ ಭಾರತ್ ಪಶುಧನ್ ತಂತ್ರಾಂಶದಲ್ಲಿ ಕೃತಕ ಗರ್ಭಧಾರಣೆ ಮತ್ತು ಅದರ ವಿವರಗಳನ್ನು ದಾಖಲಿಲಾಗುತ್ತದೆ,ಇದರಿಂದ ಜನಿಸಿದ ರಾಸಿನ ಸಂಪೂರ್ಣ ಮಾಹಿತಿ ಡಿಜಿಟಲಿಕರಣ ಲಭ್ಯವಾಗಲಿದೆ ಎಂದರು.

# ಬಂಡೀಪುರದಲ್ಲಿ ಸೆರೆ ಸಿಕ್ಕ ಹುಲಿ, 5 ಮರಿಗಳು ಬನ್ನೇರುಘಟ್ಟ ಜೈವಿಕ ಉದ್ಯಾನಕ್ಕೆ ಸ್ಥಳಾಂತರ..!

• ಉದಯವಾಹಿನಿ, ಬಂಡೀಪುರ


ಉದಯವಾಹಿನಿ ಚಿತ್ರ

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ನುಗು ಅರಣ್ಯ ವಲಯದ ಮುಳ್ಳೂರು ಗ್ರಾಮದ ಬೆಣೆಗೆರೆ ಸಮೀಪ ಸೆರೆ ಹಿಡಿಯಲಾದ 12 ವರ್ಷದ ಹೆಣ್ಣು ಹುಲಿ ಹಾಗೂ ಅದರ ಐದು ಮರಿಗಳನ್ನು ಬನ್ನೇರುಘಟ್ಟ ಜೈವಿಕ ಉದ್ಯಾನವನಕ್ಕೆ ಸ್ಥಳಾಂತರಿಸಲಾಗಿದೆ. ಅರಣ್ಯ ಇಲಾಖೆ ಸಿಬ್ಬಂದಿ ಅರಣ್ಯ ಪ್ರದೇಶದಿಂದ ಸುಮಾರು 6 ಕಿ.ಮೀ. ದೂರದಲ್ಲಿರುವ ಪ್ರದೇಶದಲ್ಲಿ ಹೆಣ್ಣು ಹುಲಿ ಮತ್ತು ಮರಿಗಳನ್ನು ಸೆರೆ ಹಿಡಿದಿದ್ದರು.

ದಟ್ಟ ಪೊದೆಗಳು, ನೀರಿನ ಲಭ್ಯತೆ ಹಾಗೂ ಸಸ್ಯಾಹಾರಿ-ಮಾಂಸಾಹಾರಿ ಪ್ರಾಣಿಗಳಿಗೆ ಆಹಾರ ದೊರೆಯುತ್ತಿರುವ ಕಾರಣ ಈ ಪ್ರದೇಶ ಇತ್ತೀಚೆಗೆ ವನ್ಯಜೀವಿಗಳ ಹೊಸ ಆವಾಸಸ್ಥಾನವಾಗಿ ರೂಪುಗೊಂಡಿದೆ. ಕಳೆದ ಜೂನ್ 27ರಂದು ಈ ಹೆಣ್ಣು ಹುಲಿ ಕೃಷಿ ಕಾರ್ಮಿಕನ ಮೇಲೆ ದಾಳಿ ನಡೆಸಿತ್ತು. ಕೆಲವು ದಿನಗಳ ಹಿಂದೆ ಅರಣ್ಯ ರಕ್ಷಕನ ಮೇಲೆಯೂ ದಾಳಿ ಮಾಡಿತ್ತು. ಇದೇ ಪ್ರದೇಶದಲ್ಲಿ ಕಳೆದ ನವೆಂಬರ್‌ನಲ್ಲಿ ಮತ್ತೊಂದು ಮರಿಗಳಿದ್ದ ಹೆಣ್ಣು ಹುಲಿ ರೈತನ ಮೇಲೆ ದಾಳಿ ನಡೆಸಿದ್ದ ಘಟನೆ ಕೂಡ ನಡೆದಿತ್ತು.

ಹುಲಿಗಳು ಸಂರಕ್ಷಿತ ಪ್ರದೇಶದಿಂದ ಹೊರಬರುವ ಕಾರಣಗಳ ಬಗ್ಗೆ ಈ ಯೋಜನೆಯಡಿ ಅಧ್ಯಯನ ನಡೆಸಲಾಗುತ್ತಿದೆ ಎಂದು ಹೇಳಿದ್ದಾರೆ. ಈ ಪ್ರದೇಶದಲ್ಲಿ ಮತ್ತಷ್ಟು ಮಾಂಸಾಹಾರಿ ಪ್ರಾಣಿಗಳು ನೆಲೆಸುವುದನ್ನು ತಡೆಯಲು ಪೊದೆಗಳನ್ನು ತೆರವುಗೊಳಿಸುವ ಅಗತ್ಯವಿದೆ ಎಂದು ಅರಣ್ಯ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಕಬಿನಿ ಕಾಲುವೆಯ ಹಡಿಯಾಲದಿಂದ ಮೈಸೂರುವರೆಗೆ ಸುಮಾರು 15 ಕಿ.ಮೀ. ವ್ಯಾಪ್ತಿಯಲ್ಲಿ ದಟ್ಟ ಪೊದೆಗಳು ಬೆಳೆದಿದ್ದು, ಕ್ಯಾಮೆರಾ ಟ್ರ್ಯಾಪ್‌ಗಳಲ್ಲಿ ಹಲವು ಕಾಡುಪ್ರಾಣಿಗಳ ಸಂಚಾರ ದಾಖಲಾಗಿದೆ.ಈ ಪೊದೆಗಳಿಂದ ಕಾಡುಪ್ರಾಣಿಗಳು ಕೃಷಿಭೂಮಿಗೆ ನುಗ್ಗಿ ಬೆಳೆ ಹಾನಿ ಮಾಡುತ್ತಿರುವುದರಿಂದ ರೈತರು ಆತಂಕ ವ್ಯಕ್ತಪಡಿಸಿದ್ದಾರೆ.

**ಮನುಷ್ಯರ ಮೇಲೆ ದಾಳಿ: ಶಂಕೆ**

ಸೆರೆ ಸಿಕ್ಕ ಹೆಣ್ಣು ಹುಲಿ ಆರೋಗ್ಯವಾಗಿದ್ದರೂ, ವಯಸ್ಸಾದ ಕಾರಣ ಅದರ ಮೂರು ಕೋರೆಹಲ್ಲುಗಳು ಉದುರಿದ್ದು, ಸ್ವತಃ ಬೇಟೆಯಾಡುವ ಸಾಮರ್ಥ್ಯ ಕುಂಠಿತವಾಗಿದೆ. ಮರಿಗಳ ರಕ್ಷಣೆಯ ಆತಂಕದಿಂದಲೇ ಅದು ಮನುಷ್ಯರ ಮೇಲೆ ದಾಳಿ ನಡೆಸಿರಬಹುದು ಎಂದು ಅಂದಾಜಿಸಲಾಗಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಆರೋಪಿ ಬಂಧಿಸಿ, ಶೀಘ್ರ ಕ್ರಮಕ್ಕೆಗೊಳ್ಳಲು ವರ್ಷಾ ಆಗ್ರಹ

• ಉದಯವಾಹಿನಿ, ಮೈಸೂರು,

ಸಾಮಾಜಿಕ ಜಾಲತಾಣದಲ್ಲಿ ತಮ್ಮ ವಿರುದ್ಧ ಅಶ್ಲೀಲ ಕಮೆಂಟ್ ಹಾಕಿದ ಆರೋಪಿಯನ್ನು ಕೂಡಲೇ ಬಂಧಿಸಿ ಕ್ರಮಕ್ಕೆಗೊಳ್ಳಬೇಕು ಎಂದು ಹುಣಸೂರು ಶಾಸಕ ಜಿ.ಡಿ. ಹರೀಶ್ ಗೌಡ ಅವರ ಪತ್ನಿ ವರ್ಷಾ ಹರೀಶ್ ಗೌಡ ಆಗ್ರಹಿಸಿದ್ದಾರೆ.

ಈ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತಮ್ಮ ವಿರುದ್ಧ ಅಶ್ಲೀಲ ಕಮೆಂಟ್ ಹಾಕಿರುವ ಕುರಿತಂತೆ ಮೈಸೂರಿನ ಸೆನ್ ಪೊಲೀಸ್ ಠಾಣೆಯಲ್ಲಿ ದೂರು ನೀಡಿ 10 ದಿನಗಳಾಗಿವೆ .ಆದರೆ ಇಲ್ಲಿಯವರೆಗೂ ಆರೋಪಿಯನ್ನು ಪತ್ತೆ ಮಾಡುವಲ್ಲಿ ಪೊಲೀಸ್ ಇಲಾಖೆ ವಿಫಲವಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.ಇಂದಿನ ದಿನಗಳಲ್ಲಿ ತಂತ್ರಜ್ಞಾನ ಬಹಳ ಮುಂದುವರಿದಿದೆ. ಯಾವುದೇ ಸಾಮಾಜಿಕ ಜಾಲತಾಣ ಖಾತೆ ತೆರೆಯಲು ಇ-ಮೇಲ್ ಮತ್ತು ಮೊಬೈಲ್ ಸಂಖ್ಯೆ ಕಡ್ಡಾಯ. ಇದರ ಆಧಾರದಲ್ಲೇ ವಿಕೃತಿ ಮೆರೆದವರನ್ನು ಸುಲಭವಾಗಿ ಪತ್ತೆ ಹಚ್ಚಬಹುದು. ಹೀಗಿದ್ದರೂ ದೂರು ನೀಡಿ ಹತ್ತು ದಿನವಾದರೂ ಆರೋಪಿ ಪತ್ತೆಯಾಗದಿರುವುದು ಕಳವಳಕಾರಿ ಎಂದು ಅವರು ಹೇಳಿದರು.

# ಡಾ. ಬಾಬು ಜಗಜೀವನ ರಾಮ್ ಅವರು ಇಡೀ ರಾಷ್ಟ್ರದ ಏಳಿಗೆಗಾಗಿ ಶ್ರಮಿಸಿದ ಧೀಮಂತ ವ್ಯಕ್ತಿ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಡಾ. ಬಾಬು ಜಗಜೀವನ ರಾಮ್ ಅವರು ಕೇವಲ ಒಂದು ಸಮುದಾಯಕ್ಕೆ ಸೀಮಿತವಾಗದೆ ಇಡೀ ರಾಷ್ಟ್ರದ ಏಳಿಗೆಗಾಗಿ ಶ್ರಮಿಸಿದ ನಾತಕ. ಅವರ ಆದರ್ಶಗಳು, ದೇಶಭಕ್ತಿ ಮತ್ತು ಧೀಮಂತ ವ್ಯಕ್ತಿತ್ವ ಇಂದಿನ ಯುವ ಪೀಳಿಗೆಗೆ ಸದಾ ಪ್ರೇರಣಾದಾಯಕವಾಗಿದೆ ಎಂದು ವಿಧಾನಸಭಾ ಪರಿಷತ್ತಿನ ಶಾಸಕರಾದ ಡಾ. ಡಿ. ತಿಮ್ಮಯ್ಯ ಅವರು ಹೇಳಿದರು.

ಜಿಲ್ಲಾಡಳಿತದ ವತಿಯಿಂದ ನಗರದ ರೈಲ್ವೆ ನಿಲ್ದಾಣದಲ್ಲಿರುವ ಡಾ. ಬಾಬು ಜಗಜೀವನರಾವ್ ಅವರ ಪ್ರತಿಮೆಗೆ ಮಾಲಾರ್ಪಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು. ಡಾ. ಬಾಬು ಜಗಜೀವನ ರಾಮ್ ಅವರು ಭಾರತದ ರಾಜಕೀಯ ಇತಿಹಾಸದ ಧ್ರುವತಾರೆ, ಅಪ್ರತಿಮ ಸ್ವಾತಂತ್ರ್ಯ ಹೋರಾಟಗಾರ ಮತ್ತು ಸಾಮಾಜಿಕ ಸಮಾನತೆಯ ಹರಿಕಾರ. ಮಹಾತ್ಮಾ ಗಾಂಧೀಜಿಯವರ ವಿಚಾರಧಾರೆಗಳಿಂದ ಪ್ರೇರಿತರಾದ ಬಾಬೂಜಿಯವರು 1930 ರ ದಶಕದಲ್ಲೇ ರಾಷ್ಟ್ರೀಯ ಚಳವಳಿಗಳಲ್ಲಿ ಭಾಗವಹಿಸಿದರು. ಗಾಂಧೀಜಿಯವರ ನೇತೃತ್ವದ ವೈಯಕ್ತಿಕ ಸತ್ಯಾಗ್ರಹಗಳಲ್ಲಿ ಸಕ್ರಿಯವಾಗಿ ಪಾಲ್ಗೊಂಡಿದ್ದರು ಎಂದು ಹೇಳಿದರು.


ಡಾ. ಬಾಬು ಜಗಜೀವನ ರಾಮ್ ಅವರ ಕೊಡುಗೆಗಳು ಭಾರತದ ಇತಿಹಾಸದಲ್ಲಿ ಸುವರ್ಣಾಕ್ಷರಗಳಲ್ಲಿ ಬರೆಯುವಂತದ್ದಾಗಿದೆ. ವಿಶ್ವ ದಾಖಲೆಯೆಂಬಂತೆ ಅವರು 1936 ರಿಂದ 1986 ರವರೆಗೆ ಸತತ 50 ವರ್ಷಗಳ ಕಾಲ ಸಂಸತ್ತಿನಲ್ಲಿ ಜನಪ್ರಿಯ ನಾಯಕರಾಗಿ ಸೇವೆ ಸಲ್ಲಿಸಿದರು.

ಅವರು ದೇಶದ ಆಹಾರ ಮತ್ತು ಕೃಷಿ ಸಚಿವರಾಗಿದ್ದ ಅವಧಿಯಲ್ಲಿ ಭಾರತವು ತೀವ್ರ ಆಹಾರದ ಕೊರತೆಯನ್ನು ಎದುರಿಸುತ್ತಿತ್ತು.

ಅವರ ದೂರದೃಷ್ಟಿ ಮತ್ತು ಕಠಿಣ ನಿರ್ಧಾರಗಳಿಂದಾಗಿ ದೇಶದಲ್ಲಿ ''ಹಸಿರು ಕ್ರಾಂತಿ'' ಯಶಸ್ವಿಯಾಗಿ, ಭಾರತವು ಆಹಾರ ಉತ್ಪಾದನೆಯಲ್ಲಿ ಸ್ವಾವಲಂಬನೆಯನ್ನು ಸಾಧಿಸಿತು ಎಂದು ತಿಳಿಸಿದರು.

# ನಮೋ ಪತ್ರ ನೋಡಿ ಚಿಕ್ಕಬಳ್ಳಾಪುರದ ನವದಂಪತಿ ಫುಲ್ ಖುಷ್!

• ಉದಯವಾಹಿನಿ, ಚಿಕ್ಕಬಳ್ಳಾಪುರ


ಉದಯವಾಹಿನಿ ಚಿತ್ರ

ನವಜೋಡಿಗೆ ಪ್ರಧಾನಿ ನರೇಂದ್ರ ಮೋದಿ ಅವರ ಕಡೆಯಿಂದ ವಿಶೇಷ ಗಿಫ್ಟ್ ಸಿಕ್ಕಿದೆ. ಬಿಡುವಿಲ್ಲದ ನಡುವೆಯೂ ಪ್ರಧಾನಿಯವರು ಮರೆಯದೇ ನವದಂಪತಿಗೆ ಪತ್ರ ಬರೆದು ಆಶೀರ್ವಾದ ಮಾಡುವ ಮೂಲಕ ನೂತನ ಜೋಡಿಗೆ ಶುಭ ಕೋರಿದ್ದಾರೆ.

ಹೌದು, ಚಿಕ್ಕಬಳ್ಳಾಪುರ ತಾಲ್ಲೂಕಿನ ನುಗುತಹಳ್ಳಿಯ ಯುವಕ ಮಂಜುನಾಥ್ ಹಾಗೂ ತೋಕಲಘಟ್ಟದ ಯುವತಿ ವಿದ್ಯಾಶ್ರೀ ಅವರ ವಿವಾಹವು ಕಳೆದ ಮೇ 13 ರಂದು ಚಿಕ್ಕಬಳ್ಳಾಪುರದ ಕಂದವಾರ ಬಾಗಿಲಿನ ಶ್ರೀ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ನಡೆದಿತ್ತು. ಪ್ರಧಾನಿ ನರೇಂದ್ರ ಮೋದಿ ಅವರ ಮೇಲಿನ ಗೌರವ ಹಾಗೂ ಅಭಿಮಾನದಿಂದ ಈ ಜೋಡಿಯು ಮದುವೆಗೆ ಮುಂಚಿತವಾಗಿ ತಮ್ಮ ಮದುವೆಯ ಲಗ್ನ ಪತ್ರಿಕೆಯನ್ನು ಪೋಸ್ಟ್ ಮೂಲಕ ನೇರವಾಗಿ ಪ್ರಧಾನಿ ಕಚೇರಿಗೆ ಕಳುಹಿಸಿ ಆಮಂತ್ರಿಸಿತ್ತು.ವಿಷಯ ಏನೆಂದರೆ, ಮದುವೆ ಮುಗಿದು ದಿನಗಳು ಕಳೆದಿದ್ದರೂ ಪ್ರಧಾನಿ ಕಾರ್ಯಾಲಯವು ಈ ಆಮಂತ್ರಣವನ್ನು ಮರೆತಿರಲಿಲ್ಲ. ಜೂನ್ 29 ರಂದು ಪ್ರಧಾನಿ ನರೇಂದ್ರ ಮೋದಿ ಅವರ ಕಚೇರಿಯಿಂದಲೇ ನವದಂಪತಿಗೆ ವಿಶೇಷ ಶುಭಾಶಯದ ಪತ್ರವೊಂದು ಪೋಸ್ಟ್ ಮೂಲಕ ಮನೆಗೆ ತಲುಪಿದೆ. ದೇಶದ ಪ್ರಧಾನಿಯೇ ತಮಗೆ ಶುಭ ಹಾರೈಸಿ ಬರೆದ ಪತ್ರವನ್ನು ನೋಡಿ ಮಂಜುನಾಥ್ ಮತ್ತು ವಿದ್ಯಾಶ್ರೀ ದಂಪತಿ ಹಾಗೂ ಅವರ

**ನೆಮ್ಮದಿ ಸದಾ ಇರಲಿ**

ಪ್ರಧಾನಿ ಮೋದಿ ಅವರು ಕಳುಹಿಸಿದ ಈ ಲೆಟರ್‌ನಲ್ಲಿ, ನವಜೋಡಿಯ ಮುಂದಿನ ವೈವಾಹಿಕ ಜೀವನ ಸುಖಕರವಾಗಿರಲಿ ಮತ್ತು ಅವರ ಸಂಸಾರದಲ್ಲಿ ಸಂತೋಷ, ನೆಮ್ಮದಿ ಸದಾ ಇರಲಿ ಎಂದು ಹೃತ್ಪೂರ್ವಕವಾಗಿ ಹಾರೈಸಲಾಗಿದೆ. ಸಾಮಾನ್ಯ ಹಳ್ಳಿಯ ಯುವಕ-ಯುವತಿಯ ಮದುವೆಗೆ ಪ್ರಧಾನಿಯವರು ಸ್ಪಂದಿಸಿ ಆಶೀರ್ವದಿಸಿರುವುದು ಸಾರ್ವಜನಿಕರ ಮೆಚ್ಚುಗೆಗೆ ಪಾತ್ರವಾಗಿದೆ.

# ಮಹಾನಗರ-ಗ್ರಾಮಾಂತರ ಎಸ್.ಐ.ಆರ್ ಪ್ರಕ್ರಿಯೆಯಲ್ಲಿ ಗೊಂದಲ: ಯದುವೀರ್ ಮನವಿ

• ಉದಯವಾಹಿನಿ, ಮೈಸೂರು


ಉದಯವಾಹಿನಿ ಚಿತ್ರ

ಮಹಾನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ನಡೆಯುತ್ತಿರುವ ಎಸ್.ಐ.ಆರ್. ಪ್ರಕ್ರಿಯೆಯಲ್ಲಿ ಸಾರ್ವಜನಿಕರಿಗೆ ಹಲವು ಗೊಂದಲಗಳು ಉಂಟಾಗುತ್ತಿವೆ. ಈ ಬಗ್ಗೆ ಕೂಡಲೇ ಸೂಕ್ತ ಕ್ರಮ ಕೈಗೊಂಡು ಜನರ ಸಮಸ್ಯೆಗಳಿಗೆ ಪರಿಹಾರ ನೀಡಬೇಕೆಂದು ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಅವರು ಮೈಸೂರು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿಗೆ ತೆರಳಿದ ಸಂಸದ ಯದುವೀರ್ ನೇತೃತ್ವದ ನಿಯೋಗ, ಎಸ್.ಐ.ಆರ್ ಕಾರ್ಯದಲ್ಲಿ ಆಗುತ್ತಿರುವ ತೊಂದರೆಗಳ ಕುರಿತು ವಿವರವಾಗಿ ಚರ್ಚಿಸಿತು. ಮತದಾರರ ಪಟ್ಟಿ ಪರಿಷ್ಕರಣೆ ವೇಳೆ ಮಾಹಿತಿ ಕೊರತೆ, ದಾಖಲೆಗಳ ಪರಿಶೀಲನೆಯಲ್ಲಿ ಗೊಂದಲ, ಮತ್ತು ಸಿಬ್ಬಂದಿಗಳಿಂದ ಸರಿಯಾದ ಮಾರ್ಗದರ್ಶನ ಸಿಗುತ್ತಿಲ್ಲ ಎಂಬ ದೂರುಗಳು ಸಾರ್ವಜನಿಕರಿಂದ ಬಂದಿವೆ ಎಂದು ಅವರು ಗಮನಕ್ಕೆ ತಂದರು. ಈ ಸಂದರ್ಭದಲ್ಲಿ ಮಾತನಾಡಿದ ಸಂಸದ ಯದುವೀರ್, ಎಸ್.ಐ.ಆರ್ ಪ್ರಕ್ರಿಯೆಯ ಉದ್ದೇಶವೇ ನಿಖರವಾದ ಮತದಾರರ ಪಟ್ಟಿ ತಯಾರಿಸುವುದಾಗಿದೆ. ಆದರೆ ಈಗ ಆಗುತ್ತಿರುವ ಗೊಂದಲದಿಂದಾಗಿ ಸಾಮಾನ್ಯ ಜನರು ಆತಂಕಕ್ಕೆ ಒಳಗಾಗಿದ್ದಾರೆ. ಅಧಿಕಾರಿಗಳು ಹೆಚ್ಚಿನ ಜಾಗೃತಿ ಮೂಡಿಸಿ, ಜನರಿಗೆ ಸರಿಯಾದ ಮಾಹಿತಿ ನೀಡಬೇಕು. ಯಾವುದೇ ಕಾರಣಕ್ಕೂ ಅರ್ಹ ಮತದಾರರ ಹೆಸರು ಕೈಬಿಡಬಾರದು ಎಂದು ಒತ್ತಾಯಿಸಿದರು.

ಜಿಲ್ಲಾಧಿಕಾರಿಗಳು ನಿಯೋಗದ ಮನವಿಯನ್ನು ಸ್ವೀಕರಿಸಿ, ಎಸ್.ಐ.ಆರ್ ಪ್ರಕ್ರಿಯೆಯನ್ನು ಪಾರದರ್ಶಕವಾಗಿ ಮತ್ತು ಜನಸ್ನೇಹಿಯಾಗಿ ನಡೆಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡುವುದಾಗಿ ಭರವಸೆ ನೀಡಿದ್ದಾರೆ ಎಂದು ತಿಳಿದುಬಂದಿದೆ.

# 'ಬಾಬೂಜಿ' ಜಗಜೀವನರಾಂ ಸಾಮಾಜಿಕ ನ್ಯಾಯದ ಹರಿಕಾರ: ಜಿಲ್ಲಾಧಿಕಾರಿ ಕುಮಾರ

## ಮಾಜಿ ಉಪ ಪ್ರಧಾನಿ ಬಾಬು ಜಗಜೀವನರಾಂ ಅವರ 40ನೇ ಪುಣ್ಯಸ್ಮರಣೆ

• ಉದಯವಾಹಿನಿ, ಮಂಡ್ಯ


ಉದಯವಾಹಿನಿ ಚಿತ್ರ

ಬಾಬು ಜಗಜೀವನ್‌ರಾಮ್ ಅವರು ದೇಶ ಕಂಡ ಅಪರೂಪದ ಮತ್ತು ಧೀಮಂತ ನಾಯಕ. ಸಾಮಾಜಿಕ ಕಳಕಳಿಯೊಂದಿಗೆ ದೀನ ದಲಿತರ ಮತ್ತು ಶೋಷಿತ ವರ್ಗಗಳ ಹಕ್ಕುಗಳಿಗಾಗಿ ನಿರಂತರವಾಗಿ ಹೋರಾಡಿದವರು. ಅವರ ಚಿಂತನೆಗಳು ಸಮಾಜಕ್ಕೆ ದಾರಿದೀಪವಾಗಿವೆ' ಎಂದು ಜಿಲ್ಲಾಧಿಕಾರಿ ಕುಮಾರ ಹೇಳಿದರು. 'ಹಸಿರು ಕ್ರಾಂತಿಯ ಹರಿಕಾರ', ಮಾಜಿ ಉಪ ಪ್ರಧಾನಿ ಬಾಬು ಜಗಜೀವನರಾಂ ಅವರ 40ನೇ ಪುಣ್ಯಸ್ಮರಣೆ ಅಂಗವಾಗಿ ಮಂಡ್ಯ ಜಿಲ್ಲಾಧಿಕಾರಿ ಕಚೇರಿ ಮುಂಭಾಗದ ಉದ್ಯಾನದಲ್ಲಿರುವ ಬಾಬೂಜಿ ಪ್ರತಿಮೆಗೆ ವಿವಿಧ ಸಂಘಟನೆ ಮುಖಂಡರೊಂದಿಗೆ ಮಾಲಾರ್ಪಣೆ ಮಾಡುವ ಮೂಲಕ ಗೌರವ ಸಲ್ಲಿಸಿ ಅವರು ಮಾತನಾಡಿದರು.

''ಬಾಬೂಜಿ ಅವರಿಗೆ ಅಧಿಕಾರ ಮುಖ್ಯವಾಗಿರಲಿಲ್ಲ, ಬದಲಿಗೆ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಸಿಗಬೇಕೆಂಬ ಹಂಬಲವಿತ್ತು. ಇಂದಿನ ಯುವ ಪೀಳಿಗೆಯು ಅವರ ದೇಶಪ್ರೇಮ, ಸಾಮಾಜಿಕ ಕಳಕಳಿ ಹಾಗೂ ಉನ್ನತ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು' ಎಂದರು.

ಜಿಲ್ಲಾ ಪಂಚಾಯಿತಿ ಸಿಇಒ ಕೆ.ಆರ್.ನಂದಿನಿ ಮಾತನಾಡಿ, 'ಬಾಬು ಜಗಜೀವನರಾಂ ಅವರು ದೇಶದಲ್ಲೇ ಅತ್ಯಂತ ದೀರ್ಘಕಾಲ ಶಾಸಕ ಮತ್ತು ಸಂಸದರಾಗಿ ಸೇವೆ ಸಲ್ಲಿಸಿದ ಅದ್ಭುತ ವ್ಯಕ್ತಿ. ಕೇವಲ ನಾಯಕರಾಗಿ ಮಾತ್ರವಲ್ಲದೆ, ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಸಾಮಾಜಿಕ ನ್ಯಾಯ ಸಿಗಬೇಕು ಮತ್ತು ಸಂವಿಧಾನದ ಆಶಯಗಳು ತಲುಪಬೇಕು ಎಂಬ ಧ್ಯೇಯದೊಂದಿಗೆ ಅವರು ಹೋರಾಟ ನಡೆಸಿದ್ದರು' ಎಂದು ಸ್ಮರಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ವಿ.ಜೆ. ಶೋಭಾರಾಣಿ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಮನುಜಶ್ರೀ, ವಿವಿಧ ಸಮುದಾಯದ ಮುಖಂಡರು ಪಾಲ್ಗೊಂಡಿದ್ದರು.

**'ಹಸಿರು ಕ್ರಾಂತಿಯ ಹರಿಕಾರ'**

ಬಾಬು ಜಗಜೀವನರಾಂ ಅವರ ದೂರದೃಷ್ಟಿ ಹಸಿರು ಕ್ರಾಂತಿಯಿಂದ ದೇಶವನ್ನು ಆಹಾರ ಸ್ವಾವಲಂಬನೆಯತ್ತ ಕೊಂಡೊಯ್ಯುವಲ್ಲಿ ಸಾಧ್ಯವಾಯಿತು ಎಂದು ತಹಶೀಲ್ದಾರ್ ಎಸ್.ವಿ.ಲೋಕೇಶ್ ಹೇಳಿದರು. ಪಟ್ಟಣದ ತಾಲ್ಲೂಕು ಕಚೇರಿಯಲ್ಲಿ ತಾಲ್ಲೂಕು ಆಡಳಿತ ವತಿಯಿಂದ ಆಯೋಜಿಸಿದ ಬಾಬು ಜಗಜೀವನರಾಂ ಅವರ ಪುಣ್ಯಸ್ಮರಣೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

> ಕೇಂದ್ರದಲ್ಲಿ ಕೃಷಿ ಸಚಿವರಾಗಿ ಹಸಿರು ಕ್ರಾಂತಿಯ ಮೂಲಕ ದೇಶದ ಆಹಾರ ಸಮಸ್ಯೆಯನ್ನು ನೀಗಿಸಿದ ಬಾಬು ಜಗಜೀವನರಾಂ ಈ ದೇಶದ ನಿಜವಾದ ಅನ್ನದಾತ' ಎಂದು ಭಾರತೀಯ ಬೌದ್ಧ ಮಹಾಸಭಾ ತಾಲ್ಲೂಕು ಘಟಕದ ಮಾಜಿ ಅಧ್ಯಕ್ಷ ಕೆ.ಟಿ. ರಂಗಯ್ಯ ಬಣ್ಣಿಸಿದರು.

## ಮಿನಿ ನ್ಯೂಸ್

### ಬಸ್ ಭೀಕರ ಅಪಘಾತ; ಇಬ್ಬರು ಸಾವು



ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಬೆಂಗಳೂರು ಹೈದರಾಬಾದ್ ರಾಷ್ಟ್ರೀಯ ಹೆದ್ದಾರಿ-44ರ ಚಿಕ್ಕಬಳ್ಳಾಪುರ ತಾಲ್ಲೂಕಿನ ದೊಡ್ಡಪೈಲಗುರ್ಕಿ ಬಳಿ ಭೀಕರ ಅಪಘಾತ ಉಂಟಾಗಿದ್ದು, ಕರ್ನೂಲಿನಿಂದ ಬೆಂಗಳೂರಿಗೆ ಬರುತ್ತಿದ್ದ ಬಸ್ ಮುಂದೆ ಸಾಗುತ್ತಿದ್ದ ಲಾರಿಗೆ ಡಿಕ್ಕಿ ಹೊಡೆದಿದೆ. ಘಟನೆಯಲ್ಲಿ ಆಂಧ್ರಪ್ರದೇಶ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಚಾಲಕ ಲಕ್ಷ್ಮಣ್ (52) ಹಾಗೂ ಪ್ರಯಾಣಿಕ ಬೆಂಗಳೂರಿನ ಕಲ್ಯಾಣ ನಗರದ ನಿವಾಸಿ ಉಮಾಕಾಂತ್ ರಾವ್ (77) ಪ್ರಯಾಣಿಕ ಸೇರಿ ಇಬ್ಬರು ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಘಟನೆಯಲ್ಲಿ ಹಲವರು ಗಾಯಗೊಂಡಿದ್ದು ಗಾಯಾಳುಗಳಿಗೆ ಚಿಕ್ಕಬಳ್ಳಾಪುರ ಜಿಲ್ಲಾ ಆಸ್ಪತ್ರೆ ಸೇರಿದಂತೆ ವಿವಿಧ ಆಸ್ಪತ್ರೆಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ. ಡಿಕ್ಕಿಯ ರಭಸಕ್ಕೆ ಬಸ್‌ನ ಮುಂಭಾಗ ಸಂಪೂರ್ಣ ನಜ್ಜುಗುಜ್ಜಾಗಿದ್ದು, ಚಾಲಕ ಸೀಟಿನಲ್ಲೇ ಸಿಲುಕಿಕೊಂಡಿದ್ದರು. ಸ್ಥಳಕ್ಕಾಗಮಿಸಿದ ಪೊಲೀಸರು ಹಾಗೂ ರಕ್ಷಣಾ ಸಿಬ್ಬಂದಿ ಕ್ರೇನ್ ಸಹಾಯದಿಂದ ಬಸ್ ಮುಂಭಾಗವನ್ನ ಎಳೆದು ಚಾಲಕನ ಮೃತದೇಹವನ್ನ ಹೊರತೆಗೆದರು. ಪ್ರತ್ಯೇಕ ಘಟನೆಯಲ್ಲಿ, ಮಧ್ಯಪ್ರದೇಶದ ಸೆಹೋರ್ ಜಿಲ್ಲೆಯ ಮೇನಾ ಗೋಡಿ ಗ್ರಾಮದ ಬಳಿ ಅಷ್ಟ- ಶುಜಲ್‌ಪುರ ಹೆದ್ದಾರಿಯಲ್ಲಿ ಟ್ರಕ್ ಒಂದು ಎಸ್‌ಯುವಿ ಗೆ ಡಿಕ್ಕಿ ಹೊಡೆದ ಪರಿಣಾಮ ಕನಿಷ್ಠ ಐದು ಜನರು ಸಾವನ್ನಪ್ಪಿ, ನಾಲ್ವರು ಗಾಯಗೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ದೂರದಿಂದಲೇ ದೊಡ್ಡ ಶಬ್ದ ಕೇಳಿಬಂದಿತು ಎಂದು ಸ್ಥಳೀಯರು ಹೇಳಿದ್ದು, ಈ ಶಬ್ಧ ಕೇಳಿ ತಕ್ಷಣ ಸ್ಥಳಕ್ಕೆ ಧಾವಿಸಿದರು. ಎಸ್‌ಯುವಿ (ಬೊಲೆರೊ) ಒಳಗೆ ಸಿಲುಕಿಕೊಂಡಿದ್ದ ಸಂತ್ರಸ್ತರ ರಕ್ತ ರಸ್ತೆಯಾದ್ಯಂತ ಹರಡಿಕೊಂಡಿತ್ತು. ಈ ಭೀಕರ ದೃಶ್ಯಗಳನ್ನು ಕಂಡ ಜನರು ಆಘಾತಕ್ಕೊಳಗಾಗಿದ್ದರು ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

### ಮಳೆ ಅಭಾವ ನಿಭಾಯಿಸಲು ಸರ್ಕಾರದಿಂದ ಸಿದ್ಧತೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೆಜಿಎಫ್

ರಾಜ್ಯದ ಕೆಲವು ಭಾಗಗಳಲ್ಲಿ ಮಳೆ ಕಂಡು ಬಂದರು ಹಲವು ಕಡೆ ಮಳೆ ಅಭಾವ ತೀವ್ರವಾಗಿ ಕಾಡುತ್ತಿದ್ದು ಬರಗಾಲವನ್ನು ಸಮರ್ಥವಾಗಿ ನಿಭಯಿಸುವ ನಿಟ್ಟಿನಲ್ಲಿ ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಎಲ್ಲಾ ಸಂಪುಟ ದರ್ಜೆ ಸಚಿವರೊಂದಿಗೆ ಸಮಾಲೋಚನೆ ನಡೆಸಿ ಮೋಡ ಬಿತ್ತನೆ ಮಾಡುವುದರ ಬಗ್ಗೆಯು ಸಾಧಕ ಭಾದಕಗಳ ಬಗ್ಗೆ ಚರ್ಚೆ ನಡೆಸಲಿದ್ದಾರೆ ಎಂದು ಹೇಳಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾನು ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳಿಗೆ ಉಸ್ತುವಾರಿ ಸಚಿವನಾಗಿರುವುದರಿಂದ ಬರಗಾಲವನ್ನು ನಿಭಾಯಿಸುವ ನಿಟ್ಟಿನಲ್ಲಿ ಅಧಿಕಾರಿಗಳ ಸಭೆಯನ್ನು ಕರೆದಿದ್ದೇನೆ ಎಂದು ಹೇಳಿದರು.

ದಕ್ಷಿಣ ಭಾರತದಲ್ಲಿ ಜನಸಂಖ್ಯೆ ಆಧಾರದ ಮೇರೆಗೆ ರಾಜ್ಯದಲ್ಲಿ ಶೇ.70ರಷ್ಟು ಕುಟುಂಬಗಳಿಗೆ ಪಡಿತರ ವಿತರಣೆ ಮಾಡಲಾಗುತ್ತಿದೆ,ಕೇಂದ್ರ ಸರ್ಕಾರ ಪಡಿತರ ಕಾರ್ಡ್‌ಗಳನ್ನು ಪರಿಷ್ಕರಣೆ ಮಾಡಿ 7.50 ಲಕ್ಷ ಪಡಿತರ ಕಾರ್ಡ್‌ಗಳನ್ನು ರದ್ದುಪಡಿಸಿದೆ.

ಆದರೆ ರಾಜ್ಯದಲ್ಲಿ 13 ರಿಂದ 14 ಲಕ್ಷ ಅನರ್ಹ ಪಡಿತರ ಕಾರ್ಡ್‌ದಾರರು ಇನ್ನು ಇದ್ದು,ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳಿಗೆ ಲಭ್ಯವಾಗ ಬೇಕಿದ್ದ ಪಡಿತರ ಕಾರ್ಡ್‌ಗಳು ಎಪಿಎಲ್ ಹೊಂದಿರಬೇಕಿರುವ ಕುಟುಂಬಗಳು ಬಿಪಿಎಲ್ ಕಾರ್ಡ್ ಹೊಂದಿದ್ದು, ಅವರೇ ಸ್ವಯಂ ತೀರ್ಮಾನ ಕೈಗೊಂಡು ತಮ್ಮ ಕಾರ್ಡ್‌ಗಳನ್ನು ಎಪಿಎಲ್ ಗೆ ಬದಲಾವಣೆ ಮಾಡಿಕೊಳ್ಳಿ.ಇದರಿಂದ ಲಕ್ಷಾಂತರ ಅರ್ಹ ಬಡತನ ರೇಖೆಗಿಂತ ಕೆಳಗಿನ ಕುಟುಂಬಗಳು ಎದುರು ನೋಡುತ್ತಿದ್ದಾರೆ ಎಂದು ಹೇಳಿದರು.

### ಕೊಡಿಗೇನಹಳ್ಳಿ ಗುಟ್ಟೆ ರಸ್ತೆ ತಿರುವಿನಲ್ಲಿ ಗುಂಡಿ ಬಿದ್ದಿರುವುದರಿಂದ ತೊಂದರೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕೊಡಿಗೇನಹಳ್ಳಿ

ಗ್ರಾಮದ ಗುಟ್ಟೆ ರಸ್ತೆಯಲ್ಲಿ ಬರುವ ಆದಿ ಅಂಗಡಿ ಸಮೀಪದ ತಿರುವಿನಲ್ಲಿ ಎರಡು ಕಡೆ ದೊಡ್ಡದಾಗಿ ಗುಂಡಿ ಬಿದ್ದಿರುವುದರಿಂದ, ಆ ರಸ್ತೆ ಮೂಲಕ ಸಂಚರಿಸುವ ವಾಹನ ಸವಾರರು ಹಾಗೂ ಪ್ರಯಾಣಿಕರು ತೊಂದರೆ ಅನುಭವಿಸುವಂತಾಗಿದೆ ಎಂದು ಸಾರ್ವಜನಿಕರು ದೂರಿದ್ದಾರೆ. ಕೊಡಿಗೇನಹಳ್ಳಿ, ಐ.ಡಿ.ಹಳ್ಳಿ ಹೋಬಳಿಯ ಹಲವು ಗ್ರಾಮಗಳ ಜನರು ಈ ರಸ್ತೆ ಮೂಲಕವೇ ಸಂಚರಿಸುತ್ತಾರೆ.

ತಿರುವಿನಲ್ಲಿ ಗುಂಡಿಗಳು ಇರುವುದರಿಂದ ಗುಂಡಿ ತಪ್ಪಿಸುವ ಸಮಯದಲ್ಲಿ ಹಾಗೂ ಗುಂಡಿ ಕಾಣದೆ ವಾಹನಗಳಿಂದ ಹಲವರು ಬೀಳುತ್ತಿದ್ದಾರೆ.

ಸಂಬಂಧಿಸಿದ ಅಧಿಕಾರಿಗಳು ಗಮನಹರಿಸಿ ರಸ್ತೆಯಲ್ಲಿರುವ ಗುಂಡಿಗಳನ್ನು ಮುಚ್ಚಬೇಕು ಎಂದು ಮಿಲ್ ರಾಮರೆಡ್ಡಿ, ಆದಿ, ರಾಜಗೋಪಾಲರೆಡ್ಡಿ, ಮಂಜುನಾಥ್ ಆಗ್ರಹಿಸಿದ್ದಾರೆ.

### ಗೌನಪಲ್ಲಿ ಬಸ್ ನಿಲ್ದಾಣದ ಬಳಿ ಚರಂಡಿ ಸಮಸ್ಯೆ ಸರಿಪಡಿಸಲು ಒತ್ತಾಯ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಶ್ರೀನಿವಾಸಪುರ

ತಾಲ್ಲೂಕಿನ ಗೌನಪಲ್ಲಿ ಬಸ್ ನಿಲ್ದಾಣದ ಪಕ್ಕದ ರಸ್ತೆಯಲ್ಲಿ ತೋಡಿರುವ ಗುಂಡಿಯಲ್ಲಿ ಮಳೆ ನೀರು ನಿಂತು ದುರ್ವಾಸನೆ ಬೀರುತ್ತಿದೆ. ನಿಂತ ನೀರಿನಿಂದ ದುರ್ವಾಸನೆ ಹಾಗೂ ಸೊಳ್ಳೆಗಳ ಕಾಟ ಹೆಚ್ಚಾಗಿದ್ದು, ಇದನ್ನು ಸರಿಪಡಿಸಬೇಕೆಂದು ಗ್ರಾಮ ಪಂಚಾಯಿತಿಗೆ ದೂರು ನೀಡಿದರೂ ಪ್ರಯೋಜನವಾಗಿಲ್ಲ ಎಂಬುದು ಗ್ರಾಮಸ್ಥರ ಅಳಲಾಗಿದೆ.

ಹಾಗಾಗಿ ಸಂಬಂಧಪಟ್ಟ ಅಧಿಕಾರಿಗಳು ಚರಂಡಿ ಸಮಸ್ಯೆಯನ್ನು ಪರಿಹರಿಸಿ, ಗುಂಡಿಯಲ್ಲಿರುವ ನೀರು ಸರಾಗವಾಗಿ ಹರಿಯುವಂತೆ ಕ್ರಮಕ್ಕೆಗೊಳ್ಳಬೇಕೆಂದು ಗ್ರಾಮಸ್ಥರು ಒತ್ತಾಯಿಸಿದ್ದಾರೆ. ನರೇಂದ್ರಬಾಬು, ಈಶ್ವರಮ್ಮ, ವೆಂಕಟರಮಣಪ್ಪ, ಗೌನಪಲ್ಲಿ ಗ್ರಾಮಸ್ಥರು ಇದ್ದರು.

ಅಂತರಾಳದಿಂದ..
EDITORIAL

# ಸಾಮಾಜಿಕ ಮಾಧ್ಯಮಗಳ ಅತಿರೇಕಕ್ಕೆ ಬೇಕಿದೆ ಮೂಗುದಾರ



ಇನ್‌ಸ್ಟಾಗ್ರಾಮ್‌ನ ಪಾವತಿಸಿದ ಜಾಹೀರಾತುಗಳಲ್ಲಿ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ ಮತ್ತು ನಿಂದನೆಗೆ ಸಂಬಂಧಿಸಿದ ಕಂಟೆಂಟ್‌ಗಳು ಕಂಡುಬಂದಿರುವ ಹಿನ್ನೆಲೆಯಲ್ಲಿ ಕೇಂದ್ರ ಸರಕಾರವು ಮೆಟಾ ಸಂಸ್ಥೆಗೆ ನೋಟಿಸ್ ಜಾರಿ ಮಾಡಿರುವುದು ಅತ್ಯಂತ ಸ್ವಾಗತಾರ್ಹ ಮತ್ತು ಸಕಾಲಿಕ ಕ್ರಮವಾಗಿದೆ. ಆದರೆ, ತಂತ್ರಜ್ಞಾನದ ಆಳ ಮತ್ತು ವ್ಯಾಪ್ತಿಯನ್ನು ಗಮನಿಸಿದರೆ ಇದು ಕೇವಲ ಆರಂಭವಷ್ಟೇ. ಇಂತಹ ಗಂಭೀರ ಸ್ವರೂಪದ ಅಪರಾಧಗಳು ಸಾಮಾಜಿಕ ಮಾಧ್ಯಮಗಳಿಂದ ಸಂಪೂರ್ಣವಾಗಿ ಇಲ್ಲವಾಗುವ ವರೆಗೆ ಕಠಿನ ನಿಲುವು ಮುಂದುವರಿಯಬೇಕಿದೆ. ಅವುಗಳ ಆರಂಭಿಕ ನಿಬಂಧನೆಗಳಲ್ಲಿಯೂ ಇದು ಉಲ್ಲೇಖವಾಗಿರುತ್ತದೆ. ಆದರೆ, ವಾಸ್ತವದಲ್ಲಿ ಕೇವಲ ಲಾಭದ ಗಳಿಕೆಯೇ ಇವುಗಳ ಮುಖ್ಯ ಉದ್ದೇಶವಾಗಿರುವುದರಿಂದ, ಪಾವತಿಸಿದ ಜಾಹೀರಾತುಗಳ ಮೂಲಕವೂ ಇಂತಹ ವಿಕೃತ ಕಂಟೆಂಟ್‌ಗಳು ಪ್ರಸಾರವಾಗುತ್ತಿರುವುದು ಇವುಗಳ ಬೇಜವಾಬ್ದಾರಿತನಕ್ಕೆ ಹಿಡಿದ ಕನ್ನಡಿಯಾಗಿದೆ.

ಪ್ರಸ್ತುತ ದಿನಗಳಲ್ಲಿ ಸಾಮಾಜಿಕ ಮಾಧ್ಯಮಗಳು ವಯಸ್ಸು, ಲಿಂಗದ ಹಂಗಿಲ್ಲದೆ ಹಸುಗೂಸುಗಳಿಂದ ಹಿಡಿದು ವೃದ್ಧರ ವರೆಗೆ ಎಲ್ಲರ ಕೈಗೂ ಅತ್ಯಂತ ಸುಲಭವಾಗಿ ತಲುಪುತ್ತಿವೆ. ಇಂತಹ ಮುಕ್ತ ವಾತಾವರಣದಲ್ಲಿ ವಿಕೃತ ಮತ್ತು ಅಪರಾಧ ಪ್ರೇರಿತ ವಿಷಯಗಳು ಮಕ್ಕಳ ಮಾನಸಿಕ ಹಾಗೂ ದೈಹಿಕ ಸುರಕ್ಷೆಯ ಮೇಲೆ ಅನೂಹ್ಯ ಮತ್ತು ಸರಿಪಡಿಸಲಾಗದ ದುಷ್ಪರಿಣಾಮಗಳನ್ನು ಬೀರುತ್ತವೆ. ಇಂತಹ ಎಲ್ಲಾ ಸಾಮಾಜಿಕ ಮಾಧ್ಯಮಗಳಲ್ಲಿ ಲಭ್ಯವಾಗುತ್ತಿರುವ ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯ, ಮಕ್ಕಳ ಅಶ್ಲೀಲ ಬಳಕೆ, ಹಿಂಸೆ ತುಂಬಿದ ಕಂಟೆಂಟ್‌ಗಳನ್ನು ನೋಡಿದರೆ ಪ್ರಜ್ಞಾವಂತರು ಬೆಚ್ಚಿ ಬೀಳದೆ ಇರಲಾರರು.

**ಮಕ್ಕಳ ಲೈಂಗಿಕ ಶೋಷಣೆಯನ್ನು ಉತ್ತೇಜಿಸುವ ಜಾಹೀರಾತುಗಳನ್ನು ತೆಗೆದುಹಾಕುವಂತೆ ಆದೇಶಿಸಲಾಗಿದೆ.**

> ಇನ್‌ಸ್ಟಾಗ್ರಾಮ್‌ನಲ್ಲಿ ಪ್ರಸಾರವಾಗುತ್ತಿರುವ ಜಾಹೀರಾತುಗಳು ಮಕ್ಕಳ ಲೈಂಗಿಕ ಶೋಷಣೆಯ ವಿಷಯವನ್ನು ಉತ್ತೇಜಿಸುತ್ತಿವೆ ಎಂಬ ದೂರುಗಳು ಬಂದಿರುವ ಹಿನ್ನೆಲೆಯಲ್ಲಿ ಕೇಂದ್ರ ಸರಕಾರ ಈ ಕ್ರಮ ಕೈಗೊಂಡಿದ್ದು ಒಂದು ವಾರದಲ್ಲಿ ಉತ್ತರಿಸುವಂತೆ ಮೆಟಾಗೆ ಸೂಚಿಸಿದೆ. ಮಕ್ಕಳ ಲೈಂಗಿಕ ಶೋಷಣೆಯನ್ನು ಉತ್ತೇಜಿಸುವ ಜಾಹೀರಾತುಗಳನ್ನು ತೆಗೆದುಹಾಕುವಂತೆ ಆದೇಶಿಸಲಾಗಿದೆ.
> ಇಂದು ಇನ್‌ಸ್ಟಾಗ್ರಾಮ್ ಮಾತ್ರವಲ್ಲದೆ ಬಹುತೇಕ ಪ್ರಮುಖ ಸಾಮಾಜಿಕ ಮಾಧ್ಯಮಗಳಲ್ಲಿ ಮಕ್ಕಳನ್ನು ಲೈಂಗಿಕ ತೀಟೆಗೆ ಬಳಸಿಕೊಳ್ಳುವುದನ್ನು ಪ್ರಚೋದಿಸುವ, ನಿಂದಿಸುವ ವಿಷಯಗಳು ಎಗ್ಗಿಲ್ಲದೆ ಹರಿದಾಡುತ್ತಿರುವುದು ಆತಂಕಕಾರಿ ಸಂಗತಿ.
> ಮೇಲ್ನೋಟಕ್ಕೆ ಈ ಜಾಗತಿಕ ಸಂಸ್ಥೆಗಳು, ನಾವು ಇಂತಹ ಕಾನೂನುಬಾಹಿರ ವಿಷಯಗಳಿಗೆ ಅನುಮತಿ ನೀಡುವುದಿಲ್ಲ' ಎಂದು ನೀತಿ ಸಂಹಿತೆಗಳ ಭಾಷಣ ಬಿಗಿಯುತ್ತವೆ.

ಇಂತಹ ತಾಣಗಳಲ್ಲಿ ಸಿಗುವ ಕ್ಷಣಿಕ ಲೈಕ್, ಪ್ರಸಿದ್ಧಿಯ ಆಸೆಯಿಂದ ಮಕ್ಕಳು, ಹದಿಹರಯದವರು ಅಲ್ಲಿ ಹಾಕುವ ದೃಶ್ಯಗಳು ಘಾಸಿ ಉಂಟುಮಾಡುವಂತಿವೆ. ಆದ್ದರಿಂದ ಇಂತಹ ಸೂಕ್ಷ್ಮ ವಿಷಯಗಳನ್ನು ತಳಮಟ್ಟದಿಂದಲೇ ನಿರ್ಬಂಧಿಸಲು ಕೇವಲ ತಾತ್ಕಾಲಿಕ ನೋಟಿಸ್‌ಗಳು ಸಾಲದು ಬದಲಿಗೆ ವಿಶಾಲ ವ್ಯಾಪ್ತಿಯ ಹಾಗೂ ಕಟ್ಟುನಿಟ್ಟಾದ ಮಾರ್ಗಸೂಚಿ ಮತ್ತು ಹೊಸ ನಿಯಮಗಳನ್ನು ಜಾರಿಗೆ ತರುವುದಕ್ಕೆ ಇದು ಸರಿಯಾದ ಸಮಯ.

ಬಹುತೇಕ ಎಲ್ಲಾ ಪ್ರಮುಖ ಸಾಮಾಜಿಕ ಮಾಧ್ಯಮಗಳು ವಿದೇಶೀ ಮೂಲದವಾಗಿದ್ದು ನಮ್ಮ ದೇಶದ ಕಾನೂನು ಹಾಗೂ ಸಾಂಸ್ಕೃತಿಕ ಮೌಲ್ಯಗಳನ್ನು ಅವಗಣಿಸುವ ಪ್ರವೃತ್ತಿ ತೋರುತ್ತಿವೆ. ಅಭಿವ್ಯಕ್ತಿ ಸ್ವಾತಂತ್ರ್ಯದ ಹೆಸರಿನಲ್ಲಿ ಸಮಾಜದ ಸ್ವಾಸ್ಥ್ಯ ಕೆಡಿಸಲು ಇವುಗಳಿಗೆ ಬಿಡಬಾರದು. ಭಾರತದ ನೆಲದ ಕಾನೂನು, ನಿಯಮ ಮತ್ತು ಸಂಸ್ಕೃತಿಯನ್ನು ಈ ಜಾಗತಿಕ ಸಂಸ್ಥೆಗಳು ಕಡ್ಡಾಯವಾಗಿ ಪಾಲಿಸುವಂತೆ ಮತ್ತು ಗೌರವಿಸುವಂತೆ ಸರಕಾರಗಳು ಇವುಗಳಿಗೆ ಬಲವಾದ ಮೂಗುದಾರ ತೊಡಿಸ ಬೇಕಾದ ಅನಿವಾರ್ಯ ಇದೆ. ಮಕ್ಕಳು ಮತ್ತು ಹದಿಹರಯದವರ ಸುರಕ್ಷೆಯೇ ದೇಶದ ಭವಿಷ್ಯದ ಸುರಕ್ಷೆಯಾಗಿದ್ದು ಈ ನಿಟ್ಟಿನಲ್ಲಿ ಯಾವುದೇ ರಾಜಿ ಸಲ್ಲದು.

## ಮುಖದ ತ್ವಚೆ, ಕೂದಲು ಸೌಂದರ್ಯ ಕಾಪಾಡಲು ಬಯಸುವವರು ಈ ತಪ್ಪುಗಳನ್ನು ಮಾಡಬೇಡಿ: ತಜ್ಞರು ಸಲಹೆ



ಪ್ರತಿಯೊಬ್ಬರೂ ಸುಂದರವಾಗಿ ಕಾಣಲು ಬಯಸುತ್ತಾರೆ. ನೀವು ನೈಸರ್ಗಿಕವಾಗಿ ಸುಂದರವಾಗಿದ್ದರೂ ಕೂಡ ನಿಮ್ಮ ಕೆಲವು ತಪ್ಪುಗಳನ್ನು ಮಾಡುವುದರಿಂದ ಮುಖದ ಲುಕ್ ಅನ್ನು ಕುಂದಿಸಬಹುದು ಎಂದು ಸೌಂದರ್ಯ ತಜ್ಞರು ಎಚ್ಚರಿಕೆ ನೀಡುತ್ತಾರೆ. ಈ ಕೆಲವು ಸಾಮಾನ್ಯ ದೋಷಗಳನ್ನು ಹೇಗೆ ಸರಿಪಡಿಸುವುದು ಎಂಬುದನ್ನು ಈ ಸ್ಟೋರಿಯಲ್ಲಿ ವಿವರವಾಗಿ ಅರಿತುಕೊಳ್ಳೋಣ.

ತಜ್ಞರು ತಿಳಿಸುವ ಪ್ರಕಾರ, ಸುಂದರ ಲುಕ್ ಅನ್ನು ಕಾಪಾಡಿಕೊಳ್ಳಲು ಮಲಗುವ ಮೊದಲು ನಿರ್ದಿಷ್ಟ ಮುನ್ನೆಚ್ಚರಿಕೆಗಳನ್ನು ತೆಗೆದುಕೊಳ್ಳಬೇಕಾಗುತ್ತದೆ. ಮಲಗುವ ಮೊದಲು ಮುಖಕ್ಕೆ ಲೇಪಿಸಲಾದ ಯಾವುದೇ ಮೇಕಪ್ ಅನ್ನು ಸಂಪೂರ್ಣವಾಗಿ ತೆಗೆದುಹಾಕಿ, ನಂತರ ಚರ್ಮವನ್ನು ಸಂಪೂರ್ಣವಾಗಿ ಸ್ವಚ್ಛಗೊಳಿಸಬೇಕಾಗುತ್ತದೆ ಎಂದು ಸಲಹೆ ನೀಡುತ್ತಾರೆ. ನೈಟ್ ಕ್ರೀಮ್ ಅನ್ನು ಹಚ್ಚಬಾರದು.

ಏಕೆಂದರೆ ಇದು ಚರ್ಮವನ್ನು ಹೈಡ್ರೇಟ್ ಮಾಡುತ್ತದೆ ಹಾಗೂ ಹೊಳಪನ್ನು ನೀಡುತ್ತದೆ. ಅತಿಯಾದ ಪ್ರಮಾಣದಲ್ಲಿ ಹಚ್ಚುವ ಬಗ್ಗೆ ತಜ್ಞರು ಎಚ್ಚರಿಕೆ ನೀಡುತ್ತಾರೆ. ಹಗಲು ಹಾಗೂ ರಾತ್ರಿ ಕ್ರೀಮ್‌ಗಳನ್ನು ಬಳಸುವುದರಿಂದ ದೇಹದ ಸಿರ್ಕಾಡಿಯನ್ ಲಯವನ್ನು ಸಮತೋಲನಗೊಳಿಸಲು ಸಹಾಯ ಮಾಡುತ್ತದೆ ಎಂದು ರಿಸರ್ಚ್‌ಗೇಟ್ ಗಮನಿಸುತ್ತದೆ. ತುಟಿಗಳ ಮೇಲಿನ ಚರ್ಮವು ತುಂಬಾ ಸೂಕ್ಷ್ಮವಾಗಿರುತ್ತದೆ. ಇದರಿಂದ ಹೆಚ್ಚುವರಿ ಆರೈಕೆಯ ಅಗತ್ಯವನ್ನು ತಜ್ಞರು ಒತ್ತಿಹೇಳುತ್ತಾರೆ.

ಮಲಗುವ ಮೊದಲು ನೀರಿನಲ್ಲಿ ಅದ್ದಿದ ಹತ್ತಿ ಪ್ಯಾಡ್‌ನಿಂದ ತುಟಿಗಳನ್ನು ಸ್ವಚ್ಛಗೊಳಿಸಬೇಕಾಗುತ್ತದೆ. ಬಳಿಕ, ಎಣ್ಣೆ ಹಚ್ಚಿ 5 ರಿಂದ 10 ನಿಮಿಷಗಳ ಕಾಲ ತುಟಿಗಳಿಗೆ ನಿಧಾನವಾಗಿ ಮಸಾಜ್ ಮಾಡುವುದು ಉತ್ತಮ. ಏಕೆಂದರೆ ಇದು ಉತ್ತಮ ರಕ್ತ ಪರಿಚಲನೆಯನ್ನು ಉತ್ತೇಜಿಸುತ್ತದೆ ಎಂದು ಸೌಂದರ್ಯ ತಜ್ಞರು ಸಲಹೆ ನೀಡುತ್ತಾರೆ. ಕೆಲವರು ಕೋಲ್, ಐಶ್ಯಾಡೋ ಹಾಗೂ ಮಸ್ಕರಾದಂತಹ ಉತ್ಪನ್ನಗಳನ್ನು ಬಳಸುತ್ತಾರೆ. ಮುಖದ ಮೇಕಪ್ ತೆಗೆಯುವಾಗ ಇವುಗಳನ್ನು ತೆಗೆದುಹಾಕಲು ಮರೆತುಬಿಡುತ್ತಾರೆ. ಇದು ಮರುದಿನ ಬೆಳಗ್ಗೆ ಕಣ್ಣುಗಳು ದಣಿದಂತೆ ಕಾಣುವಂತೆ ಮಾಡುತ್ತದೆ. ಈ ಅಭ್ಯಾಸವು ಕಣ್ಣುಗಳ ಸುತ್ತ ಕಪ್ಪು ವೃತ್ತಗಳನ್ನು ಬೆಳೆಸುವ ಅಪಾಯ ಹೆಚ್ಚಿಸುತ್ತದೆ ಎಂದು ಸೌಂದರ್ಯ ತಜ್ಞರು ಎಚ್ಚರಿಕೆ ನೀಡುತ್ತಾರೆ. ಮಲಗುವ ಮೊದಲು ಕಣ್ಣಿನ ಮೇಕಪ್ ಅನ್ನು ಸಂಪೂರ್ಣವಾಗಿ ತೆಗೆದುಹಾಕುವುದು ಸೂಕ್ತವಾಗಿದೆ. ರಾತ್ರಿಯಿಡೀ ಚರ್ಮದ ಮೇಲೆ ಉಳಿದಿರುವ ವರ್ಣದ್ರವ್ಯಗಳು ಹಾಗೂ ಭಾರವಾದ ಪದಾರ್ಥಗಳು ಕಡಿಮೆ ದರ್ಜೆಯ ಡರ್ಮಟೈಟಿಸ್ (ಚರ್ಮದ ಉರಿಯೂತ) ಇಲ್ಲವೇ ರಾಸಾಯನಿಕ ಕಿರಿಕಿರಿ ಉಂಟುಮಾಡಬಹುದು ಎಂದು ನ್ಯಾಷನಲ್ ಲೈಬ್ರರಿ ಆಫ್ ಮೆಡಿಸಿನ್ ತಿಳಿಸುತ್ತದೆ.

ಸಾಮಾನ್ಯವಾಗಿ ಬೆಳಗ್ಗೆ ಶಾಲೆಗೆ ಅಥವಾ ಕೆಲಸಕ್ಕೆ ತಯಾರಾಗುವಾಗ ನಮ್ಮ ಕೂದಲನ್ನು ಬಾಚಿಕೊಳ್ಳುತ್ತೇವೆ. ಸ್ಟೈಲ್ ಮಾಡುತ್ತೇವೆ. ಆದರೆ ನಂತರ ಅದರ ಬಗ್ಗೆ ಹೆಚ್ಚಿನ ಗಮನ ಹರಿಸುವುದಿಲ್ಲ. ಮಲಗುವ ಮುನ್ನ ಅದನ್ನು ಹಾಗೆಯೇ ಬಿಡುತ್ತೇವೆ. ಈ ಅಭ್ಯಾಸವು ಕೂದಲಿನ ಕಿರುಚೀಲಗಳಿಗೆ ಹಾನಿಕಾರಕವಾಗಿದೆ ಎಂದು ತಜ್ಞರು ತಿಳಿಸುತ್ತಾರೆ.ಹೆಚ್ಚುವರಿಯಾಗಿ ಸಿಕ್ಕು ಬಿದ್ದ ಕೂದಲಿನೊಂದಿಗೆ ಮಲಗುವುದು (ಸಾಮಾನ್ಯವಾಗಿ ಗಾಳಿಯಿಂದಾಗಿ) ಮತ್ತಷ್ಟು ಗಂಟು ಬೀಳುವುದು ಹಾಗೂ ಸಂಭಾವ್ಯ ತುಂಡಾಗುವಿಕೆಗೆ ಕಾರಣವಾಗಬಹುದು. ಇದರಿಂದ ಮಲಗುವ ಮೊದಲು ನಿಮ್ಮ ಕೂದಲನ್ನು ಬಾಚಿಕೊಳ್ಳುವುದು ಉತ್ತಮ. ಹೀಗೆ ಮಾಡುವುದರಿಂದ ನೆತ್ತಿಯ ಮೇಲೆ ಸಂಗ್ರಹವಾದ ಯಾವುದೇ ಬೆವರು ಒಣಗಲು ಕೂಡ ಸಹಾಯ ಮಾಡುತ್ತದೆ. ಕೂದಲಿನ ಕಿರು ಚೀಲಗಳಿಗೆ ಹಾನಿಯಾಗುವುದನ್ನು ತಡೆಯಲು ಸಾಧ್ಯವಾಗುತ್ತದೆ ಎಂದು ಸೌಂದರ್ಯ ತಜ್ಞರು ವಿವರಿಸುತ್ತಾರೆ.



ವಿದ್ಯಾರ್ಥಿ ವಿಜಯ
ಡಾ.ಸುಧಾಕರ.ಜಿ. ಲಕ್ಕವಳ್ಳಿ
ಲೇಖಕರು
ಸಾಮಾಜಿಕ ಚಿಂತಕರು
16

# ಪರೀಕ್ಷಾ ಸಮಯದ ನಿರ್ವಹಣೆ: ಗೆಲುವಿನ ಗೂಢಮಂತ್ರ

ಪರೀಕ್ಷಾ ಮಂದಿರವು ಬರಿಯ ಜ್ಞಾನದ ಅಗ್ನಿಪರೀಕ್ಷೆಯಲ್ಲ. ಅದು ಕ್ಷಣಗಳೊಡನೆ ನಡೆಯುವ ಕದನವೂ ಹೌದು. ಮರಳು ಗಡಿಯಾರದ ಪುಡಿ ಉದುರುವಂತೆ ಸಮಯ ಜಾರಿದರೆ, ವಿಜಯಮಾಲೆ ಕೈತಪ್ಪುತ್ತದೆ. ಶಿಸ್ತು ಮತ್ತು ಕಾಲಪ್ರಜ್ಞೆ ವಿದ್ಯಾರ್ಥಿಯ ರಥಕ್ಕೆ ಎರಡು ಚಕ್ರಗಳು. ಮುನ್ನೋಟವಿಲ್ಲದ ಅಭ್ಯಾಸವು ದಿಕ್ಸೂಚಿ ಇಲ್ಲದ ನಾವೆಯಿದ್ದಂತೆ. ಅದು ಆತಂಕದ ಸುಳಿಗೆ ತಳ್ಳುತ್ತದೆ.

ಮನೋವಿಜ್ಞಾನದ ಮಾತೂ ಇದೇ. ಕಾಲವನ್ನು ಅಳತೆಮಾಡಿ ವಿನಿಯೋಗಿಸಿದರೆ ಮಿದುಳಿನ ಮೇಲಿನ ಹೇರುಭಾರ ಇಳಿಯುತ್ತದೆ. ಏಕಾಗ್ರತೆ ನಿಶ್ಚಲವಾಗುತ್ತದೆ. ನಿರ್ಣಯದ ವೇಗಕ್ಕೆ ರೆಕ್ಕೆ ಬರುತ್ತದೆ. ತಳಮಳ ಕರಗಿ, ವಿವೇಕದ ದೀಪ ಬೆಳಗುತ್ತದೆ. ಕಾಲವನ್ನು ಮಿತ್ರನಾಗಿಸಿದ ಶಿಷ್ಯನು ಪರೀಕ್ಷಾ ಶಾಲೆಯಲ್ಲಿ ಧೀಮಂತನಂತೆ ರಾರಾಜಿಸುತ್ತಾನೆ. ಅವನ ಬರಹದಲ್ಲಿ ಸ್ಥೈರ್ಯದ ಝೇಂಕಾರ, ದೃಷ್ಟಿಯಲ್ಲಿ ಗೆಲುವಿನ ದೀವಿಗೆ. ಹೀಗಾಗಿ ಸಮಯದ ಸಮರ್ಥ ಬಳಕೆಯು ಕೇವಲ ಯುಕ್ತಿಯಲ್ಲ, ಅದು ಸಿದ್ಧಿಯ ಸಿಂಹದ್ವಾರ.

> **ಉತ್ತರ ಪತ್ರಿಕೆ ಕೈಗೆ ಸಿಕ್ಕ ಕೂಡಲೇ ಪ್ರಶ್ನಾವಳಿಯನ್ನು ಅವಲೋಕಿಸಿ. ಸರಳವಾದವುಗಳೇ ಸೋಪಾನಗಳು. ಅವುಗಳನ್ನು ಚುರುಕಾಗಿ ಬಿಡಿಸಿದರೆ ಧೈರ್ಯದ ರೆಕ್ಕೆಗಳು ಮೂಡುತ್ತವೆ. ಪ್ರತಿ ಪ್ರಮೇಯಕ್ಕೂ ಕಾಲಮಿತಿಯನ್ನು ಮೊದಲೇ ನಿಗದಿಪಡಿಸಿ. ದುರ್ಗಮ ಪ್ರಶ್ನೆಯೆದುರಾದರೆ ಅಲ್ಲೇ ಗೋಡೆ ಕಟ್ಟಿ ನಿಲ್ಲಬೇಡಿ. ಮುನ್ನುಗ್ಗಿ, ಅಂತ್ಯದಲ್ಲಿ ಹಿಂತಿರುಗಿ. ಅಚ್ಚುಕಟ್ಟಾದ ಅಕ್ಷರಜೋಡಣೆ, ಸರಣಿಬದ್ಧ ಮಂಡನೆ ಅಂಕಗಳ ಸುಗ್ಗಿಯನ್ನು ಹೊತ್ತುತರುತ್ತವೆ.**



# ಯಶಸ್ವಿ ದಿನಕ್ಕೆ 20 ಸಕಾರಾತ್ಮಕ ಪದಗಳು



ಲೇಖಕರು
ವಿಶ್ವಾಸ್ .ಡಿ.ಗೌಡ
ಲೇಖಕರು
ಸಾಮಾಜಿಕ ಚಿಂತಕರು

ಯಾವ ಬೆಳಗು ಸಕಾರಾತ್ಮಕ ಚಿಂತನೆಯೊಂದಿಗೆ ಆರಂಭವಾಗುತ್ತದೆಯೋ, ಆ ದಿನದ ಪ್ರತಿಯೊಂದು ಹೆಜ್ಜೆಯೂ ಯಶಸ್ಸಿನತ್ತ ಸಾಗುತ್ತದೆ.

ಬೆಳಿಗ್ಗೆ ಎದ್ದ ಕ್ಷಣದಿಂದಲೇ ನಮ್ಮ ಮನಸ್ಸಿನಲ್ಲಿ ಮೂಡುವ ಆಲೋಚನೆಗಳು ಇಡೀ ದಿನದ ಮನಸ್ಥಿತಿಯನ್ನು ನಿರ್ಧರಿಸುತ್ತವೆ. ಆದ್ದರಿಂದ ಪ್ರತಿದಿನದ ಆರಂಭವನ್ನು ಸಕಾರಾತ್ಮಕ ಚಿಂತನೆ ಮತ್ತು ಧನಾತ್ಮಕ ಪದಗಳಿಂದ ಆರಂಭಿಸುವುದು ಅತ್ಯಂತ ಮುಖ್ಯ. ಇವು ಕೇವಲ ಪದಗಳಲ್ಲ,ನಮ್ಮಲ್ಲಿ ಆತ್ಮವಿಶ್ವಾಸ, ಉತ್ಸಾಹ, ನೆಮ್ಮದಿ ಮತ್ತು ಆಶಾವಾದವನ್ನು ಬೆಳೆಸುವ ಜೀವನ ಮೌಲ್ಯಗಳಾಗಿವೆ.

ನಮ್ಮ ಮಾತುಗಳು ಮತ್ತು ಆಲೋಚನೆಗಳು ನಮ್ಮ ವ್ಯಕ್ತಿತ್ವವನ್ನು ರೂಪಿಸುವುದರಿಂದ ಉತ್ತಮ ಪದಗಳು ಉತ್ತಮ ಬದುಕಿಗೆ ಅಡಿಪಾಯವಾಗುತ್ತವೆ. ಇಂದಿನ ಒತ್ತಡದ ಬದುಕಿನಲ್ಲಿ ಧನಾತ್ಮಕ ಪದಗಳು ಮಾನಸಿಕ ಆರೋಗ್ಯವನ್ನು ಕಾಪಾಡುವ ಶಕ್ತಿಶಾಲಿ ಸಾಧನಗಳಾಗಿವೆ.

ಬೆಳಿಗ್ಗೆ ಕೆಲವೇ ನಿಮಿಷಗಳನ್ನು ಇದಕ್ಕಾಗಿ ಮೀಸಲಿಟ್ಟರೆ

> **ಪ್ರತಿದಿನ ಬೆಳಿಗ್ಗೆ ಕೃತಜ್ಞತೆ, ಆತ್ಮವಿಶ್ವಾಸ, ನೆಮ್ಮದಿ, ಸಂತೋಷ, ಯಶಸ್ಸು, ಆರೋಗ್ಯ, ಪ್ರೀತಿ, ಧೈರ್ಯ, ವಿಶ್ವಾಸ, ಭರವಸೆ, ತಾಳ್ಮೆ, ಕ್ಷಮೆ, ವಿನಯ, ಉತ್ಸಾಹ, ಸ್ಫೂರ್ತಿ, ಸಮೃದ್ಧಿ, ಸೇವೆ, ಸಹನೆ, ನಗು ಹಾಗೂ ಆಶೀರ್ವಾದ ಎಂಬ ಇಪ್ಪತ್ತು ಧನಾತ್ಮಕ ಪದಗಳನ್ನು ನೆನಪಿಸಿಕೊಳ್ಳುವುದು ಮನಸ್ಸಿಗೆ ಹೊಸ ಚೈತನ್ಯ ನೀಡುತ್ತದೆ.ಈ ಪದಗಳನ್ನು ಮನಃಪೂರ್ವಕವಾಗಿ ಉಚ್ಚರಿಸಿದಾಗ ನಕಾರಾತ್ಮಕ ಚಿಂತನೆಗಳು ದೂರವಾಗಿ, ಆತ್ಮವಿಶ್ವಾಸ ಮತ್ತು ಧೈರ್ಯ ಹೆಚ್ಚಾಗುತ್ತದೆ.**



ದಿನವಿಡೀ ಉತ್ಸಾಹದಿಂದ ಕಾರ್ಯನಿರ್ವಹಿಸುವ ಶಕ್ತಿ ದೊರೆಯುತ್ತದೆ.

ಯಶಸ್ಸು ಹೊರಗಿನಿಂದ ಬರುವುದಿಲ್ಲ. ಅದು ನಮ್ಮೊಳಗಿನ ಉತ್ತಮ ಆಲೋಚನೆಗಳಿಂದಲೇ ಆರಂಭವಾಗುತ್ತದೆ.

ಕೊನೆಯ ಮಾತು, ಪ್ರತಿದಿನ ಬೆಳಿಗ್ಗೆ ಈ 20 ಧನಾತ್ಮಕ ಪದಗಳನ್ನು ನಿಮ್ಮ ಜೀವನದ ಭಾಗವಾಗಿಸಿಕೊಳ್ಳಿ. ಅವು ನಿಮ್ಮ ದಿನವನ್ನು ಮಾತ್ರವಲ್ಲ, ನಿಮ್ಮ ವ್ಯಕ್ತಿತ್ವ, ಸಂಬಂಧಗಳು ಮತ್ತು ಭವಿಷ್ಯವನ್ನೂ ಉಜ್ವಲಗೊಳಿಸುತ್ತವೆ. ಪ್ರತಿಯೊಂದು ಹೊಸ ಬೆಳಗು ಹೊಸ ಭರವಸೆ, ಹೊಸ ಉತ್ಸಾಹ ಮತ್ತು ಹೊಸ ಸಾಧನೆಯ ಆರಂಭವಾಗಲಿ.

## ಕಣ್ಣುಗಳ ಕೆಳಗೆ ಡಾರ್ಕ್ ಸರ್ಕಲ್ ಏಕೆ ಕಾಣಿಸಿಕೊಳ್ಳುತ್ತವೆ ಗೊತ್ತೇ? ಪರಿಹಾರ ಪಡೆಯುವುದು ಹೇಗೆ?

ಚರ್ಮ, ಮುಖ ಹಾಗೂ ಕೂದಲು ವ್ಯಕ್ತಿಯ ನೋಟದ ಅತ್ಯಂತ ವಿಶಿಷ್ಟ ಹಾಗೂ ಆಕರ್ಷಕ ಅಂಶವಾಗಿವೆ. ಅಂದಗೊಳಿಸುವಿಕೆ, ಸ್ವ-ಆರೈಕೆಯ ಮೇಲೆ ಕೇಂದ್ರೀಕರಿಸುವುದು ಆತ್ಮವಿಶ್ವಾಸವನ್ನು ಹೆಚ್ಚಿಸುತ್ತದೆ. ಒಬ್ಬ ವ್ಯಕ್ತಿಯು ಗುಂಪಿನಲ್ಲಿ ಎದ್ದು ಕಾಣಲು ಹಾಗೂ ಆಕರ್ಷಕವಾಗಿ ಕಾಣಲು ಸಹಾಯ ಮಾಡುತ್ತದೆ.

ಮುಖವು ಸೌಂದರ್ಯವನ್ನು ಹೆಚ್ಚಿಸುವಲ್ಲಿ ನಿರ್ಣಾಯಕ ಪಾತ್ರ ವಹಿಸುತ್ತದೆ. ಸುಂದರವಾದ ಮುಖವು ನೈಸರ್ಗಿಕವಾಗಿ ಆಕರ್ಷಣೆಯನ್ನು ಹೆಚ್ಚಿಸುತ್ತದೆ. ನಮ್ಮ ವ್ಯಕ್ತಿತ್ವದ ಉತ್ತಮ ನೋಟವನ್ನು ನೀಡುತ್ತದೆ. ಪ್ರತಿಯೊಬ್ಬರೂ ಆರೋಗ್ಯಕರ, ದೋಷರಹಿತ ಹಾಗೂ ಕಾಂತಿಯುತ ಚರ್ಮ ಬಯಸುತ್ತಾರೆ.



ಕಾರ್ಯನಿರತ ಜೀವನಶೈಲಿ, ಮಾಲಿನ್ಯ ಹಾಗೂ ಕಳಪೆ ಆಹಾರ ಪದ್ಧತಿಗಳಿಂದಾಗಿ ಮೊಡವೆ, ಡಾರ್ಕ್ ಸರ್ಕಲ್, ಕಲೆಗಳಂತಹ ಸಮಸ್ಯೆಗಳು ಸಾಮಾನ್ಯವಾಗಿದೆ. ಕೆಲವು ಜನರು ತಮ್ಮ ಕಣ್ಣುಗಳ ಕೆಳಗೆ ಊತ ಇಲ್ಲವೇ ನರಹುಲಿಗಳು ಸಹ ಬೆಳೆಯುತ್ತವೆ. ಈ ಡಾರ್ಕ್ ಸರ್ಕಲ್ಸ್ ಏಕೆ ರೂಪುಗೊಳ್ಳುತ್ತವೆ ಅವುಗಳನ್ನು ಹೇಗೆ ಚಿಕಿತ್ಸೆ ನೀಡಬಹುದು ತಜ್ಞರು ಈ ಕುರಿತು ತಜ್ಞರು ತಿಳಿಸಿರುವ ಮಾಹಿತಿ ಇಲ್ಲಿದೆ ನೋಡಿ. ಅನೇಕ ಜನರು ಹಗಲು ರಾತ್ರಿ ಪರದೆಗಳಿಗೆ ಅಂಟಿಕೊಂಡಿರುತ್ತಾರೆ. ಲ್ಯಾಪ್‌ಟಾಪ್‌ಗಳು ಹಾಗೂ ಫೋನ್‌ಗಳಂತಹ ಸಾಧನಗಳಲ್ಲಿ ಹೆಚ್ಚಿನ ಸಮಯವನ್ನು ಕಳೆಯುವುದರಿಂದ ಕಣ್ಣುಗಳ ಕೆಳಗೆ ಡಾರ್ಕ್ ಸರ್ಕಲ್ಸ್ ಹಾಗೂ ಊತ ಉಂಟಾಗುತ್ತದೆ. ಪರದೆಗಳನ್ನು ನೋಡುವ ಸಮಯವನ್ನು ಕಡಿಮೆ ಮಾಡಲು ಪ್ರಯತ್ನಿಸಿ.

ಮನೆಯಿಂದ ಹೊರಬರುವ ಮೊದಲು ನಿಮ್ಮ ಮುಖಕ್ಕೆ ಸನ್‌ಸ್ಕ್ರೀನ್ ಹಚ್ಚುವುದು ಉತ್ತಮ. ನಿಮ್ಮ ಚರ್ಮವನ್ನು ಸೂರ್ಯನ ಶಾಖದಿಂದ ರಕ್ಷಿಸುತ್ತದೆ. ನ್ಯಾಷನಲ್ ಲೈಬ್ರರಿ ಆಫ್ ಮೆಡಿಸಿನ್ ಪ್ರಕಾರ, ನೀವು ಡಾರ್ಕ್ ಸರ್ಕಲ್ಸ್ ಅಥವಾ ಊತದಿಂದ ಬಳಲುತ್ತಿದ್ದರೆ ಸೌತೆಕಾಯಿ ಚೂರುಗಳು ಅಥವಾ ಗ್ರೀನ್ ಟೀ ಬ್ಯಾಗ್ ನಿಮ್ಮ ಕಣ್ಣುಗಳ ಮೇಲೆ ಇಡುವುದು ಹೆಚ್ಚು ಪ್ರಯೋಜನಕಾರಿಯಾಗಿದೆ.

ಇದು ಕಣ್ಣುಗಳನ್ನು ಶಮನಗೊಳಿಸುತ್ತದೆ, ಕಪ್ಪು ವರ್ತುಲಗಳು ರೂಪುಗೊಳ್ಳುವ ಸಾಧ್ಯತೆಯನ್ನು ಕಡಿಮೆ ಮಾಡುತ್ತದೆ.

# ನಿಮ್ಮ ಆರೋಗ್ಯದ ಒಳಿತಿಗೆ ದಿನಕ್ಕೆಷ್ಟು ನೀರು ಕುಡಿಯಿರಿ!

ನೀರಿನ ವಿಷಯ ಪ್ರಸ್ತಾಪ ಆಗುತ್ತಿದ್ದಂತೆ, ದಿನಕ್ಕೆಂಟು ಗ್ಲಾಸ್ ನೀರು ಕುಡಿಯಿರಿ ಎಂಬ ಸಲಹೆ ಎಲ್ಲೆಡೆಯಿಂದ ಹರಿದು ಬರುತ್ತದೆ. ಎಲ್ಲರ ದೇಹವೂ ಒಂದೇ ತೆರನಾಗಿ ಇರುವುದಿಲ್ಲ ಎಂದಾದರೆ, ಎಲ್ಲರಿಗೂ ಅಷ್ಟೇ ಪ್ರಮಾಣದಲ್ಲಿ ನೀರು ಕುಡಿಯುವುದು ಸಾಕಾದೀತೇ ಅಥವಾ ಬೇಕಾದೀತೆ? ನಮ್ಮ ದೇಹಕ್ಕೆಷ್ಟು ನೀರು ಅಗತ್ಯ ಎಂಬುದನ್ನು ನಾವು ಅರ್ಥ ಮಾಡಿಕೊಳ್ಳುವುದು ಹೇಗೆ? ಬಾಯಾರಿದಾಗ ನೀರು ಕುಡಿಯುತ್ತೇವೆ ಎಂಬು ಸರಳ ತತ್ವವೇ ಆದರು, ಎಲ್ಲಾ ಸಾರಿಯೂ ಇಷ್ಟೇ ಮಾಡಿದರೆ ಸಾಕಾಗುವುದಿಲ್ಲ. ನಮ್ಮ ದೈಹಿಕ ಚಟುವಟಿಕೆ, ವಾತಾವರಣ, ಋತುಮಾನ, ತಿಂದ ಆಹಾರ ಹೀಗೆ ಹಲವು ವಿಷಯಗಳ ಮೇಲೆ ನಮ್ಮ ನೀರಿನ ಅಗತ್ಯವೆಷ್ಟು ಎಂಬುದು ನಿರ್ಧಾರವಾಗಬೇಕಲ್ಲವೇ? ನಮಗೆಷ್ಟು ನೀರು ಬೇಕು ಮತ್ತು ಸಾಕು ಎಂಬುದನ್ನು ಅರ್ಥ ಮಾಡಿಕೊಳ್ಳಲು ಇಲ್ಲಿದೆ ಉಪಯುಕ್ತ ಮಾಹಿತಿ.

**ಪರಿಣಾಮ ಬೀರುವುದು ಯಾವುದು?:** ನಮ್ಮ ದೈನಂದಿನ ನೀರಿನ ಅಗತ್ಯವೆಷ್ಟು ಎನ್ನುವುದು ಹಲವು ವಿಷಯಗಳನ್ನು ಅವಲಂಬಿಸಿರುತ್ತದೆ. ಉದಾಹರಣೆಗೆ ಹೇಳುವುದಾದರೆ, ಎತ್ತರದ ಪ್ರದೇಶದಲ್ಲಿ ಇರುವವರು, ದೈಹಿಕವಾಗಿ ಕಠಿಣ ಕೆಲಸಗಳನ್ನು ಮಾಡುವವರು ಹೆಚ್ಚಿನ ಪ್ರಮಾಣದಲ್ಲಿ ನೀರನ್ನು ಕುಡಿಯಬೇಕು. ಇದಲ್ಲದೆ, ದೇಹದಲ್ಲಿ ದೊಡ್ಡದಾಗಿರುವವರು, ಸ್ನಾಯುಗಳನ್ನು ಹೆಚ್ಚು ಬೆಳೆಸಿಕೊಂಡವರಿಗೆ ಅಧಿಕ ನೀರು ಬೇಕು. ಫಿಟ್‌ನೆಸ್ ತರಬೇತಿಯಲ್ಲಿ ಇದ್ದರೆ, ಉಷ್ಣತೆ ಮತ್ತು ತೇವಾಂಶ ಹೆಚ್ಚಿರುವ ವಾತಾವರಣದಲ್ಲಿದ್ದರೆ ನೀರಿನ ಆವಶ್ಯಕತೆ ಹೆಚ್ಚಿರುತ್ತದೆ.ಎತ್ತರದ ಪ್ರದೇಶದಲ್ಲಿ ಉಸಿರಾಟ ತೀವ್ರವಾಗಿದ್ದು, ಮೂತ್ರದ ಉತ್ಪಾದನೆಯೂ ಹೆಚ್ಚಾಗಿರುತ್ತದೆ. ಹಾಗಾಗಿ ನೀರು ಹೆಚ್ಚು ಬೇಕು. ಜ್ವರ, ವಾಂತಿ,



ಅತಿಸಾರದಂಥ ಆರೋಗ್ಯ ಏರುಪೇರಿನಲ್ಲಿ ನೀರು ಕುಡಿದಷ್ಟೂ ಬೇಕು. ಹೆಚ್ಚಿನ ಪ್ರಮಾಣದಲ್ಲಿ ಉಪ್ಪು ತಿಂದಿದ್ದರೆ, ಅಧಿಕ ಪ್ರೊಟೀನ್ ತಿಂದರೆ ಹೆಚ್ಚು ನೀರನ್ನು ದೇಹಕ್ಕೆ ಒದಗಿಸಲೇಬೇಕು. ಗರ್ಭಿಣಿಯರು ತಮ್ಮ ಮತ್ತು ಶಿಶುವಿನ ಆರೋಗ್ಯಕ್ಕಾಗಿ ಹೆಚ್ಚಿನ ನೀರು ಕುಡಿಯುವುದು ಮುಖ್ಯ. ಹಾಲುಣಿಸುವ ತಾಯಂದಿರಿಗೆ ಅತಿ ಹೆಚ್ಚಿನ ಪ್ರಮಾಣದಲ್ಲಿ ನೀರು ಬೇಕು.

**ಹೆಚ್ಚೆಂದರೆ ಎಷ್ಟು?:** ಯಾರಿಗೆ ಮತ್ತು ಎಂಥ ಹವಾಮಾನಗಳಲ್ಲಿ ಹೆಚ್ಚಿನ ನೀರು ಬೇಕು ಎಂಬುದನ್ನು ತಿಳಿದಾಗಿದೆ. ಈ ಹೆಚ್ಚಿನ ನೀರು ಎಂದರೇನು? ದಿನಕ್ಕೆ ಎಂಟು ಗ್ಲಾಸ್‌ಗಳ ದ್ರವಾ ಹಾರಕ್ಕೆ ಮೇಲ್ಪಟ್ಟವನ್ನು ಹೀಗೆಂದು ಕರೆಯಬಹುದು. ಅದರಲ್ಲಿ ನೀರು, ಹಾಲು, ಮಜ್ಜಿಗೆ, ಎಳನೀರು, ಕಾಫಿ, ಚಹಾ, ಸೂಪ್, ಹಣ್ಣಿನ ರಸ, ನಿಂಬೆ ಚಹಾ ಅಥವಾ ಕಷಾಯದಂಥವು ಮತ್ತು ಸಕ್ಕರೆ ರಹಿತವಾದ ಯಾವುದೇ ಆರೋಗ್ಯಕರ ಪೇಯಗಳನ್ನು ಈ ಎಂಟು ಗ್ಲಾಸ್‌ಗಳ ಲೆಕ್ಕಕ್ಕೆ ಸೇರಿಸಬಹುದು. ಹಾಗಾಗಿ ದಿನಕ್ಕೆ ಅದಷ್ಟು ದ್ರವಾಹಾರವನ್ನು ತೆಗೆದುಕೊಳ್ಳುವುದು ಖಂಡಿತ ಕಷ್ಟವಲ್ಲ. ಈಗ ಹೆಚ್ಚಿನ ನೀರು ಎಂದರೆ, ಈ ಎಂಟು ಗ್ಲಾಸ್‌ಗಳ ಲೆಕ್ಕಕ್ಕಿಂತ ಅಧಿಕ. ಅತಿ ಕಡಿಮೆ ದೈಹಿಕ ಚಟುವಟಿಕೆಯಿದ್ದು, ವಾತಾವರಣವೂ ಹದವಾಗಿದ್ದಾಗ, ಹೆಚ್ಚು ಹಣ್ಣು, ಪಾನಕ, ಮಜ್ಜಿಗೆಯಂಥವನ್ನು ಕುಡಿಯುತ್ತಿದ್ದಾಗ ನೀರು ಕೊಂಚ ಕಡಿಮೆಯೇ ಸಾಕು ದೇಹಕ್ಕೆ. ದಿನದ ಲೆಕ್ಕಕ್ಕೆ ಹೇಳುವುದಾದರೂ, ನಿತ್ಯವೂ 3 ಲೀ. ನೀರನ್ನೇ ಕುಡಿಯಬೇಕಾದ ಅಗತ್ಯವಿಲ್ಲ. ತಿನ್ನುವ ಆಹಾರಗಳು ರಸಭರಿತವಾಗಿದ್ದರೆ, ಮಜ್ಜಿಗೆ, ಎಳನೀರು, ಸ್ಮೂದಿ ಮುಂತಾದ ಆರೋಗ್ಯಕರ ಪೇಯಗಳನ್ನು ಸಾಕಷ್ಟು ಸೇವಿಸುವವರು ನೀವಾದರೆ- 1.5 ರಿಂದ 1.8 ಲೀ. ನಷ್ಟು ನೀರು ಕುಡಿಯುವುದು ಸಾಕಾಗುತ್ತದೆ.

ಉಳಿದಷ್ಟು ಆಹಾರದಿಂದಲೇ ಒದಗುತ್ತದೆ.

ಹಾಗಾದರೆ ನೀರು ಕುಡಿಯುವುದನ್ನು ಮರೆಯಂತೆ ಮಾಡುವುದು ಹೇಗೆ? ಚೆಂದದ ನೀರಿನ ಬಾಟಲಿಯೊಂದನ್ನು ಇದಕ್ಕಾಗಿ ಇರಿಸಿಕೊಳ್ಳಿ. ಅದರಲ್ಲೂ ತಾಮ್ರದ, ಗಾಜಿನ, ಪಿಂಗಾಣಿಯಂಥ ನೀರಿನ ಬಾಟಲಿ/ ಪಾತ್ರೆಗಳು ಹೆಚ್ಚಿನ ಉತ್ಸಾಹವನ್ನು ತುಂಬುತ್ತವೆ.

ಈ ಬಾಟಲಿಗಳ ಅಳತೆ ತಿಳಿಯುವುದರಿಂದ ದಿನಕ್ಕೆ ಎಷ್ಟು ಬಾರಿ ಅದನ್ನು ಮರು ಪೂರಣ ಮಾಡಿದ್ದೀರಿ ಎನ್ನುವುದರ ಮೇಲೆ ಕುಡಿದ ನೀರಿದ ಪ್ರಮಾಣವನ್ನು ಸುಲಭದಲ್ಲಿ ಲೆಕ್ಕ ಹಾಕಬಹುದು.

## ಪಾರ್ಲರ್‌ಗೆ ಹೋಗೋದೇ ಬೇಡ, ಮುಖಕ್ಕೆ ನಿಂಬೆ ಸಿಪ್ಪೆ ಹೀಗೆ ಹಚ್ಚಿ; ಕಾಂತಿಯುತ ತ್ವಚೆ ನಿಮ್ಮದಾಗುತ್ತೆ!

ಸಾಮಾನ್ಯವಾಗಿ ನಿಂಬೆ ಹಣ್ಣನ್ನು ಬಳಸಿದ ನಂತರ ಅನೇಕ ಮಂದಿ ಅದರ ಸಿಪ್ಪೆ ನಿಷ್ಪ್ರಯೋಜಕವೆಂದು ಕಸದ ಬುಟ್ಟಿಗೆ ಎಸೆಯುತ್ತಾರೆ. ನೀವು ಸಹ ಇದೇ ಕೆಲಸ ಮಾಡುತ್ತಿದ್ದರೆ ಇನ್ಮುಂದೆ ಈ ತಪ್ಪು ಮಾಡುವುದನ್ನು ಬಿಟ್ಟುಬಿಡಿ. ಏಕೆಂದರೆ ನಿಂಬೆ ಸಿಪ್ಪೆಯಲ್ಲಿ ಉತ್ಕರ್ಷಣ ನಿರೋಧಕಗಳು ಮತ್ತು ವಿಟಮಿನ್ ಸಿ ಕೂಡ ಸಮೃದ್ಧವಾಗಿದೆ. ಇದು ನಿಮ್ಮ ತ್ವಚೆಯನ್ನು ಅಂದಗೊಳಿಸಲು ಸಹಾಯ ಮಾಡುತ್ತದೆ. ಇನ್ನೂ ಈ ಬಗ್ಗೆ ರಾಂಚಿಯ ಸೌಂದರ್ಯ ತಜ್ಞ ಸುನಿಧಿ ಅವರು ಮಾತನಾಡಿದ್ದು, ನಿಮ್ಮ ಮೊಣಕೈ, ಮೊಣಕಾಲು ಮತ್ತು ಪಾದಗಳ ಮೇಲೆ ಉಜ್ಜಿ. ಇದು ನೈಸರ್ಗಿಕವಾಗಿ ಕಪ್ಪು ಬಣ್ಣವನ್ನು ತೆಗೆದು ಹಾಕುತ್ತದೆ ಎಂದು ತಿಳಿಸಿದ್ದಾರೆ.

ಅನೇಕ ಮಂದಿ ಬ್ಯೂಟಿ ಪಾರ್ಲರ್‌ಗೆ ಹೋಗಿ ಕಪ್ಪಾದ ಮೊಣಕೈಗಳು ಮತ್ತು ಮೊಣಕಾಲುಗಳ ಅಂದ ಹೆಚ್ಚಿಸಿಕೊಳ್ಳಲು ಸಾವಿರಾರು ರೂಪಾಯಿಗಳನ್ನು ಮ್ಯಾನಿಕ್ಯೂರ್‌ಗೆ ಖರ್ಚು ಮಾಡುತ್ತಾರೆ. ಇನ್ನೂ ಕೆಲ ಮಹಿಳೆಯರು ಇದಕ್ಕಾಗಿ ಸಾವಿರಾರು ರೂಪಾಯಿಗಳ ಕ್ರೀಮ್‌ಗಳನ್ನು ಖರೀದಿಸಿ ಬಳಸುತ್ತಾರೆ, ಹೀಗಿದ್ದರೂ ಎಷ್ಟೋ ಬಾರಿ ಉತ್ತಮ ಫಲಿತಾಂಶ ಕಾಣುವುದಿಲ್ಲ.

ಆದರೆ ಈ ಸಣ್ಣ ಟ್ರಿಕ್ ಟ್ರೈ ಮಾಡಿದರೆ, ಒಂದು ತಿಂಗಳಲ್ಲಿಯೇ ನಿಮ್ಮ ತ್ವಚೆ ಸ್ಪಷ್ಟವಾಗಿ ಕಾಣಿಸುತ್ತದೆ. ನೀವು ಉಪಯೋಗಿಸಿದ ನಿಂಬೆ ಹಣ್ಣಿನ ಸಿಪ್ಪೆಯನ್ನು ಎಸೆಯಬೇಡಿ. ಈ ನಿಂಬೆ ಸಿಪ್ಪೆಗೆ ಸ್ವಲ್ಪ ಸಕ್ಕರೆ, ಅದರ ಕೆಲವು ಧಾನ್ಯಗಳು ಮತ್ತು ಸ್ವಲ್ಪ ಅಡುಗೆ ಸೋಡಾವನ್ನು ಸೇರಿಸಿ.

ಈ ಎಲ್ಲವನ್ನೂ ನಿಂಬೆ ಸಿಪ್ಪೆಯೊಳಗೆ ಹಾಕಿ ನಂತರ ನಿಮ್ಮ ಮೊಣಕೈಗಳು, ಮೊಣಕಾಲುಗಳು ಮತ್ತು ನಿಮ್ಮ ದೇಹದ ಮೇಲೆ ಕಪ್ಪು ಕಲೆ ಇರುವಲ್ಲೆಲ್ಲ ಉಜ್ಜಿ. ನೀವಿದನ್ನು 1 ರಿಂದ 2 ನಿಮಿಷಗಳ ಕಾಲ ನಿರಂತರವಾಗಿ ಮಾಡಿ, ಅಂದರೆ ಉಜ್ಜುತ್ತಲೇ ಇರಿ.

ನಂತರ ಕನಿಷ್ಠ ಅರ್ಧ ಗಂಟೆಯವರೆಗೆ ಹಾಗೆಯೇ ಬಿಟ್ಟು, ನಿಮಗೆ ಹೆಚ್ಚು ಸಮಯವಿದ್ದರೆ, ಒಂದು ಗಂಟೆ ಹಾಗೆಯೇ ಬಿಡಿ, ಇದರಿಂದ ಯಾವುದೇ ರೀತಿಯ ಸಮಸ್ಯೆ ಆಗುವುದಿಲ್ಲ. ನಂತರ ಶುದ್ಧ ನೀರಿನಿಂದ ತೊಳೆಯಿರಿ.

ಇದೇ ವಿಧಾನವನ್ನು ಬೆಳಿಗ್ಗೆ ಮತ್ತು ಸಂಜೆ ಅನುಸರಿಸಿ. ಆಗ ಒಂದು ವಾರದೊಳಗೆ ಉತ್ತಮ ಫಲಿತಾಂಶಗಳನ್ನು ಕಾಣುತ್ತೀರಿ. ನಿಂಬೆಹಣ್ಣು ಕೇವಲ ಆಂಟಿ-ಆಕ್ಸಿಡೆಂಟ್‌ಗಳನ್ನು ಹೊಂದಿರುವುದಲ್ಲದೇ, ವಿಟಮಿನ್ ಸಿ ಮತ್ತು ಫೋಲಿಕ್ ಆಮ್ಲವನ್ನು ಹೇರಳವಾಗಿ ಹೊಂದಿರುತ್ತದೆ ಎಂದು ಸೌಂದರ್ಯ ತಜ್ಞೆ ಸುನಿಧಿ ಹೇಳುತ್ತಾರೆ. ಈ ಕಾರಣದಿಂದಾಗಿ ಇದು ದೇಹದಿಂದ ಸತ್ತ ಚರ್ಮವನ್ನು ಬಹಳ ಸುಲಭವಾಗಿ ತೆಗೆದುಹಾಕುತ್ತದೆ.

## ಅಬ್ಬಾಬ್ಬ ನಾರ್ಮಲ್ ಬೋಂಡದಂತೆ ಅಲ್ಲ ಈ ರಾಗಿ ಬೋಂಡಾ; ರುಚಿಯಷ್ಟೇ ಅಲ್ಲ, ಆರೋಗ್ಯಕ್ಕೂ ಒಳ್ಳೆಯದು!

ಇತ್ತೀಚಿನ ದಿನಗಳಲ್ಲಿ ಆರೋಗ್ಯ ದೃಷ್ಟಿಯಿಂದ ಅನೇಕ ಮಂದಿ ಜಂಕ್ ಫುಡ್ ಸೇವನೆಯಿಂದ ದೂರ ಉಳಿದಿದ್ದಾರೆ. ಅನೇಕ ಮಂದಿಗೆ ಸಂಜೆ ಆಗುತ್ತಿದ್ದಂತೆ ಚಹಾದೊಂದಿಗೆ ಸಮೋಸಾ ಮತ್ತು ಮೈದಾದಿಂದ ತಯಾರಿಸಿದ ಬೋಂಡಾ ತಿನ್ನುವ ಅಭ್ಯಾಸವಿದೆ. ಆದರೆ ಇವು ತೂಕ ಹೆಚ್ಚಿಸುವುದಷ್ಟೇ ಅಲ್ಲದೇ ಹೊಟ್ಟೆ ಉಬ್ಬರದಂತಹ ಸಮಸ್ಯೆಗಳನ್ನು ಸಹ ಉಂಟು ಮಾಡುತ್ತವೆ. ಹೀಗಾಗಿ ನಾಲಿಗೆಗೆ ರುಚಿಕರವಾಗಿದ್ದರೂ ಇವುಗಳ ಸೇವನೆಯನ್ನು ತ್ಯಜಿಸದಿದ್ದರೆ ಗಂಭೀರ ಆರೋಗ್ಯ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ. ಆದರೆ ಎನ್‌ಇನ್ಮುಂದೆ ನೀವು ಈ ಬಗ್ಗೆ ಚಿಂತಿಸುವ ಅಗತ್ಯವಿಲ್ಲ. ಈ ತಿಂಡಿಗಳ ಬದಲಿಗೆ ದೇಹಕ್ಕೆ ಅಗತ್ಯವಾದ ಕ್ಯಾಲ್ಸಿಯಂ, ಕಬ್ಬಿಣ ಮತ್ತು ವಿಟಮಿನ್‌ಗಳನ್ನು ಒದಗಿಸುವ ಆರೋಗ್ಯಕರ ರಾಗಿ ಬೋಂಡಾ ಸವಿಯಿರಿ. ಹಾಗಾದ್ರೆ ತಡಮಾಡದೇ ಗರಿಗರಿಯಾದ ಈ ರಾಗಿ ಬೋಂಡಾ ಖಾದ್ಯವನ್ನು ತಯಾರಿಸುವುದು ಹೇಗೆ ಅಂತ ನೋಡೋಣ ಬನ್ನಿ. ರಾಗಿ ಹಿಟ್ಟು, ಸ್ವಲ್ಪ ನುಗ್ಗೆಸೊಪ್ಪು ಸಣ್ಣಗೆ ಹೆಚ್ಚಿದ ಹಸಿರು ಮೆಣಸಿನಕಾಯಿ ಈರುಳ್ಳಿ ಚೂರುಗಳು, ಉಪ್ಪು ರುಚಿಗೆ ತಕ್ಕಷ್ಟು, ಅಡುಗೆ ಸೋಡಾ ಚಿಟಿಕೆಯಷ್ಟು, ನೀರು ಅಗತ್ಯಕ್ಕೆ ಬೇಕಾದಷ್ಟು ಮೊದಲು, ಒಂದು ಬಟ್ಟಲಿನಲ್ಲಿ ರಾಗಿ ಹಿಟ್ಟನ್ನು ತೆಗೆದುಕೊಳ್ಳಿ. ಅದಕ್ಕೆ ಸಾಕಷ್ಟು ಉಪ್ಪು ಮತ್ತು ಅಡುಗೆ ಸೋಡಾ ಸೇರಿಸಿ. ನಂತರ ಅದೇ ಹಿಟ್ಟಿಗೆ ನುಣ್ಣಗೆ ಕತ್ತರಿಸಿದ ನುಗ್ಗೆ ಸೊಪ್ಪು, ಹಸಿರು ಮೆಣಸಿನಕಾಯಿ ಮತ್ತು ಈರುಳ್ಳಿ ಹೋಳುಗಳನ್ನು ಸೇರಿಸಿ. ಈಗ, ಸಾಕಷ್ಟು ನೀರು ಸೇರಿಸಿ ಮತ್ತು ಹಿಟ್ಟನ್ನು ಚೆನ್ನಾಗಿ ಮಿಶ್ರಣ ಮಾಡಿ, ಇದರಿಂದ ಹಿಟ್ಟು ಉಂಡೆಗಳ ಸ್ಥಿರತೆಯನ್ನು ಪಡೆಯಬಹುದು.




ಈಗ ಸ್ಟವ್ ಮೇಲೆ ಬಾಣಲೆ ಇಟ್ಟು ಬೋಂಡಾ ಕರಿಯಲು ಎಣ್ಣೆ ಸುರಿಯಿರಿ ಮತ್ತು ಅದು ಬಿಸಿಯಾದ ನಂತರ, ಈ ಮಿಶ್ರಣವನ್ನು ಸಣ್ಣ ಉಂಡೆಗಳನ್ನಾಗಿ ಮಾಡಿ ಎಣ್ಣೆಗೆ ಬಿಡಿ.ನೆನಪಿರಲಿ ಈ ಬೋಂಡಾಗಳನ್ನು ಎಣ್ಣೆ ಚೆನ್ನಾಗಿ ಕಾದ ನಂತರ ಕರಿಯಿರಿ, ಇದು ಬೋಂಡಾವನ್ನು ತುಂಬಾ ಗರಿಗರಿಯಾಗಿಸುತ್ತದೆ.

ಈ ರಾಗಿ ಬೋಂಡಾಗಳು ಸಂಜೆ ಚಹಾ ಕುಡಿಯುವ ಹೊತ್ತಿನಲ್ಲಿ ತಿನ್ನಲು ಉತ್ತಮ ಮತ್ತು ಆರೋಗ್ಯಕರ ತಿಂಡಿಯಾಗಿದ್ದು, ಮಕ್ಕಳಿಂದ ಹಿಡಿದು ವಯಸ್ಕರವರೆಗೆ ಎಲ್ಲರೂ ಸಹ ಇಷ್ಟಪಟ್ಟು ಸವಿಯುತ್ತಾರೆ.

## ಮಳೆಗಾಲದಲ್ಲಿ ಕೊತ್ತಂಬರಿ ಸೊಪ್ಪು ಬೇಗ ಕೊಳೆತು ಹೋಗ್ತಿದ್ಯಾ?

ಪ್ರತಿದಿನ ಅಡುಗೆಗೆ ಹೆಚ್ಚಾಗಿ ಬಳಸುವ ಆಹಾರ ಪದಾರ್ಥವೆಂದರೆ ಅದು ಕೊತ್ತಂಬರಿ ಸೊಪ್ಪು. ಆಹಾರದ ರುಚಿ ಮತ್ತು ಪರಿಮಳ ಎರಡೂ ಹೆಚ್ಚಿಸುವಲ್ಲಿ ಕೊತ್ತಂಬರಿ ಪ್ರಮುಖ ಪಾತ್ರವಹಿಸುತ್ತದೆ. ಆದರೆ ಮಾನ್ಸೂನ್ ಸಮಯದಲ್ಲಿ ಕೇವಲ 2 ದಿನದಲ್ಲಿಯೇ ಕೊತ್ತಂಬರಿ ಸೊಪ್ಪು ಹಳದಿ ಬಣ್ಣಕ್ಕೆ ತಿರುಗಲು ಪ್ರಾರಂಭಿಸುತ್ತವೆ. ಆಗ ಇಡೀ ಕೊತ್ತಂಬರಿ ಗೊಂಚಲನ್ನು ಎಸೆಯಬೇಕಾಗುತ್ತದೆ. ಇದರಿಂದ ಹಣ ಸಹ ವ್ಯರ್ಥವಾಗುತ್ತದೆ. ನೀವು ಸಹ ಇದೇ ಸಮಸ್ಯೆಯನ್ನು ಎದುರಿಸುತ್ತಿದ್ದರೆ, ಇನ್ಮುಂದೆ ಈ ಕೆಳಗೆ ತಿಳಿಸಲಾದ ಟಿಪ್ಸ್ ಫಾಲೋ ಮಾಡಿದರೆ ಸಾಕು, ಕೊತ್ತಂಬರಿ ಸೊಪ್ಪನ್ನು 25 ದಿನಗಳವರೆಗೆ ಫ್ರೆಶ್ ಆಗಿ ಇರಿಸಬಹುದು.

ಕೊತ್ತಂಬರಿ ಸೊಪ್ಪು ಬೇಗನೆ ಹಾಳಾಗಲು ಅತಿ ಮುಖ್ಯ ಕಾರಣವೆಂದರೆ ಅತಿಯಾದ ತೇವಾಂಶ. ಕೊತ್ತಂಬರಿ ಸೊಪ್ಪಿನ ಬೇರುಗಳು ಮಣ್ಣಿನಲ್ಲಿ, ತೇವಾಂಶದಿಂದ ಇದ್ದರೆ, ಅವುಗಳು ಬೇಗ ಹಳದಿ ಬಣ್ಣಕ್ಕೆ ತಿರುಗುತ್ತದೆ. ಕ್ರಮೇಣ ಇಡೀ ಗೊಂಚಲು ಹಾಳಾಗಲು ಪ್ರಾರಂಭಿಸುತ್ತದೆ. ಹಾಳಾದ ಎಲೆಗಳು ಎಥಿಲೀನ್ ಅನಿಲವನ್ನು ಬಿಡುಗಡೆ ಮಾಡುತ್ತವೆ, ಇದರಿಂದಾಗಿ ಉಳಿದ ಎಲೆಗಳು ಕೂಡ ಬೇಗನೆ ಹಳದಿ ಬಣ್ಣಕ್ಕೆ ತಿರುಗುತ್ತವೆ. ಹೀಗಾಗಿ ಫ್ರಿಜ್ ಒಳಗೆ ಇಟ್ಟರೂ ಕೊತ್ತಂಬರಿ ಸೊಪ್ಪು ಕೇವಲ 2 ದಿನಗಳಲ್ಲಿ ಹಾಳಾಗಿ ಕಾಣಲು ಆರಂಭಿಸಬಹುದು. ಕೊತ್ತಂಬರಿ ಸೊಪ್ಪನ್ನು ಫ್ರಿಡ್ಜ್‌ನಲ್ಲಿ ಸಂಗ್ರಹಿಸುವ ಮೊದಲು, ಅದರ ಬೇರುಗಳನ್ನು ಕತ್ತರಿಸಬೇಕು. ಬೇರುಗಳು ಹೆಚ್ಚಿನ ಮಣ್ಣು ಮತ್ತು ತೇವಾಂಶವನ್ನು ಹೊಂದಿರುತ್ತವೆ, ಇಡೀ ಗೊಂಚಲನ್ನು ಬೇಗನೆ ಹಾಳುಮಾಡುತ್ತದೆ. ಶುದ್ಧವಾದ ಸ್ಪಾಟುಲಾ ಅಥವಾ ಕತ್ತರಿ ಸಹಾಯದಿಂದ ಬೇರಿನ ಭಾಗವನ್ನು ಬೇರ್ಪಡಿಸಿ.



ಇದು ಸಂಗ್ರಹಣೆಯನ್ನು ಸುಲಭಗೊಳಿಸುತ್ತದೆ ಮತ್ತು ಹಾಳಾಗುವ ಸಾಧ್ಯತೆಗಳನ್ನು ಕಡಿಮೆ ಮಾಡುತ್ತದೆ. ಕೊತ್ತಂಬರಿ ಸೊಪ್ಪನ್ನು ಚೆನ್ನಾಗಿ ಹರಡಿ ಮತ್ತು ಯಾವುದೇ ಎಲೆಗಳು ಹಳದಿ, ಕಪ್ಪು, ಒಣಗಿದ ಅಥವಾ ಜಿಗುಟಾದಂತೆ ಕಂಡು ಬಂದರೆ, ಅವುಗಳನ್ನು ತಕ್ಷಣ ತೆಗೆದುಹಾಕಿ. ಸಂಪೂರ್ಣ ಕೊತ್ತಂಬರಿ ಸೊಪ್ಪು ಹಾಳಾಗಲು ಒಂದು ಹಾಳಾದ ಎಲೆ ಸಾಕು. ಆದ್ದರಿಂದ, ಕೊತ್ತಂಬರಿ ಸಂಗ್ರಹಿಸುವ ಮುನ್ನ ಅವುಗಳನ್ನು ಸಂಪೂರ್ಣವಾಗಿ ಪರಿಶೀಲಿಸುವುದು ಮುಖ್ಯ. ಕೊತ್ತಂಬರಿ ಸೊಪ್ಪನ್ನು ತೆರೆದಿಡುವ ಬದಲು ಗಾಳಿಯಾಡದ ಪ್ಲಾಸ್ಟಿಕ್ ಡಬ್ಬದಲ್ಲಿ ಸಂಗ್ರಹಿಸುವುದು ಉತ್ತಮ. ಆ ಡಬ್ಬ ಸಂಪೂರ್ಣವಾಗಿ ಸ್ವಚ್ಛವಾಗಿರಬೇಕು ಮತ್ತು ಒಣಗಿರಬೇಕು. ಅದರ ಕೆಳಗೆ ಕಾಗದದ ಟವಲ್ ಅಥವಾ ಸ್ವಚ್ಛವಾದ ಹತ್ತಿ ಬಟ್ಟೆಯನ್ನು ಇರಿಸಿ. ಇದು ಹೆಚ್ಚುವರಿ ತೇವಾಂಶವನ್ನು ಹೀರಿಕೊಳ್ಳುತ್ತದೆ ಮತ್ತು ಕೊತ್ತಂಬರಿ ಸೊಪ್ಪು ಹೆಚ್ಚು ಕಾಲ ತಾಜಾವಾಗಿರಿಸುತ್ತದೆ.

ಕೊತ್ತಂಬರಿ ಸೊಪ್ಪನ್ನು ಡಬ್ಬದಲ್ಲಿ ಸಂಗ್ರಹಿಸಿದ ನಂತರ, ಅದರ ಮುಚ್ಚಳವನ್ನು ಬಿಗಿಯಾಗಿ ಮುಚ್ಚಿ, ನಂತರ ಅದನ್ನು ಫ್ರಿಡ್ಜ್ ನಲ್ಲಿ ಸಂಗ್ರಹಿಸಿ. ಗಾಳಿಯಾಡದ ಡಬ್ಬವು ಹೊರಗಿನಿಂದ ತೇವಾಂಶ ಪ್ರವೇಶಿಸುವುದನ್ನು ತಡೆಯುತ್ತದೆ ಮತ್ತು ಒಳಗಿನ ತಂಪಾದ ವಾತಾವರಣವು ಕೊತ್ತಂಬರಿ ಸೊಪ್ಪನ್ನು ದೀರ್ಘಕಾಲದವರೆಗೆ ಹಸಿರಾಗಿರಿಸುತ್ತದೆ. ಇದು ಎಲೆಗಳು ಒಣಗುವುದನ್ನು ತಡೆಯುತ್ತದೆ ಮತ್ತು ತಾಜಾತನವನ್ನು ಕಾಪಾಡಿಕೊಳ್ಳುತ್ತದೆ. ನೀವು ಡಬ್ಬದ ಕೆಳಗೆ ಟಿಶ್ಯೂ ಪೇಪರ್ ಇಟ್ಟಿದ್ದರೆ, ಅದನ್ನು ಆಗಾಗ ಪರಿಶೀಲಿಸುತ್ತಿರಿ, ಅದು ಒದ್ದೆಯಾಗುತ್ತಿದೆಯೇ ಎಂದು ನೋಡಿ, ಬದಲಾಯಿಸಿ. ಅಲ್ಲದೇ, ಯಾವುದಾದರೂ ಎಲೆ ಹಾಳಾಗಿರುವುದು ಕಂಡು ಬಂದರೆ, ಅದನ್ನು ತಕ್ಷಣ ಹೊರತೆಗೆಯಿರಿ. ಹೀಗೆ ಮಾಡುವುದರಿಂದ, ಉಳಿದ ಕೊತ್ತಂಬರಿ ಸೊಪ್ಪು ಸುರಕ್ಷಿತವಾಗಿರುತ್ತದೆ ಮತ್ತು ಹೆಚ್ಚಿನ ದಿನಗಳವರೆಗೆ ಬಳಸಬಹುದು.

# ಅಭಿವೃದ್ಧಿಯ ಮಳೆಹನಿಗಾಗಿ ಚಾತಕ ಪಕ್ಷಿಯಂತೆ ಕಾದಿರುವ ಜಿಲ್ಲೆಯ ಜನತೆ

## ರಾಜಕೀಯಕ್ಕೆ ಅವಕಾಶ ಇರಬಾರದು; ಪಕ್ಷಗಳು ಬೇರೆ ಇರಬಹುದು, ಆದರೆ ಜಿಲ್ಲೆಯ ಹಿತಾಸಕ್ತಿ ಒಂದೇ ಆಗಿರಬೇಕು

• **ಉದಯವಾಹಿನಿ ವಿಜಯಪುರ, :**

ಇತಿಹಾಸವನ್ನು ಕಟ್ಟಿದ ಈ ನೆಲ ಇಂದು ತನ್ನ ಭವಿಷ್ಯವನ್ನು ಕಟ್ಟಿಕೊಳ್ಳಲು ಕಾಯುತ್ತಿದೆ. ಗೋಲಗುಮ್ಮಟದ ವೈಭವದಿಂದ ವಿಶ್ವದ ಗಮನ ಸೆಳೆದ ವಿಜಯಪುರ, ಕೃಷ್ಣೆಯ ಕರುಣೆಯಿಂದ ಸಮೃದ್ಧವಾಗಬೇಕಿದ್ದ ವಿಜಯಪುರ, ಇಂದು ಮಾತ್ರ ಅಭಿವೃದ್ಧಿಯ ಪಥದಲ್ಲಿ ಇನ್ನೂ ನಿರೀಕ್ಷೆಯ ಹೆಜ್ಜೆಗಳನ್ನೇ ಎಣಿಸುತ್ತಿದೆ.

ಒಂದು ಕಡೆ ಅನಾವೃಷ್ಟಿ, ಮತ್ತೊಂದು ಕಡೆ ಅತಿವೃಷ್ಟಿ. ಒಂದು ವರ್ಷ ಮೋಡಗಳು ಮರೆವಾದರೆ ಬರದ ಬವಣೆ ಮತ್ತೊಂದು ವರ್ಷ ಮಳೆ ಆರ್ಭಟಿಸಿದರೆ ಬೆಳೆಗಳೇ ನೀರುಪಾಲು. ಪ್ರಕೃತಿಯ ಈ ಎರಡು ಅತಿರೇಕಗಳ ನಡುವೆ ವಿಜಯಪುರದ ರೈತ ದಶಕಗಳಿಂದ ತನ್ನ ಬದುಕಿನ ಭರವಸೆಯನ್ನು ಉಳಿಸಿಕೊಳ್ಳಲು ಹೋರಾಟ

**1 : ''ಬರದ ಜಿಲ್ಲೆ'' ಎಂಬ ಹಣೆಪಟ್ಟಿ**
**2 : ಕೃಷ್ಣಾ ನದಿ ಜಿಲ್ಲೆಯ ಮಣ್ಣ**
**3 : ಸ್ವಾತಿ ನಕ್ಷತ್ರದ ಮಳೆಹನಿಗಾಗಿ**

ನಡೆಸುತ್ತಿದ್ದಾನೆ. ಹೀಗಾಗಿ ''ಬರದ ಜಿಲ್ಲೆ'' ಎಂಬ ಹಣೆಪಟ್ಟಿ ಇನ್ನೂ ಸಂಪೂರ್ಣವಾಗಿ ಅಳಿದು ಹೋಗಿಲ್ಲ.

ಇದು ಕೇವಲ ಪ್ರಕೃತಿಯ ವೈಪರೀತ್ಯವಲ್ಲ ದೀರ್ಘಕಾಲದ ದೂರದೃಷ್ಟಿಯ ಅಭಿವೃದ್ಧಿ ಯೋಜನೆಗಳ ಕೊರತೆಯನ್ನೂ ನೆನಪಿಸುವ ಕಹಿ ವಾಸ್ತವ. ಕೃಷ್ಣಾ ನದಿ ಜಿಲ್ಲೆಯ ಮಣ್ಣನ್ನು ಸವರುತ್ತಾ ಹರಿಯುತ್ತಿದ್ದರೂ, ಅದರ ನೀರು ಜಿಲ್ಲೆಯ ಪ್ರತಿಯೊಂದು ಹೊಲದವರೆಗೆ ಸಮರ್ಪಕವಾಗಿ



ಉದಯವಾಹಿನಿ ಚಿತ್ರ

ತಲುಪಿದೆಯೇ? ನೀರಾವರಿ ಯೋಜನೆಗಳು ಎಲ್ಲ ರೈತರ ಬದುಕಿಗೆ ಆಶಾಕಿರಣವಾಗಿವೆಯೇ? ಕೈಗಾರಿಕೆಗಳು ಯುವಕರಿಗೆ ಉದ್ಯೋಗದ ಬಾಗಿಲು ತೆರೆದಿವೆಯೇ? ಗ್ರಾಮೀಣ ಪ್ರದೇಶಗಳು ಅಭಿವೃದ್ಧಿಯ ಹೊಸ ಬೆಳಕನ್ನು ಕಂಡಿವೆಯೇ? ಈ ಪ್ರಶ್ನೆಗಳಿಗೆ ಉತ್ತರ ಹುಡುಕಿದಾಗ ಇನ್ನೂ ಅಪೂರ್ಣತೆಯ ಚಿತ್ರವೇ ಕಣ್ಣಿಗೆ ಬೀಳುತ್ತದೆ.

ಜ್ಞಾನ ಯೋಗಾಶ್ರದ ಪರಮಪೂಜ್ಯ ಶ್ರೀ ಸಿದ್ಧೇಶ್ವರ ಸ್ವಾಮೀಜಿ ತಮ್ಮ ಜೀವಮಾನದುದ್ದಕ್ಕೂ ಒಂದು ಮಾತನ್ನು ನಿರಂತರವಾಗಿ ಪ್ರತಿಪಾದಿಸುತ್ತಿದ್ದರು ''ಜಿಲ್ಲೆಯ ಅಭಿವೃದ್ಧಿಯ ವಿಷಯದಲ್ಲಿ ರಾಜಕೀಯಕ್ಕೆ ಅವಕಾಶ ಇರಬಾರದು; ಪಕ್ಷಗಳು ಬೇರೆ ಇರಬಹುದು, ಆದರೆ ಜಿಲ್ಲೆಯ ಹಿತಾಸಕ್ತಿ ಒಂದೇ ಆಗಿರಬೇಕು.'' ಇದು ಕೇವಲ ಒಂದು ಸಲಹೆಯಾಗಿರಲಿಲ್ಲ

ವಿಜಯಪುರದ ಭವಿಷ್ಯಕ್ಕಾಗಿ ಅವರು ನೀಡಿದ ದಾರಿದೀಪವಾಗಿತ್ತು. ಇಂದು ವಿಜಯಪುರ ಜಿಲ್ಲೆಗೆ ಪ್ರಭಾವಿ ರಾಜಕೀಯ ನಾಯಕತ್ವವಿದೆ. ಸಚಿವರು, ಶಾಸಕರು, ಸಂಸದರು, ವಿವಿಧ ಪಕ್ಷಗಳ ಹಿರಿಯ ನಾಯಕರು-ಎಲ್ಲರೂ ಇದ್ದಾರೆ. ಆದರೆ ಇತಿಹಾಸ ಕೇಳುತ್ತಿರುವ ಪ್ರಶ್ನೆ ಒಂದೇ ಈ ನಾಯಕತ್ವ ಅಭಿವೃದ್ಧಿಯ ಗುರಿಗಾಗಿ ಒಂದೇ ವೇದಿಕೆಯಲ್ಲಿ ನಿಲ್ಲುವ ದಿನ ಯಾವಾಗ? - ಶ್ರೀ ಸಿದ್ಧೇಶ್ವರ ಸ್ವಾಮೀಜಿ ಚಾತಕ ಪಕ್ಷಿಯು ಸ್ವಾತಿ ನಕ್ಷತ್ರದ ಮಳೆಹನಿಗಾಗಿ ಆಕಾಶದತ್ತ ಕಣ್ಣಿಟ್ಟು ಕಾಯುವಂತೆ, ವಿಜಯಪುರದ ಜನತೆ ಅಭಿವೃದ್ಧಿಯ ಮೊದಲ ಮಳೆಹನಿಗಾಗಿ ದಶಕಗಳಿಂದ ಕಾತರದಿಂದ ಕಾಯುತ್ತಿದ್ದಾರೆ. ಚುನಾವಣೆಗಳು ಬಂದವು, ಸರ್ಕಾರಗಳು ಬದಲಾದವು, ಭರವಸೆಗಳು ಮೊಳಗಿದವು, ಘೋಷಣೆಗಳು ಕೇಳಿಬಂದವು.

**ದೀರ್ಘಾವಧಿಯ ಯೋಜನೆ**

ವಿಜಯಪುರಕ್ಕೆ ಪ್ರತ್ಯೇಕ ಸಮಗ್ರ ಅಭಿವೃದ್ಧಿ ನೀಲನಕ್ಷೆ ರೂಪುಗೊಂಡು, ನೀರಾವರಿ, ಕೃಷಿ, ಕೈಗಾರಿಕೆ, ಪ್ರವಾಸೋದ್ಯಮ, ಶಿಕ್ಷಣ ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ದೀರ್ಘಾವಧಿಯ ಯೋಜನೆಗಳನ್ನು ಕಾಲಮಿತಿಯಲ್ಲಿ ಜಾರಿಗೊಳಿಸುವ ಸಂಕಲ್ಪ ಮೂಡಬೇಕಾಗಿದೆ.

> ಇಂದು ವಿಜಯಪುರ ಜಿಲ್ಲೆಗೆ ಪ್ರಭಾವಿ ರಾಜಕೀಯ ನಾಯಕತ್ವವಿದೆ. ಸಚಿವರು, ಶಾಸಕರು, ಸಂಸದರು, ವಿವಿಧ ಪಕ್ಷಗಳ ಹಿರಿಯ ನಾಯಕರು-ಎಲ್ಲರೂ ಇದ್ದಾರೆ. ಆದರೆ ಇತಿಹಾಸ ಕೇಳುತ್ತಿರುವ ಪ್ರಶ್ನೆ ಒಂದೇ: ಈ ನಾಯಕತ್ವ ಅಭಿವೃದ್ಧಿಯ ಗುರಿಗಾಗಿ ಒಂದೇ ವೇದಿಕೆಯಲ್ಲಿ ನಿಲ್ಲುವ ದಿನ ಯಾವಾಗ?
> -ಶ್ರೀ ಸಿದ್ಧೇಶ್ವರ ಸ್ವಾಮೀಜಿ

ಆದರೆ ಜಿಲ್ಲೆಯ ಅಭಿವೃದ್ಧಿಯ ಪಯಣ ಜನರು ಕನಸು ಕಂಡ ವೇಗದಲ್ಲಿ ಸಾಗಲಿಲ್ಲ ಎಂಬ ನೋವು ಇನ್ನೂ ಅಳಿಯಿಲ್ಲ. ಇನ್ನಾದರೂ ರಾಜಕೀಯ ಭಿನ್ನಾಭಿಪ್ರಾಯಗಳನ್ನು ಬದಿಗಿಟ್ಟು, ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು, ಅಧಿಕಾರಿಗಳು, ಕೈಗಾರಿಕ ಉದ್ಯಮಿಗಳು, ರೈತ ಸಂಘಟನೆಗಳು ಹಾಗೂ ನಾಗರಿಕ ಸಮಾಜ ಒಂದೇ ಸಂಕಲ್ಪದೊಂದಿಗೆ ಮುಂದೆ ಬರಬೇಕಾಗಿದೆ.

# ಗುಣಮಟ್ಟದ ಶಾಶ್ವತ ಆಸ್ತಿಗಳ ನಿರ್ಮಾಣಕ್ಕೆ ಒತ್ತು: ನೀಲಗಂಗಾ ಬಬಲಾದ

• **ಉದಯವಾಹಿನಿ ಯಲಬುರ್ಗಾ :**

ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜ್ಗಾರ್ ಅಂಡ್ ಅಜೀವಿಕ ಮಿಷನ್ (ಗ್ರಾಮೀಣ) ಕಾಯ್ದೆ, 2025 ಗ್ರಾಮೀಣ ಭಾರತದ ಸಮಗ್ರ ಅಭಿವೃದ್ಧಿಗೆ ಪೂರಕವಾದ ಮಹತ್ವಾಕಾಂಕ್ಷಿ ಯೋಜನೆಯಿಂದ ಗುಣಮಟ್ಟದ ಹಾಗೂ ಶಾಶ್ವತ ಆಸ್ತಿಗಳ ನಿರ್ಮಾಣಕ್ಕೆ ಒತ್ತು ನೀಡಲಾಗಿದೆ ಎಂದು ಮಾನ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ನೀಲಗಂಗಾ ಬಬಲಾದ ತಿಳಿಸಿದರು.

ತಾಲ್ಲೂಕಿನ ಚಿಕ್ಕಮ್ಯಾಗೇರಿ ಗ್ರಾಮ ಪಂಚಾಯತಿ ವ್ಯಾಪ್ತಿಯ ಕುಡಗುಂಟಿ ಗ್ರಾಮದ ಗದ್ದಿ ಬಸವೇಶ್ವರ ದೇವಸ್ಥಾನ ಆವರಣ ಹಾಗೂ ರಸ್ತೆ ಬದಿ ಸಸಿನೆಡುವ ಕಾರ್ಯಕ್ರಮವು ತಾಲ್ಲೂಕು ಪಂಚಾಯತಿ, ಸಾಮಾಜಿಕ ಅರಣ್ಯ ಇಲಾಖೆ, ಗ್ರಾಮ ಪಂಚಾಯತಿ ವತಿಯಿಂದ ವಿಬಿಜಿರಾಮ್ ಜಿ ಯೋಜನೆಗೆ ಚಾಲನೆ, ತಾಯಿ ಹೆಸರಿನಲ್ಲಿ ಸಸಿ ನೆಡುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಜು.1 ರಿಂದ ಆರಂಭವಾಗಿರುವ ಯೋಜನೆಯ ಮೂಲಕ ಗುಣಮಟ್ಟದ


ಉದಯವಾಹಿನಿ ಚಿತ್ರ

ಹಾಗೂ ಶಾಶ್ವತ ಆಸ್ತಿಗಳ ನಿರ್ಮಾಣಕ್ಕೆ ಒತ್ತು ನೀಡಲಾಗುತ್ತಿದೆ. ಯೋಜನೆಯಡಿ ಅಕಯಶಲ ಕೂಲಿಕಾರರಿಗೆ 382 ಕ್ಕೆ ಕೂಲಿಮೊತ್ತ ಹೆಚ್ಚಿಸಲಾಗಿದೆ. ಹಾಗೇ ಒಂದು ಕುಟುಂಬಕ್ಕೆ ವರ್ಷಕ್ಕೆ 125 ದಿನ ಕೆಲಸ ನೀಡಲಾಗುವುದು.

ಎಲ್ಲಾ ಕೂಲಿಕಾರರು ಯೋಜನೆಯ ಸದುಪಯೋಗ ಪಡಿದುಕೊಳ್ಳಿ ಎಂದು ಕರೆ ನೀಡಿದರು.ಕೂಲಿಕಾರರಿಗೆ ಇನ್ನಷ್ಟು ಬಲ ನೀಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರದ ಮಹತ್ತರ ಯೋಜನೆಯಾದ ವಿಬಿ-ಜಿ ರಾಮ್ ಜಿ ಯೋಜನೆ ಜುಲೈ 01 ರಿಂದ ಇಡೀ ದೇಶದಾದ್ಯಂತ ಚಾಲನೆ ನೀಡಲಾಗಿದೆ. ಗ್ರಾಮೀಣ ಜನರ ಜೀವನಮಟ್ಟ ಸುಧಾರಿಸುವ ಜೊತೆಗೆ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿಗೆ ಈ ಯೋಜನೆ ಸಹಕಾರಿಯಾಗಲಿದೆ. ಪ್ರತಿಯೊಬ್ಬ ಅರ್ಹ ಕುಟುಂಬವೂ ಯೋಜನೆಯ ಸೌಲಭ್ಯಗಳನ್ನು ಪಡೆದು ಉದ್ಯೋಗದ ಜೊತೆಗೆ ಗ್ರಾಮಾಭಿವೃದ್ಧಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದರು.

ಕಾರ್ಯಕ್ರಮದಲ್ಲಿ ದೇವಸ್ಥಾನ ಆವರಣದಲ್ಲಿ 40 ಸಸಿಗಳನ್ನು ನೆಡಲಾಯಿತು. ರಸ್ತೆ ಬದಿ 900 ಸಸಿಗಳನ್ನು ನೆಡಲು ಚಾಲನೆ ನೀಡಲಾಯಿತು. ಈ ವೇಳೆ ತಾಲ್ಲೂಕು ಪಂಚಾಯಿತಿ ಸಹಾಯಕ ನಿರ್ದೇಶಕರಾದ ಹನಮಂತಗೌಡ ಪೊಲೀಸ್ ಪಾಟೀಲ್, ಫಕೀರಪ್ಪ ಕಟ್ಟಿಮನಿ, ಸಾಮಾಜಿಕ ಅರಣ್ಯ ಇಲಾಖೆಯ ಆರ್ ಎಫ್ ಒರಾದ ಬಸವರಾಜ ಗೋಗೇರಿ, ಪಿಡಿಒರಾದ ವೆಂಕಟೇಶ ನಾಯಕ, ತಾಂತ್ರಿಕ ಸಂಯೋಜಕರಾದ ಸಂತೋಷ ನಂದಾಪುರ, ಐಇಸಿ ಸಂಯೋಜಕರಾದ ಶರಣಪ್ಪ ಹಾಳಕೇರಿ, ಅರಣ್ಯ ಇಲಾಖೆ ಅಧಿಕಾರಿಗಳು, ಸಿಬ್ಬಂದಿ, ಗ್ರಾಮ ಪಂಚಾಯತಿ ಸಿಬ್ಬಂದಿ, ಕೂಲಿಕಾರರು ಹಾಜರಿದ್ದರು.

# ವಿಶೇಷ ಚೇತನರು ಅಸಮರ್ಥತೆ ಇದ್ದವರೂ ಸಾಧನೆಯ ಶಿಖರವನ್ನೇರಿದ್ದಾರೆ

• **ಉದಯವಾಹಿನಿ ಚನ್ನಮ್ಮನ ಕಿತ್ತೂರು,:**

ವಿಶೇಷಚೇತನರು ಅಸಮರ್ಥತೆ ಇದ್ದವರೂ ಉನ್ನತ ಸಾಧನೆಯ ಶಿಖರವನ್ನೇರಿದ್ದಾರೆ. ಅಂತಹ ಮಹಾನ್ ಸಾಧಕರ ಆದರ್ಶಗಳನ್ನು ಅಂಗವಿಕಲರು ಪಾಲಿಸುವಂತೆ ಸಂಸದ ವಿಶ್ವೇಶ್ವರ ಹೆಗಡೆ ಕಾಗೇರಿ ಹೇಳಿದರು.

ತಾಲ್ಲೂಕಿನ ಬೈಲೂರ ಗ್ರಾಪಂ ಆವರಣದ ಅಂಬೇಡ್ಕರ ಭವನದಲ್ಲಿ ಸಸಿಗೆ ನೀರುಣಿಸಿ ದಿ. ಮಾಜಿ ಸಚಿವ ಡಿ.ಬಿ.ಇನಾಮದಾರ 78ನೇ ಜನ್ಮ ದಿನದ ನಿಮಿತ್ಯ ಭಾರತ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ, ಸಚಿವಾಲಯ ಆಶ್ರಯದಲ್ಲಿ ಡಿ.ಬಿ.ಇನಾಮದಾರ ಫೌಂಡೇಶನ್ ಹಾಗೂ 'ಸಂಯೋಗದೊಂದಿಗೆ ಕ್ಷೇತ್ರದ ವಿವಿಧ ಗ್ರಾಮಗಳಲ್ಲಿ ವಿಶೇಷಚೇತನರಿಗೆ ಮತ್ತು ವಯೋವೃದ್ಧರಿಗೆ ವಿವಿಧ ಸಲಕರಣೆ ವಿತರಿಸಿ ಮಾತನಾಡಿದರು.

ವಿಕಲಚೇತನರು ಎಂದಾಕ್ಷಣ ಕೈಲಾಗದವರು ಎಂದರ್ಥಲ್ಲ ಅವರು ವಿಶೇಷ ಸಾಮರ್ಥ್ಯ ಹೊಂದಿರುತ್ತಾರೆ. ನಿರಂತರ ಶ್ರಮವಹಿಸುವ ಮೂಲಕ ಸಾಧನೆಯ ಹಾದಿ ಹಿಡಿಯಬೇಕು.

ಪಟ್ಟಿಯಲ್ಲಿ ಉಳಿದುಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳು ನೋಡಿಕೊಳ್ಳಬೇಕೆಂದು ಸೂಚನೆ ನೀಡಿದರು.

# ಡೆಂಗೀ ನಿಯಂತ್ರಣ ಮಾಸಾಚರಣೆ: ಕಾರ್ಯಕ್ರಮ ಯಶಸ್ಸಿಗೆ ಸಾರ್ವಜನಿಕರ ಸಹಭಾಗಿತ್ವ ಅಗತ್ಯ. - ಡಾ. ಮೇಘನ ಟಿ.ಆರ್ ಅಭಿಪ್ರಾಯ.

• **ಉದಯವಾಹಿನಿ ಚಿತ್ರದುರ್ಗ:**

ತಾಲ್ಲೂಕಿನ ಹಿರೇಗುಂಟನೂರು ಗ್ರಾಮದ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ದಿನಾಂಕ:7/7/2026ರ ಮಂಗಳವಾರ ರಾಷ್ಟ್ರೀಯ ಡೆಂಗೀ ರೋಗ ನಿಯಂತ್ರಣ ಮಾಸಾಚರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಮೇಘನ ಟಿ.ಆರ್. ಕಾರ್ಯಕ್ರಮಕ್ಕೆ ಚಾಲನೆ ನೀಡಿದರು ಈ ಸಂಧರ್ಭದಲ್ಲಿ ಮಾತನಾಡಿದ ಅವರು ಈಗ ಮಳೆಗಾಲದ ದಿನಗಳಾಗಿದ್ದು ಈ ದಿನಗಳಲ್ಲಿ ಸೊಳ್ಳೆಗಳ ಉತ್ಪತ್ತಿ ಹೆಚ್ಚಾಗಿ ಡೆಂಘೀ ಹರಡುವ ಸಾಧ್ಯತೆ ಹೆಚ್ಚಿರುವುದರಿಂದ, ಜುಲೈ ತಿಂಗಳಿಡೀ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಮತ್ತು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಲು ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗುತ್ತದೆ. ಈ ಸಾಲಿನ ಕಾರ್ಯಕ್ರಮದ ಘೋಷವಾಕ್ಯವಾದ ಡೆಂಗೀ ನಿಯಂತ್ರಣಕ್ಕಾಗಿ ಸಮುದಾಯದ ಸಹಭಾಗಿತ್ವ: ಪರಿಶೀಲಿಸಿ, ಸ್ವಚ್ಛಗೊಳಿಸಿ ಮತ್ತು ಮುಚ್ಚಿಡಿ ಎಂದಾಗಿದ್ದು ಇದರ ಅರ್ಥ ಈ ವರ್ಷದ ಜಾಗೃತಿ



ಉದಯವಾಹಿನಿ ಚಿತ್ರ

ಅಭಿಯಾನವು ಕೇವಲ ಆರೋಗ್ಯ ಇಲಾಖೆಗೆ ಸೀಮಿತವಾಗದೆ, ಸಾರ್ವಜನಿಕರು ಹಾಗೂ ಸಮುದಾಯಗಳು ಸಕ್ರಿಯವಾಗಿ ಪಾಲ್ಗೊಳ್ಳುವುದರ ಮೇಲೆ ಹೆಚ್ಚಿನ ಒತ್ತು ನೀಡಿಲಾಗಿದೆ ಸಾರ್ವಜನಿಕರು ವಾರಕ್ಕೊಮ್ಮೆ ಮನೆಯ ಸುತ್ತಮುತ್ತ ಎಲ್ಲಾದರೂ ನೀರು ನಿಂತಿದೆಯೇ ಎಂದು ಪರಿಶೀಲಿಸಿ. ಹಳೆಯ ಟೈರ್‌ಗಳು, ಒಡೆದ ಪ್ಲಾಸ್ಟಿಕ್ ಪರಿಕರಗಳು, ಎಳನೀರಿನ ಗಿಣ್ಣುಗಳು, ಟೆರೇಸ್ ಮೇಲಿನ ಭಾಗಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳಬೇಕು ಎಂದು ಸಲಹೆ ನೀಡಿದರು.ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಆರೋಗ್ಯ ನಿರೀಕ್ಷಣಾಧಿಕಾರಿ ಪುಟ್ಟುಸ್ವಾಮಿ ಸೊಳ್ಳೆ ಕಚ್ಚಿದ 5 ರಿಂದ 7 ದಿನಗಳಲ್ಲಿ ಡೆಂಗೀ ಜ್ವರದ ಲಕ್ಷಣಗಳು ಕಾಣಿಸಿಕೊಳ್ಳುತ್ತವೆ ಯಾರಿಗಾದರೂ ದಿಢೀರನೆ ಬರುವ ತೀವ್ರ ಜ್ವರ ಮತ್ತು ಅಸಹನೀಯ ತಲೆನೋವು.ಕಣ್ಣುಗಳ ಹಿಂಭಾಗದಲ್ಲಿ ತೀವ್ರ ನೋವು.ಮೂಳೆ, ಕೀಲು ಮತ್ತು ಸ್ನಾಯುಗಳಲ್ಲಿ ವಿಪರೀತ ನೋವು ಕಂಡುಬಂದರೆ ನಿರ್ಲಕ್ಷಿಸದೆ ತಕ್ಷಣವೇ ಹತ್ತಿರದ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿನೀಡಿ ಸೂಕ್ತ ಚಿಕಿತ್ಸೆ ಪಡೆಯಬೇಕು ಎಂದು ತಿಳಿಸಿದರು.ಕಾರ್ಯಕ್ರಮದಲ್ಲಿ ಆರೋಗ್ಯ ಕೇಂದ್ರದ ಸಿಬ್ಬಂದಿಗಳಾದ ಹಾಲಾನಾಯ್ಕ, ಇಸ್ಮಾಯಿಲ್ ಜಬೀವುಲ್ಲ, ಗಂಗಮ್ಮ, ಈರಮ್ಮ, ಜ್ಞಾನೇಶ್ವರಿ, ಸಿಂಧು, ಪುಷ್ಪವತಿ, ಸಿದ್ದಮ್ಮ, ಲೋಕೇಶ್ ಹಾಗೂ ಆಶಾ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

# ಸಾಲುಮರದ ತಿಮ್ಮಕ್ಕ ವೃಕ್ಷೋದ್ಯಾನವನ ಕಾಮಗಾರಿ ವೀಕ್ಷಿಸಿದ ಶಾಸಕ ನಾಡಗೌಡ

• **ಉದಯವಾಹಿನಿ ಮುದ್ದೇಬಿಹಾಳ:**


ಪಟ್ಟಣದ ಬಿದರಕುಂದಿ ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆಯಿಂದ ನಿರ್ಮಾಣಗೊಳ್ಳುತ್ತಿರುವ 'ಸಾಲುಮರದ ತಿಮ್ಮಕ್ಕ ವೃಕ್ಷೋದ್ಯಾನವನ'ಕ್ಕೆ ಶಾಸಕ ಸಿ.ಎಸ್ ನಾಡಗೌಡ (ಅಪ್ಪಾಜಿ) ಭೇಟಿ ನೀಡಿ ಕಾಮಗಾರಿ ಪರಿಶೀಲಿಸಿದರು. ಈ ವೇಳೆ ಅರಣ್ಯ ಇಲಾಖೆಯ ಶ್ರದ್ಧೆಯ ಕೆಲಸಕ್ಕೆ ಅವರು ಭಾರೀ ಮೆಚ್ಚುಗೆ ವ್ಯಕ್ತಪಡಿಸಿದರು.

ಈಗಾಗಲೇ 4 ಸಾವಿರಕ್ಕೂ ಹೆಚ್ಚು ಸಸಿಗಳನ್ನು ನೆಡಲಾಗಿದ್ದು, ಪ್ರಕೃತಿ ಮಡಿಲಲ್ಲಿ ಉದ್ಯಾನವನ ಸುಂದರವಾಗಿ ರೂಪುಗೊಳ್ಳುತ್ತಿದೆ. ಒಟ್ಟು 37 ಎಕರೆ ಜಾಗದಲ್ಲಿ 33 ಎಕರೆಯನ್ನು ವೃಕ್ಷೋದ್ಯಾನವನಕ್ಕೆ ಹಾಗೂ 4 ಎಕರೆಯನ್ನು ಪ್ರವಾಸೋದ್ಯಮ ಇಲಾಖೆಯ ವಸತಿಗೃಹಗಳಿಗೆ ನೀಡಲಾಗಿದೆ. ಉದ್ಯಾನವನದ ಕೊನೆಯಲ್ಲಿ ಕೆರೆ ನಿರ್ಮಿಸಿ ವಾಟರ್ ಬೋಟಿಂಗ್ ವ್ಯವಸ್ಥೆ ಹಾಗೂ ಮಿನಿ ಜೂ ಮಾಡುವ ಉದ್ದೇಶ ಹೊಂದಲಾಗಿದೆ. ಈ ಕಾಮಗಾರಿ ಈ ವರ್ಷದ ಕೊನೆಗೆ ಮುಗಿಯುವ ನಿರೀಕ್ಷೆಯಿದೆ ಎಂದು ಶಾಸಕರು ತಿಳಿಸಿದರು.

**ಬೃಹತ್ ಧ್ಯಾನಸ್ಥ ಶಿವನ ಪ್ರತಿಮೆ ನಿರ್ಮಾಣ:** ವಿಜಯಪುರದ ಶಿವಗಿರಿಗಿಂತಲೂ ದೊಡ್ಡದಾದ 'ಧ್ಯಾನಸ್ಥ ಶಿವನ ಪ್ರತಿಮೆ'ಯನ್ನು ಸಾರ್ವಜನಿಕರ ಸಹಭಾಗಿತ್ವ ಹಾಗೂ ದೇಣಿಗೆಯೊಂದಿಗೆ ಇಲ್ಲಿ ನಿರ್ಮಿಸಲಾಗುವುದು. ಇದರಿಂದ ಪ್ರವಾಸೋದ್ಯಮಕ್ಕೆ


ಉದಯವಾಹಿನಿ ಚಿತ್ರ

ಹೆಚ್ಚಿನ ಪ್ರೋತ್ಸಾಹ ಸಿಗಲಿದೆ ಎಂದು ಶಾಸಕರು ಹೇಳಿದರು. ಇದೇ ವೇಳೆ ನಾಗರಬೆಟ್ಟ ಹಾಗೂ ಸರೂರ ಬೆಟ್ಟದಲ್ಲೂ ವೃಕ್ಷೋದ್ಯಾನ ಮಾಡಲಾಗುವುದು ಮತ್ತು ಹಡಲಗೇರಿ-ಬಿದರಕುಂದಿ ರಸ್ತೆ ನಿರ್ಮಿಸಲಾಗುವುದು ಎಂದರು.



ಈ ಸಂದರ್ಭದಲ್ಲಿ ಅರಣ್ಯಾಧಿಕಾರಿಗಳಾದ ಬಸನಗೌಡ ಬಿರಾದಾರ, ಗಿರೀಶ ಹಲಕುಡೆ, ಪ್ರಮುಖರಾದ ಯಲಗುರದಪ್ಪ ಗುಬ್ಬಿ, ವಿನಾಯಕ ಭೂಂಬಾಳೆಕರ್, ಹಸಿರು ತೋರಣ ಬಳಗದ ಸದಸ್ಯರು ಹಾಗೂ ಪಟ್ಟಣದ ಗಣ್ಯರು ಉಪಸ್ಥಿತರಿದ್ದರು.

# ಮತದಾರರ ಪಟ್ಟಿ ಪರಿಷ್ಕರಣೆಯಲ್ಲಿ ತಪ್ಪದೇ ಭಾಗವಹಿಸಿ

• **ಉದಯವಾಹಿನಿ ಚಡಚಣ:**

''ಬಿಜೆಪಿ ಸರ್ಕಾರವು ಎಸ್‌ಐಆರ್ ನೆಪದಲ್ಲಿ ಅನೇಕ ಮತದಾರರ ಹೆಸರುಗಳನ್ನು ಕೈಬಿಡುವ ಮೂಲಕ ಉದ್ದೇಶಪೂರ್ವಕವಾಗಿ ಕುತಂತ್ರ ರಾಜಕಾರಣ ಮಾಡುತ್ತಿದೆ,'' ಎಂದು ನಾಗಠಾಣ ಮತಕ್ಷೇತ್ರದ ಶಾಸಕ ವಿಠ್ಠಲ ಕಟಕಧೋಂಡ ಆರೋಪಿಸಿದರು.

ಚಡಚಣ ಪಟ್ಟಣದ ಅಂಜುಮನ್ ಇಸ್ಲಾಂ ಕಮಿಟಿ ಶಾದಿ ಮಹಲ್‌ನಲ್ಲಿ ನಡೆದ ನಾಗಠಾಣ ಮತಕ್ಷೇತ್ರದ ಚಡಚಣ ಬ್ಲಾಕ್ ಕಾಂಗ್ರೆಸ್ ಬಿಎಲ್‌ಎಗಳ ತರಬೇತಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

''ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಡಾ. ಬಾಬಾಸಾಹೇಬ್ ಅಂಬೇಡ್ಕರ್ ಅವರು ಸಂವಿಧಾನದ ಮೂಲಕ ದೇಶದ ಪ್ರತಿಯೊಬ್ಬ ಜನರಿಗೂ ಮತದಾನದ ಹಕ್ಕು ನೀಡಿದ್ದಾರೆ. ಪ್ರಸ್ತುತ ಎಲ್ಲಾ ರಾಜ್ಯಗಳಲ್ಲಿ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ನಡೆಯುತ್ತಿದ್ದು, ಬಿಜೆಪಿ ಕಣ್ಣು ಕರ್ನಾಟಕದ ಮೇಲಿದೆ. ನಮ್ಮ ಕಾರ್ಯಕರ್ತರು ಇದರಲ್ಲಿ ಸಕ್ರಿಯವಾಗಿ ಭಾಗವಹಿಸಿ, ಅರ್ಹ ಮತದಾರರ ಹೆಸರುಗಳು ಪಟ್ಟಿಯಿಂದ ಕೈಬಿಟ್ಟು ಹೋಗದಂತೆ ಜಾಗೃತಿ ವಹಿಸಬೇಕು. ರಾಜಕೀಯ ಕುತಂತ್ರದಿಂದಾಗಿ ಮುಗ್ಧ ಮತದಾರರು ಹಕ್ಕು ವಂಚಿತರಾಗುವ ಸಾಧ್ಯತೆ ಇರುವುದರಿಂದ ನಾವೆಲ್ಲರೂ ಒಟ್ಟಾಗಿ ಜವಾಬ್ದಾರಿಯಿಂದ ಕೆಲಸ ಮಾಡಬೇಕಿದೆ, ಎಂದು ಶಾಸಕರು ಕರೆ ನೀಡಿದರು.ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಲೋಣಿ ಮಾತನಾಡಿ, ವಿಶೇಷ


ಉದಯವಾಹಿನಿ ಚಿತ್ರ

ಮತದಾರರ ಪಟ್ಟಿ ಪರಿಷ್ಕರಣೆ ಕುರಿತು ಕಾಂಗ್ರೆಸ್ ಪಕ್ಷವು ಸಚಿವ ಎಂ. ಬಿ. ಪಾಟೀಲ ಅವರ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಬೃಹತ್ ಸಮಾವೇಶ ನಡೆಸಿ ಜಾಗೃತಿ ಮೂಡಿಸಿದೆ. ಮತದಾರರ ಪಟ್ಟಿ ಪರಿಷ್ಕರಣೆ ನೆಪದಲ್ಲಿ ಬಿಜೆಪಿ ಸರ್ಕಾರ ತನ್ನ ಕುತಂತ್ರವನ್ನು ಮುಂದುವರಿಸಿದೆ. ಇಡೀ ದೇಶದಲ್ಲಿ ಕಾಂಗ್ರೆಸ್ ಪಕ್ಷವನ್ನು ಬಲಪಡಿಸಲು ಇಂತಹ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ. ಕಾಂಗ್ರೆಸ್ ಸರ್ಕಾರವು ಜನರಿಗೆ ಕೊಟ್ಟ ಮಾತಿನಂತೆ ನಡೆದುಕೊಂಡು ಜನಪ್ರಿಯತೆ ಗಳಿಸಿದೆ.

> ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜಾರಿಗೆ ತಂದ ಅನೇಕ ಜನಪರ ಯೋಜನೆಗಳು ಇಂದಿಗೂ ಜನಮಾನಸದಲ್ಲಿವೆ. ಎಸ್‌ಐಆರ್ ಪ್ರಕ್ರಿಯೆಯಲ್ಲಿ ಕೇವಲ ನಕಲಿ ಹೆಸರುಗಳನ್ನು ಮಾತ್ರ ಕೈಬಿಡಬೇಕೇ ಹೊರತು, ಯಾವುದೇ ರೀತಿಯ ಕುತಂತ್ರ ರಾಜಕಾರಣ ಮಾಡಬಾರದು,'' ಎಂದರು.
> -ಶಾಸಕ ವಿಠ್ಠಲ ಕಟಕಧೋಂಡ

# ಮಹಾ ಮಳೆಗೆ ಉಕ್ಕಿ ಹರಿಯುತ್ತಿರುವ ನದಿಗಳು; ಸೇತುವೆಗಳು ಜಲಾವೃತ

## ಕೊಲ್ಹಾಪುರ ಜಿಲ್ಲೆಯಲ್ಲಿರುವ ಪ್ರಖ್ಯಾತ ಪುಣ್ಯಕ್ಷೇತ್ರ ನರಸಿಂಹವಾಡಿಗೆ ಪ್ರವಾಹದ ನೀರು ನುಗ್ಗಿದೆ

• **ಉದಯವಾಹಿನಿ ಚಿಕ್ಕೋಡಿ :**

ಮಹಾರಾಷ್ಟ್ರದ ಪಶ್ಚಿಮ ಘಟ್ಟ ಪ್ರದೇಶಗಳಲ್ಲಿ ವರುಣನ ಅಬ್ಬರ ಮುಂದುವರಿದಿದೆ. ಇದರಿಂದ ಕೃಷ್ಣಾ, ದೂಧಗಂಗಾ, ವೇದಗಂಗಾ ಹಾಗೂ ಘಟಪ್ರಭಾ ನದಿಗಳು ಮೈದುಂಬಿ ಹರಿಯುತ್ತಿದ್ದು, ಚಿಕ್ಕೋಡಿ ಉಪವಿಭಾಗದ ವ್ಯಾಪ್ತಿಯಲ್ಲಿ ಹಲವು ಸೇತುವೆಗಳು ಜಲಾವೃತಗೊಂಡು ಜನಜೀವನ ಅಸ್ತವ್ಯಸ್ತಗೊಂಡಿದೆ.

ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಮಲ್ಲಿಕವಾಡ ಬಳಿ ದೂಧಗಂಗಾ

**1 : 98 ಸಾವಿರ ಕ್ಯೂಸೆಕ್ ನೀರು ಹರಿವು**
**2 : ಅಧಿಕಾರಿಗಳು ಅಲರ್ಟ್ ಆಗಿದ್ದಾರೆ**
**3 : ಕುಡಿಯುವ ನೀರು ಮತ್ತು ಕೃಷಿ**

ನದಿಗೆ ಅಡ್ಡಲಾಗಿ ನಿರ್ಮಿಸಲಾಗಿರುವ ಮಲ್ಲಿಕವಾಡ-ದತ್ತವಾಡ ಸಂಪರ್ಕಿಸುವ ಸೇತುವೆ ಸಂಪೂರ್ಣವಾಗಿ ಮುಳುಗಡೆಯಾಗಿದೆ. ದೂಧಗಂಗಾ, ವೇದಗಂಗಾ, ಕೃಷ್ಣಾ ಮತ್ತು ಘಟಪ್ರಭಾ ನದಿಗಳ ಅಬ್ಬರಕ್ಕೆ ಜಿಲ್ಲೆಯ ಹಲವು ಕೆಳಹಂತದ ಸೇತುವೆಗಳ ಮೇಲೆ ನೀರು ಹರಿಯುತ್ತಿದ್ದು, ವಾಹನ ಸಂಚಾರ ಕಡಿತಗೊಂಡಿದೆ.

ಮತ್ತೊಂದೆಡೆ, ಮಹಾರಾಷ್ಟ್ರದ ಕೊಲ್ಹಾಪುರ ಜಿಲ್ಲೆಯಲ್ಲಿರುವ ಪ್ರಖ್ಯಾತ ಪುಣ್ಯಕ್ಷೇತ್ರ ನರಸಿಂಹವಾಡಿಗೆ ಪ್ರವಾಹದ ನೀರು ನುಗ್ಗಿದೆ. ಕೃಷ್ಣಾ ಹಾಗೂ ಪಂಚಗಂಗಾ ನದಿಗಳ ಸಂಗಮ ಸ್ಥಳವಾದ ನರಸಿಂಹವಾಡಿಯ ಪ್ರಖ್ಯಾತ ದತ್ತ ಮಂದಿರವನ್ನು



ಉದಯವಾಹಿನಿ ಚಿತ್ರ

ನದಿ ನೀರು ಆವರಿಸಿಕೊಂಡಿದೆ. ಎರಡೂ ನದಿಗಳ ನೀರಿನ ಮಟ್ಟದಲ್ಲಿ ದಿಢೀರ್ ಏರಿಕೆಯಾಗಿರುವುದರಿಂದ ಮಂದಿರದ ಆವರಣ ಜಲಾವೃತಗೊಂಡಿದ್ದು, ಭಕ್ತರಿಗೆ ದರ್ಶನ ಪಡೆಯಲು ಅಡಚಣೆಯಾಗಿದೆ. ನೀರಿನ ಮಧ್ಯದಲ್ಲಿಯೇ ಭಕ್ತರು ದೇವರ ದರ್ಶನ ಪಡೆಯುತ್ತಿದ್ದಾರೆ.

ಗಮನಾರ್ಹ ಸಂಗತಿಯೆಂದರೆ, ಮಹಾರಾಷ್ಟ್ರದ ಯಾವುದೇ ಜಲಾಶಯದಿಂದಲೂ ಈವರೆಗೆ ನದಿಗಳಿಗೆ ನೀರು ಹರಿಬಿಟ್ಟಿಲ್ಲ. ಕೇವಲ ಪಶ್ಚಿಮ ಘಟ್ಟ ಪ್ರದೇಶದಲ್ಲಿ ಸುರಿಯುತ್ತಿರುವ ಭಾರಿ ಮಳೆಯ ನೀರು ಮಾತ್ರ ಕೃಷ್ಣಾ ಹಾಗೂ ಉಪನದಿಗಳಿಗೆ ಹರಿದು ಬರುತ್ತಿದೆ. ಇದರಿಂದಾಗಿಯೇ ವೇದಗಂಗಾ, ದೂಧಗಂಗಾ ಮತ್ತು ಕೃಷ್ಣಾ ನದಿಗಳ ಒಳಹರಿವಿನಲ್ಲಿ ಭಾರಿ ಪ್ರಮಾಣದ ಹೆಚ್ಚಳವಾಗಿದೆ. ಚಿಕ್ಕೋಡಿ ತಾಲೂಕಿನ ಕಲ್ಲೋಳ ಬಳಿ ಕೃಷ್ಣಾ ನದಿಯಲ್ಲಿ ಬರೋಬ್ಬರಿ 98 ಸಾವಿರ ಕ್ಯೂಸೆಕ್‌ನಷ್ಟು ನೀರು ಹರಿದು ಬರುತ್ತಿದೆ. ನದಿಗಳ ಒಳಹರಿವು ಕ್ಷಣಕ್ಷಣಕ್ಕೂ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ನದಿಪಾತ್ರದ ಜನರಲ್ಲಿ ಆತಂಕ ಮನೆಮಾಡಿದ್ದು, ಮುನ್ನೆಚ್ಚರಿಕಾ ಕ್ರಮವಾಗಿ ನದಿ ತೀರಕ್ಕೆ ತೆರಳದಂತೆ ಆಡಳಿತ ಮಂಡಳಿ ಎಚ್ಚರಿಕೆ ನೀಡಿದೆ ಬೆಳಗಾವಿಯಲ್ಲಿ ಆರ್‌ಎಸ್‌ಎಸ್ ಬೈಠಕ್ ನಡೆಯುತ್ತಿರುವ ವಿಚಾರದ ಕುರಿತು ಮಾತನಾಡಿ, ಕಾರ್ಯಕ್ರಮ ಮಾಡಲಿ, ಮಾಡಲಿಕ್ಕೆ ಏನೂ ಇಲ್ಲ. ಆರ್‌ಎಸ್‌ಎಸ್‌ಗೆ ಏನು ಬೇಕು ಅದನ್ನು ಪೊಲೀಸರು, ಜಿಲ್ಲಾಧಿಕಾರಿ ವ್ಯವಸ್ಥೆ ಮಾಡಿದ್ದಾರೆ. ರಾಜ್ಯ ಸರ್ಕಾರದಿಂದ ಆಗುವ ಎಲ್ಲಾ ವ್ಯವಸ್ಥೆಯನ್ನು ಮಾಡಿದ್ದಾರೆ. ಕಾರ್ಯಕ್ರಮ ಹೇಗೆ ಮಾಡುತ್ತಾರೆ ಎನ್ನುವುದು ಅವರಿಗೆ ಬಿಟ್ಟಿದ್ದು ಎಂದರು..

ಹಾವೇರಿಯಲ್ಲಿ ಮೋಡ ಬಿತ್ತನೆ ಮಾಡಿದ್ದೇವೆ. ಹೆಚ್ಚಿನ ಮಳೆ ಆಗಿದೆ ಎಂದು ಅಲ್ಲಿನ ಜನ ಹೇಳುತ್ತಿದ್ದಾರೆ. ಮುಂದಿನ ದಿನಗಳಲ್ಲಿ ರಾಜ್ಯದಲ್ಲಿ ಮೋಡ ಬಿತ್ತನೆ ಮಾಡುವುದಕ್ಕೆ ಮುಖ್ಯಮಂತ್ರಿಗಳಿಗೆ ಒತ್ತಾಯ ಮಾಡುತ್ತೇನೆ ಎಂದರು.

**ಅರಣ್ಯ ಇಲಾಖೆ ಅಧಿಕಾರಿಗಳು ಅಲರ್ಟ್**

ನದಿ ಪಾತ್ರ, ಜಲಪಾತಗಳ ಸುತ್ತಮುತ್ತ ಈಗಾಗಲೇ ಬ್ಯಾರಿಕೇಡ್ ಹಾಕಿ ಪೊಲೀಸರು ಮುಂಜಾಗ್ರತಾ ಕ್ರಮ ಕೈಗೊಂಡಿದ್ದಾರೆ. ಅರಣ್ಯ ಇಲಾಖೆ ಅಧಿಕಾರಿಗಳು ಅಲರ್ಟ್ ಆಗಿದ್ದಾರೆ. ಇನ್ನೂ ನಾಲ್ಕೈದು ದಿನ ಮಳೆ ಇದೆ ಎಂದು ಅಂದಾಜಿದೆ. ಮೂರು ನಾಲ್ಕು ತಿಂಗಳು ದಾಟುತ್ತೇವೆ ಎಂದು ಹೇಳಿದರು.

> ಬರಗಾಲ ಬರಬಹುದು, ಕುಡಿಯುವ ನೀರು ಮತ್ತು ಕೃಷಿ ಚಟುವಟಿಕೆಗಳಿಗೆ ಬಹಳ ದೊಡ್ಡ ಸಮಸ್ಯೆ ಆಗುತ್ತದೆ ಅಂತಾ ಇತ್ತು. ಆದರೆ, ಎರಡ್ಮೂರು ದಿನಗಳಲ್ಲಿ ಮಳೆ ದಿಕ್ಕನ್ನೆ ಬದಲಿಸಿದೆ. ಕರ್ನಾಟಕಕ್ಕೆ ಸಂತೋಷದ ವಾತಾವರಣ ನಿರ್ಮಾಣ ಆಗಿದೆ ಎಂದು ಹೇಳಿದರು.

> ಆರ್‌ಎಸ್‌ಎಸ್ ಪಥಸಂಚಲನಕ್ಕೆ ಪೊಲೀಸರ ಅನುಮತಿ ಕಡ್ಡಾಯ ಹೇಳಿಕೆಗೆ ಪ್ರತಿಕ್ರಿಯಿಸಿದ ಅವರು, ಇದು ಪ್ರಿಯಾಂಕ್ ಖರ್ಗೆ ಅವರ ಇಲಾಖೆಗೆ ಸಂಬಂಧಪಟ್ಟಿದ್ದು, ಯಾವ ರೀತಿ ಅನುಮತಿ ಪಡೆಯಬೇಕು, ಹೇಗೆ ಇರಬೇಕು? ಎನ್ನುವುದು ಅವರಿಗೆ ಬಿಟ್ಟ ವಿಚಾರ. ಗೃಹ ಸಚಿವರಿದ್ದಾರೆ, ಅವರೇ ಅದನ್ನು ನಿರ್ವಹಣೆ ಮಾಡುತ್ತಾರೆ ಎಂದು ಸ್ಪಷ್ಟಪಡಿಸಿದರು.
> - ಸಚಿವ ಸತೀಶ್ ಜಾರಕಿಹೊಳಿ



## ಮಿನಿ ನ್ಯೂಸ್

### ಗೃಹ ಜ್ಯೋತಿ ಯೋಜನೆ ದಾಖಲೆಗಳ ಪರಿಶೀಲನೆ ಪರಿಸರ ಸಂರಕ್ಷಣೆಗೆ ಮುಂದಾಗಬೇಕು

• **ಉದಯವಾಹಿನಿ ಸೈದಾಪುರ:**

ಗೃಹ ಜ್ಯೋತಿ ಯೋಜನೆಯ ಫಲಾನುಭವಿಗಳ ದಾಖಲೆಗಳ ಪರಿಶೀಲನೆ ಕಾರ್ಯ ನಡೆಯಿತು. ಯೋಜನೆಯಡಿ ವಿದ್ಯುತ್ ಉಚಿತ ಸೌಲಭ್ಯ ಪಡೆಯುತ್ತಿರುವ ಫಲಾನುಭವಿಗಳ ಅರ್ಜಿಗಳು, ಆಧಾರ್ ಕಾರ್ಡ್, ವಿದ್ಯುತ್ ಬಿಲ್, ಪಡಿತರ ಚೀಟಿ ಸೇರಿದಂತೆ ಅಗತ್ಯ ದಾಖಲೆಗಳನ್ನು ಅಧಿಕಾರಿಗಳು ಪರಿಶೀಲಿಸಿದರು. ದಾಖಲೆಗಳಲ್ಲಿ ಕಂಡುಬಂದ ಸಣ್ಣಪುಟ್ಟ ಲೋಪಗಳನ್ನು ಸರಿಪಡಿಸಿಕೊಳ್ಳುವಂತೆ ಫಲಾನುಭವಿಗಳಿಗೆ ಸೂಚನೆ ನೀಡಲಾಯಿತು. ಈ ಸಂದರ್ಭದಲ್ಲಿ ಶಾಖ ಅಧಿಕಾರಿ ಮಲ್ಲಪ್ಪ ಪೂಜಾರಿ ಮಾತನಾಡಿ, ಪರಿಶೀಲನೆ ಸಂದರ್ಭದಲ್ಲಿ ಅರ್ಹ ಫಲಾನುಭವಿಗಳು ಅಗತ್ಯ ದಾಖಲೆಗಳನ್ನು ಕಡ್ಡಾಯವಾಗಿ ಸಲ್ಲಿಸುವಂತೆ ಮನವಿ ಮಾಡಿದರು. ಸರ್ಕಾರದ ನಿರ್ದೇಶನದಂತೆ ಈ ಪರಿಶೀಲನಾ ಕಾರ್ಯ ಕೈಗೊಳ್ಳಲಾಗಿದೆ ಎಂದು ಹೇಳಿದರು. ವಿದ್ಯುತ್ ಮಾಪನ ಸಿಬ್ಬಂದಿ ಆಲಂ ಪಾಷಾ, ಹಿರಿಯ ಸಹಾಯಕ ಸಿಬ್ಬಂದಿ ಬಾಲಕೃಷ್ಣ, ಅರ್ಜುನ್ ಚೌಹಾಣ್ ಸೇರಿದಂತೆ ಇತರರಿದ್ದರು.

### ಬೈಕ್ ಸ್ಕಿಡ್ ಆಗಿ ವಿದ್ಯಾರ್ಥಿ ಸ್ಥಳದಲ್ಲೇ ಮೃತ್ಯು, ಮತ್ತೋರ್ವನಿಗೆ ಗಾಯ

• **ಉದಯವಾಹಿನಿ ಬೆಳ್ತಂಗಡಿ:**

ಬೈಕ್ ಸ್ಕಿಡ್ ಆಗಿ ವಿದ್ಯಾರ್ಥಿಯೊಬ್ಬ ಸ್ಥಳದಲ್ಲೇ ಸಾವನ್ನಪ್ಪಿ ,ಮತ್ತೊಬ್ಬ ಗಾಯಗೊಂಡ ಘಟನೆ ಲಾಯಿಲ ಜಂಕ್ಷನ್ ಬಳಿ ರಾಷ್ಟ್ರೀಯ ಹೆದ್ದಾರಿಯಲ್ಲಿ ಸೋಮವಾರ ರಾತ್ರಿ ನಡೆದಿದ. ಮಂಗಳೂರಿನ ಕಾಲೇಜೊಂದರ ನಾಲ್ಕು ಮಂದಿ ವಿದ್ಯಾರ್ಥಿಗಳು ಕೊಟ್ಟಿಗೆಹಾರ ಸಮೀಪದ ದೇವರ ಮನೆಗೆ ಹೋಗಿದ್ದು ಅಲ್ಲಿಂದ ಸಂಜೆ ಹಿಂತಿರುಗುತಿದ್ದ ವೇಳೆ ಲಾಯಿಲ ಬಳಿ ಹೆದ್ದಾರಿಯಲ್ಲಿ ಬೈಕ್ ಸ್ಕಿಡ್ ಆಗಿ ಬಿದ್ದ ಪರಿಣಾಮ ಬೈಕಿನ ಹಿಂಬದಿ ಸವಾರ ಪ್ಯಾರಾ ಮೆಡಿಕಲ್ ವಿದ್ಯಾರ್ಥಿ ಮಂಗಳೂರು ನಿವಾಸಿ ಧೀರಜ್ (23) ಸ್ಥಳದಲ್ಲೇ ಸಾವನ್ನಪ್ಪಿದ್ದು , ಸವಾರ ಗಾಯಗೊಂಡಿದ್ದಾರೆ. ಮೇಲ್ನೋಟಕ್ಕೆ ಹೆದ್ದಾರಿಯಲ್ಲಿದ್ದ ಗುಂಡಿಗೆ ಬಿದ್ದು, ಬೈಕ್ ಪಲ್ಟಿಯಾದ ವೇಳೆ ನೀರಿನ ಟ್ಯಾಂಕರೊಂದು ಈ ವೇಳೆ ಸಂಚರಿಸುತ್ತಿದ್ದು ಇದರ ಟಯರ್ ಧೀರಜ್ ಮೇಲೆ ಹಾದು ಹೋಗಿರುವ ಬಗ್ಗೆ ಸಹ ವಿದ್ಯಾರ್ಥಿಗಳು ಅನುಮಾನ ವ್ಯಕ್ತಪಡಿಸಿದ್ದಾರೆ. ಅದಲ್ಲದೇ ರಾಷ್ಟ್ರೀಯ ಹೆದ್ದಾರಿಯ ಅವೈಜ್ಞಾನಿಕ ಕಾಮಗಾರಿಯೂ ಈ ಅವಘಡಕ್ಕೆ ಕಾರಣ ಸರಿಯಾದ ಸೂಚನಾ ಫಲಕಗಳನ್ನು ಅಳವಡಿಸದೇ ಅಲ್ಲಲ್ಲಿ ಗುಂಡಿ ಇರುವುದು ಕೂಡ ಇಂತಹ ಘಟನೆಗಳಿಗೆ ಕಾರಣ ಎಂಬ ಬಗ್ಗೆಯೂ ಸಾರ್ವಜನಿಕರು ಆರೋಪ ಮಾಡುತಿದ್ದಾರೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು, ತನಿಖೆ ನಡೆಸುತ್ತಿದ್ದಾರೆ.

### ಶಾಸಕ ಚವ್ಹಾಣ ಜನ್ಮದಿನ ಗಮನ ಸೆಳೆದ ನಾಣ್ಯದ ಹಾರ



• **ಉದಯವಾಹಿನಿ ಔರಾದ::**

ಶಾಸಕ ಪ್ರಭು ಬಿ. ಚವ್ಹಾಣ ಅವರ 57ನೇ ಜನ್ಮದಿನದ ಅಂಗವಾಗಿ ನಡೆದ ಸಂಭ್ರಮಾಚರಣೆಯಲ್ಲಿ ಕಾರ್ಯಕರ್ತರು ಹಾಕಿದ ವಿಶೇಷ ನಾಣ್ಯದ ಹಾರ ಎಲ್ಲರ ಗಮನ ಸೆಳೆಯಿತು.

ಜನ್ಮದಿನದ ಶುಭಾಶಯ ಕೋರಲು ಆಗಮಿಸಿದ್ದ ಅಪಾರ ಸಂಖ್ಯೆಯ ಅಭಿಮಾನಿಗಳು ಹಾಗೂ ಬೆಂಬಲಿಗರು ಶಾಸಕ ಪ್ರಭು ಚವ್ಹಾಣ ಅವರಿಗೆ ಶುಭಾಶಯ ಕೋರಿದರು. ಅದರಲ್ಲಿ ಯುವ ಮುಖಂಡ ಆನಂದ ಪಿ.ದ್ಯಾಡೆ ಅವರು ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನಿಂದ ವಿಶೇಷವಾಗಿ ನಾಣ್ಯಗಳಿಂದ ತಯಾರಿಸಲಾದ ವಿಶೇಷ ಹಾರವನ್ನು ಹಾಕಿ ಗೌರವ ಸಲ್ಲಿಸಿದರು.

ಜನ್ಮದಿನದ ಅಂಗವಾಗಿ ವಿವಿಧ ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿತ್ತು. ಬೆಳಿಗ್ಗೆ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಆಸ್ಪತ್ರೆಯ ರೋಗಿಗಳಿಗೆ ಹಣ್ಣು ವಿತರಣೆ ಸೇರಿದಂತೆ ಹಲವು ಸೇವಾ ಕಾರ್ಯಕ್ರಮಗಳು ನಡೆದವು. ಕಾರ್ಯಕರ್ತರು ಸಿಹಿ ಹಂಚಿ ಸಂಭ್ರಮಾಚರಣೆ ನಡೆಸಿ, ಶಾಸಕ ಚವ್ಹಾಣ ಅವರ ದೀರ್ಘಾಯುಷ್ಯ ಹಾಗೂ ಉತ್ತಮ ಆರೋಗ್ಯಕ್ಕಾಗಿ ಶುಭ ಹಾರೈಸಿದರು.

### ಪೆರ್ಡೂರು ಸಂಜೀವಿನಿ ಒಕ್ಕೂಟದಲ್ಲಿ 23 ಲಕ್ಷ ವಂಚನೆ: ದಂಪತಿ ಬಂಧನ

• **ಉದಯವಾಹಿನಿ ಉಡುಪಿ,:**

ಹಿರಿಯಡಕ ಪೊಲೀಸ್ ಠಾಣಾ ವ್ಯಾಪ್ತಿಯ ಪೆರ್ಡೂರು ಪದ್ಮ ಕಮಲ ಸಂಜೀವಿನಿ ಗ್ರಾಮ ಪಂಚಾಯತಿ ಮಟ್ಟದ ಒಕ್ಕೂಟ(ರಿ)ದಲ್ಲಿ 23 ಲಕ್ಷ ಹಣ ದುರ್ಬಳಕೆ ಹಾಗೂ ವಂಚನೆ ನಡೆಸಿದ ಆರೋಪದಡಿ ಇಬ್ಬರನ್ನು ಹಿರಿಯಡಕ ಪೊಲೀಸರು ಬಂಧಿಸಿದ್ದಾರೆ.

ಬಂಧಿತರನ್ನು ಒಕ್ಕೂಟದ ಮುಖ್ಯ ಪುಸ್ತಕ ಬರಹಗಾರರಾಗಿದ್ದ ಸುಗಂಧಿ ಹಾಗೂ ಅವರ ಪತಿ ಸಂತೋಷ ಎಂದು ಗುರುತಿಸಲಾಗಿದೆ. ಪೊಲೀಸರ ಮಾಹಿತಿ ಪ್ರಕಾರ, ಸುಗಂಧಿ ಅವರು 2023ರಿಂದ 2025ರವರೆಗೆ ಸಾಲ ಮರುಪಾವತಿ ಮೊತ್ತವನ್ನು ರಿಜಿಸ್ಟರ್‌ನಲ್ಲಿ ದಾಖಲಿಸಿ, ಅದನ್ನು ಒಕ್ಕೂಟದ ಬ್ಯಾಂಕ್ ಖಾತೆಗೆ ಜಮೆ ಮಾಡದೆ ದುರ್ಬಳಕೆ ಮಾಡಿರುವ ಆರೋಪ ಇದೆ. ವಿವಿಧ ಸಂಘಗಳ ಹೆಸರಿನಲ್ಲಿ ಒಕ್ಕೂಟದ ಚೆಕ್‌ಗಳಿಗೆ ಅಧ್ಯಕ್ಷರು ಮತ್ತು ಕಾರ್ಯದರ್ಶಿಯ ನಕಲಿ ಸಹಿಗಳನ್ನು ಮಾಡಿ ಬ್ಯಾಂಕ್‌ನಿಂದ ಹಣ ಪಡೆದಿರುವುದು ತನಿಖೆಯಲ್ಲಿ ಬೆಳಕಿಗೆ ಬಂದಿದೆ. ಇದಲ್ಲದೆ, ಲೆಕ್ಕಪರಿಶೋಧನೆ ವೇಳೆ ಅನುಮಾನ ಮೂಡದಂತೆ ಬೇರೆ ಸದಸ್ಯರಿಗೆ ತೋರಿಸಲು ಪ್ರತ್ಯೇಕ ಸಾಲದ ಖಾತೆ ಪುಸ್ತಕಗಳನ್ನು ಸಿದ್ಧಪಡಿಸಿ, ಕಾರ್ಯಕಾರಿ ಸಮಿತಿಗೂ ವಂಚನೆ ಎಸಗುವ ರೀತಿಯಲ್ಲಿ ಬೇರೆ ಬೇರೆ ದಾಖಲೆಗಳನ್ನು ನಿರ್ವಹಿಸಿದ್ದರೆಂದು ಆರೋಪಿಸಲಾಗಿದೆ. ಈ ಮೂಲಕ ಒಟ್ಟು 23 ಲಕ್ಷ ಹಣವನ್ನು ಸ್ವಂತ ಬಳಕೆಗೆ ದುರ್ಬಳಕೆ ಮಾಡಿಕೊಂಡಿರುವುದಾಗಿ ಪ್ರಕರಣದಲ್ಲಿ ಉಲ್ಲೇಖಿಸಲಾಗಿದೆ.

### ವಿದ್ಯುತ್ ತಂತಿಯ ಕಿಡಿ ತಗುಲಿ ಹುಲ್ಲಿನ ಬಣವೆ ಭಸ್ಮ

• **ಉದಯವಾಹಿನಿ ಸಿರುಗುಪ್ಪ:-**

ತಾಲ್ಲೂಕಿನ ಕರೂರು ಗ್ರಾಮದ ಅಗಸರ ದ್ಯಾವಪ್ಪ ಸರ್ಕಾರಿ ಪ್ರೌಢಶಾಲೆ ಹತ್ತಿರ ಅಗಸರ ಚೆನ್ನಬಸವ ಎನ್ನುವ ರೈತನಿಗೆ ಸೇರಿದ ಹುಲ್ಲಿನ ಬಣವೆಗೆ ಪಕ್ಕದಲ್ಲಿ ಹಾದು ಹೋಗಿದ್ದ ವಿದ್ಯುತ್ ತಂತಿಯ ಸ್ಪರ್ಶದಿಂದ ಉಂಟಾದ ಕಿಡಿಯಿಂದ ಬೆಂಕಿ ತಗುಲಿ ಸುಮಾರು 20 ಎಕರೆಯ ಹುಲ್ಲಿನ ಬಣವೆ ಸುಟ್ಟು ಹೋದ ಘಟನೆ ನಡೆದಿದೆ.

ಸ್ಥಳಕ್ಕೆ ಆಗಮಿಸಿದ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿಯನ್ನು ನಂದಿಸುವ ಕಾರ್ಯ ಮಾಡಿದರು, ಗಾಳಿಯ ರಭಸ ಹೆಚ್ಚಾಗಿದ್ದರಿಂದ ಬಣವೆ ಸಂಪೂರ್ಣವಾಗಿ ಸುಟ್ಟು ಹೋಗಿದೆ.ದನ ಕರುಗಳ ಮೇವಿಗಾಗಿ 20 ಎಕರೆಯ ಭತ್ತದ ಹುಲ್ಲನ್ನು ಸಂಗ್ರಹಿಸಲಾಗಿತ್ತು .

